ಸಂಪುಟ: 06 ಸಂಚಿಕೆ: 155 ಪುಟಗಳು: 08 ಸೋಮವಾರ 17 ಆಗಸ್ಟ್ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ಆತ್ಮವಿಶ್ವಾಸವೊಂದಿದ್ದರೆ ಆಯಾಸವಿಲ್ಲದೇ ಕೊನೆಯವರೆಗೂ ಪಯಣಿಸಬಹುದು. ವಿಶ್ವಾಸದ ಕೊರತೆಯಿಂದ ಪ್ರಯಾಣ ಅರ್ಧಕ್ಕೆ ನಿಲ್ಲಬಹುದು. ವಿಶ್ವಾಸವೇ ಇಂಧನವಾಗಲಿ!

## ಅಸಾಧಾರಣ ರಾಜನೀತಿಜ್ಞ: ಮಾಜಿ ಪ್ರಧಾನಿ ವಾಜಪೇಯಿ ಪುಣ್ಯತಿಥಿ; ಮೋದಿ ಪುಷ್ಪ ನಮನ

• ಉದಯವಾಹಿನಿ, ನವದೆಹಲಿ

ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಪುಣ್ಯತಿಥಿ. ಪ್ರಧಾನಿ ನರೇಂದ್ರ ಮೋದಿ ಅವರು ಬೆಳಿಗ್ಗೆ ನವದೆಹಲಿಯ 'ಸದೈವ್ ಅಟಲ್' ಸ್ಮಾರಕಕ್ಕೆ ಭೇಟಿ ನೀಡಿ ಪುಷ್ಪ ನಮನ ಸಲ್ಲಿಸಿದರು. 'ಅಟಲ್‌ಜಿ ಅವರೊಬ್ಬ ಅಸಾಧಾರಣ ರಾಜನೀತಿಜ್ಞರಾಗಿದ್ದರು. ದೇಶ ಸೇವೆಗೆ ತಮ್ಮ ಜೀವನವನ್ನೇ ಮುಡಿಪಾಗಿಟ್ಟವರು. ಅವರ ಮಾತುಗಳು ಮತ್ತು ಪ್ರಯತ್ನಗಳು ಪೀಳಿಗೆಗೆ ಸ್ಫೂರ್ತಿ ನೀಡಿವೆ. ಅವರ ನಾಯಕತ್ವ ನಮ್ಮ ದೇಶವನ್ನು ಬಲಪಡಿಸಿತು. ಉತ್ತಮ ಆಡಳಿತ ಮತ್ತು ಸಾರ್ವಜನಿಕ ಕಲ್ಯಾಣಕ್ಕಾಗಿ ನೀಡಿದ ಪ್ರಾಮುಖ್ಯತೆ ನಮಗೆ ಯಾವಾಗಲೂ ಮಾರ್ಗದರ್ಶನ ನೀಡುತ್ತದೆ' ಎಂದು ಮೋದಿ ಸಾಮಾಜಿಕ ಮಾಧ್ಯಮ ಎಕ್ಸ್ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಉಪ ರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ವಾಜಪೇಯಿ ಅವರನ್ನು ಸ್ಮರಿಸಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ, ವಾಜಪೇಯಿ ರಾಷ್ಟ್ರ ಸೇವೆಗೆ ತಮ್ಮ ಜೀವನವನ್ನು ಮುಡಿಪಾಗಿಟ್ಟ ದೇಶಭಕ್ತ ಮತ್ತು ರಾಜಕಾರಣಿ ಎಂದು ಬಣ್ಣಿಸಿದ್ದಾರೆ. ಎಕ್ಸ್ ಪೋಸ್ಟ್‌ನಲ್ಲಿ ಅವರು,



**ಮೌಲ್ಯಾಧಾರಿತ ರಾಜಕೀಯವು ಅಂತ್ಯೋದಯ**

**ಅಟಲ್ ಜಿ ತಮ್ಮ ಜೀವನದ ಪ್ರತಿ ಕ್ಷಣವನ್ನೂ ರಾಷ್ಟ್ರ ಸೇವೆಗೆ ಮೀಸಲಿಟ್ಟ ದೇಶಭಕ್ತ ರಾಜಕಾರಣಿಯಾಗಿದ್ದರು. ಒಂದೆಡೆ, ಪರಮಾಣು ಪರೀಕ್ಷೆ ಮತ್ತು ಕಾರ್ಗಿಲ್ ಯುದ್ಧದ ಮೂಲಕ ಅವರು ಭಾರತದ ಶಕ್ತಿಯನ್ನು ಇಡೀ ಜಗತ್ತಿಗೆ ತೋರಿಸಿದರೆ ಮತ್ತೊಂದೆಡೆ, ಅವರ ಮೌಲ್ಯಾಧಾರಿತ ರಾಜಕೀಯವು ಅಂತ್ಯೋದಯ, ಉತ್ತಮ ಆಡಳಿತದ ದೃಷ್ಟಿಕೋನವನ್ನು ಮೊದಲ ಬಾರಿಗೆ ಪರಿಚಯಿಸಿತು' ಎಂದು ಸ್ಮರಿಸಿದ್ದಾರೆ. ಅಟಲ್ ಜಿ ಅವರ ಶ್ರೇಷ್ಠ ವ್ಯಕ್ತಿತ್ವ ಮತ್ತು ನಾಯಕತ್ವ ಪ್ರತಿ ಬಿಜೆಪಿ ಕಾರ್ಯಕರ್ತನನ್ನು ರಾಷ್ಟ್ರ ನಿರ್ಮಾಣದೆಡೆಗೆ ಶಾಶ್ವತವಾಗಿ ಪ್ರೇರೇಪಿಸುತ್ತದೆ ಎಂದು ಶಾ ಉಲ್ಲೇಖಿಸಿದ್ದಾರೆ.**

'ಮಾಜಿ ಪ್ರಧಾನಿ ಮತ್ತು ಬಿಜೆಪಿಯ ಸಂಸ್ಥಾಪಕ, ಭಾರತ ರತ್ನ, ಪೂಜ್ಯ ಅಟಲ್ ಬಿಹಾರಿ ವಾಜಪೇಯಿ ಜಿ ಅವರ ಪುಣ್ಯತಿಥಿಯಂದು ನಾನು ಅವರಿಗೆ ಗೌರವ ಸಲ್ಲಿಸುತ್ತೇನೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ವಾಜಪೇಯಿ ಅವರಿಗೆ ಗೌರವಾರ್ಪಣೆ ಮಾಡಿದ್ದು, ಭಾರತೀಯ ಪ್ರಜಾಪ್ರಭುತ್ವ ಮತ್ತು ರಾಷ್ಟ್ರೀಯ ಅಭಿವೃದ್ಧಿಗೆ ಅವರು ನೀಡಿದ ಕೊಡುಗೆಯನ್ನು ಸ್ಮರಿಸಿದ್ದಾರೆ. 'ಪೂಜ್ಯ ಅಟಲ್ ಬಿಹಾರಿ ವಾಜಪೇಯಿ ಜಿ ಅವರ ಪುಣ್ಯತಿಥಿಯಂದು ನಾನು ಅವರಿಗೆ ಲಕ್ಷಾಂತರ ನಮನಗಳು ಮತ್ತು ಗೌರವಗಳನ್ನು ಸಲ್ಲಿಸುತ್ತೇನೆ' ಎಂದು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ದೇಶ ಕಂಡ ಧೀಮಂತ ನಾಯಕ, ಕವಿ, ಅತ್ಯುತ್ತಮ ವಾಗ್ಮಿ ಅಟಲ್ ಬಿಹಾರಿ ವಾಜಪೇಯಿ ಅವರು 2018ರ ಆಗಸ್ಟ್ 16 ರಂದು ತಮ್ಮ 93ನೇ ವಯಸ್ಸಿನಲ್ಲಿ ಕೊನೆಯುಸಿರೆಳೆದಿದ್ದರು.

**ಅಮಿತ್ ಶಾ ಅವರಿಗೆ ತಿರುಗೇಟು ನೀಡಿರುವ ಕಾಂಗ್ರೆಸ್, ಬಿಜೆಪಿಯ ಸುಳ್ಳುಗಳನ್ನು ಸಾರ್ವಜನಿಕ ಸಭೆಯಲ್ಲಿ ಬಹಿರಂಗವಾಗಿ ಹೇಳುತ್ತಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ನಾಚಿಕೆಯಾಗಬೇಕು ಎಂದು ಹರಿಹಾಯ್ದಿದೆ. ಈ ಕುರಿತು ಮಾತನಾಡಿರುವ ಕಾಂಗ್ರೆಸ್ ವಕ್ತಾರ ಉದಿತ್ ರಾಜ್, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಅನಾರೋಗ್ಯಕ್ಕೆ ಸ್ಪಂದಿಸಿ, ಅವರಿಗಾಗಿ ಕುರ್ಚಿ ತರುವಂತೆ ಸೋನಿಯಾಗಾಂಧಿ ಹೇಳಿದ್ದನ್ನೇ, ಬಿಜೆಪಿ ವಂದೇ ಮಾತರಂ ಗೀತೆಯನ್ನು ತಡೆದರು ಎಂದು ಸುಳ್ಳು ಹೇಳುತ್ತಿದೆ ಎಂದು ಕಿಡಿಕಾರಿದ್ದಾರೆ. ಆರ್‌ಎಸ್‌ಎಸ್ ಸ್ವಾತಂತ್ರ್ಯ ಬಂದು 52 ವರ್ಷಗಳ ಕಾಲ ತನ್ನ ಕಚೇರಿಯಲ್ಲಿ ರಾಷ್ಟ್ರಧ್ವಜವನ್ನು ಹಾರಿಸಲಿಲ್ಲ. ಅದಕ್ಕಾಗಿ ಅಮಿತ್ ಶಾ ಯಾವಾಗ ಕ್ಷಮೆ ಯಾಚಿಸುತ್ತಾರೆ? ಅವರು ರಾಷ್ಟ್ರಧ್ವಜವನ್ನು ಒಪ್ಪಿಕೊಳ್ಳಲಿಲ್ಲ, ಬದಲಿಗೆ ಅದು ಕೇಸರಿ ಬಣ್ಣದ್ದಾಗಿರಬೇಕು ಎಂದು ಪಟ್ಟು ಹಿಡಿದಿದ್ದರು. ಅದಕ್ಕಾಗಿ ಅವರು ಯಾವಾಗ ಕ್ಷಮೆ ಕೇಳುತ್ತಾರೆ? ಎಂದು ಉದಿತ್ ರಾಜ್ ಖಾರವಾಗಿ ಪ್ರಶ್ನಿಸಿದ್ದಾರೆ.**

# ಕೈ ವಿರುದ್ಧ ಶಾ ಟೀಕಾಸ್ತ್ರ






### ವಂದೇ ಮಾತರಂಗೆ ಅವಮಾನಿಸಿದ್ದಕ್ಕಾಗಿ ಕಾಂಗ್ರೆಸ್ ಕ್ಷಮೆಯಾಚಿಸಬೇಕು

• ಉದಯವಾಹಿನಿ, ಜೈಪುರ

ರಾಷ್ಟ್ರೀಯ ಗೀತೆ 'ವಂದೇ ಮಾತರಂಗೆ ಕಾಂಗ್ರೆಸ್ ಅವಮಾನಿಸಿದೆ. ಹೀಗಾಗಿ, ಜನರು ಮತ್ತು ಹಾಡು ಬರೆದ ಲೇಖಕ ಬಂಕಿಮ್ ಚಂದ್ರ ಚಟ್ಟೋಪಾಧ್ಯಾಯ ಅವರಲ್ಲಿ ಕ್ಷಮೆಯಾಚಿಸಬೇಕು ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಒತ್ತಾಯಿಸಿದರು.

ಚಿತ್ತೋರ್‌ಗಢದಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಕಾಂಗ್ರೆಸ್ ಪ್ರಧಾನ ಕಚೇರಿಯಲ್ಲಿ ನಡೆದ ಸ್ವಾತಂತ್ರ್ಯ ದಿನಾಚರಣೆಯ ಸಂದರ್ಭದಲ್ಲಿ ಪಕ್ಷದ ನಾಯಕಿ ಸೋನಿಯಾ ಗಾಂಧಿ ಅವರು ವಂದೇ ಮಾತರಂ ಪೂರ್ಣ ಹಾಡನ್ನು ನಿಲ್ಲಿಸುವಂತೆ ಆದೇಶಿಸಿದರು ಎಂದು ಆರೋಪಿಸಿದರು.

ಸ್ವಾತಂತ್ರ್ಯದ 80 ವರ್ಷಗಳ ನಂತರ ಐತಿಹಾಸಿಕ ಕೆಂಪು ಕೋಟೆ ಮತ್ತು ದೇಶದೆಲ್ಲೆಡೆ ಧ್ವಜಾರೋಹಣ ವೇಳೆ 'ವಂದೇ ಮಾತರಂ' ಗೀತೆ ಹಾಡಲಾಯಿತು. ಸ್ವಾತಂತ್ರ್ಯ ಹೋರಾಟದ ವೇಳೆ ಗೀತೆಯನ್ನು ಹಾಡಿದ್ದಕ್ಕಾಗಿ ಜೈಲಿಗೆ ಹಾಕಲಾಯಿತು. ಸಾವಿರಾರು ಜನರು ಗುಂಡು-ಲಾಠಿ ಏಟು ತಿಂದರು ಎಂದು ಹೋರಾಟವನ್ನು ನೆನಪಿಸಿಕೊಂಡರು. ಕಾಂಗ್ರೆಸ್ ಪ್ರಧಾನ ಕಚೇರಿಯಲ್ಲಿ ನಡೆದ ಸ್ವಾತಂತ್ರ್ಯ ದಿನಾಚರಣೆಯ ಸಂದರ್ಭದಲ್ಲಿ, ಸೋನಿಯಾ ಗಾಂಧಿ ಅವರು ಹಾಡನ್ನು ಮಧ್ಯದಲ್ಲಿ ನಿಲ್ಲಿಸುವಂತೆ ಎಐಸಿಸಿ ಅಧ್ಯಕ್ಷರನ್ನು ಕೇಳಿಕೊಂಡರು. ನಾವೆಲ್ಲರೂ ಅದನ್ನು ಟಿವಿಗಳಲ್ಲಿ ನೋಡಿದ್ದೇವೆ. ಸೋನಿಯಾ ಅವರು ಸಾರ್ವಜನಿಕವಾಗಿ ಕ್ಷಮೆಯಾಚಿಸಬೇಕು. ಮತ ಬ್ಯಾಂಕ್ ರಾಜಕೀಯದಿಂದಾಗಿ ಕಾಂಗ್ರೆಸ್ 'ವಂದೇ ಮಾತರಂ ಅನ್ನು ಮರೆತಿದೆ ಎಂದು ಟೀಕಿಸಿದ್ದಾರೆ.

**1** ಸೋನಿಯಾ ಗಾಂಧಿ ವಿರೋಧ ಆರೋಪ.

**2** ಸೋನಿಯಾ ಗಾಂಧಿ ಪಾಪ ಎಸಗಿದ್ದಾರೆ ಎಂದ ಶಾ

**3** ದೇಶದ ಜನರ ಕ್ಷಮೆಯಾಚಿಸುವಂತೆ ಒತ್ತಾಯ

ಪೋಖ್ರಾನ್ ಪರೀಕ್ಷೆಗಳ ಅಂತಾರಾಷ್ಟ್ರೀಯ ಒತ್ತಡದ ಹೊರತಾಗಿಯೂ ಭಾರತವನ್ನು ಪರಮಾಣು ಶಕ್ತಿಯಾಗಿ ಮಾಡುವುದು ಪ್ರಮುಖ ನಿರ್ಧಾರಗಳನ್ನು ಮಾಜಿ ಪ್ರಧಾನಿ ದಿವಂಗತ ಅಟಲ್ ಬಿಹಾರಿ ವಾಜಪೇಯಿ ಅವರು ತೆಗೆದುಕೊಂಡರು ಎಂದು ಶಾ ಬಣ್ಣಿಸಿದ್ದಾರೆ. ವಾಜಪೇಯಿ ಅವರ ಸರ್ಕಾರವು ಹಳ್ಳಿಗಳನ್ನು ರಸ್ತೆಗಳೊಂದಿಗೆ ಸಂಪರ್ಕಿಸಿತು.

ರಾಷ್ಟ್ರೀಯ ಹೆದ್ದಾರಿಗಳನ್ನು ನಿರ್ಮಿಸಿತು. ಬುಡಕಟ್ಟು ಅಭಿವೃದ್ಧಿಗಾಗಿ ಪ್ರತ್ಯೇಕ ಸಚಿವಾಲಯವನ್ನು ಸ್ಥಾಪಿಸಿದ ಕೀರ್ತಿ ವಾಜಪೇಯಿಗೆ ಸಲ್ಲುತ್ತದೆ ಎಂದು ಗೃಹ ಸಚಿವರು ಹೇಳಿದರು. ಕಾಂಗ್ರೆಸ್ ಪಕ್ಷದ ಕಚೇರಿಯಲ್ಲಿ ಸ್ವಾತಂತ್ರ್ಯ ದಿನಾಚರಣೆಯ ಕಾರ್ಯಕ್ರಮದಲ್ಲಿ ವಂದೇ ಮಾತರಂ' ಹಾಡುತ್ತಿದ್ದಾಗ ಸೋನಿಯಾ ಗಾಂಧಿ, ರಾಹುಲ್ ಮತ್ತು ಮಲ್ಲಿಕಾರ್ಜುನ ಖರ್ಗೆ ಅವರು ಸಂಪೂರ್ಣ ಗೀತೆಯನ್ನು ನುಡಿಸಲು ವಿರೋಧಿಸಿದರು ಎಂದು ಬಿಜೆಪಿ ಆರೋಪಿಸಿದೆ. ವಂದೇ ಮಾತರಂನ ಪೂರ್ಣ ಆವೃತ್ತಿಯನ್ನು ಕಾರ್ಯಕ್ರಮದಲ್ಲಿ ಹಾಡುವುದಕ್ಕೆ ಸೋನಿಯಾ ಗಾಂಧಿ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಆರೋಪವನ್ನು ಕಾಂಗ್ರೆಸ್ ನಿರಾಕರಿಸಿದೆ. ರಾಷ್ಟ್ರಗೀತೆಯ ಪೂರ್ಣ ಆವೃತ್ತಿಯನ್ನು ಹಾಡುವುದನ್ನು ನಿಲ್ಲಿಸುವ ಯಾವುದೇ ಪ್ರಯತ್ನ ನಡೆದಿಲ್ಲ ಮತ್ತು ಪಕ್ಷದ ಮುಖ್ಯಸ್ಥ ಖರ್ಗೆ ಅವರು ನಿಂತಿದ್ದಾಗ ಅವರಿಗೆ ಕುರ್ಚಿಯನ್ನು ಮಾತ್ರ ಕೇಳುತ್ತಿದ್ದರು ಎಂದು ಪ್ರತಿಪಾದಿಸಿದೆ.

### ದೃಶ್ಯಗಳಿಂದ ವಿವಾದ

ಕಾಂಗ್ರೆಸ್ ಪ್ರಧಾನ ಕಚೇರಿಯಲ್ಲಿ ನಡೆದ ಸ್ವಾತಂತ್ರ್ಯ ದಿನಾಚರಣೆಯ ಕಾರ್ಯಕ್ರಮದ ದೃಶ್ಯಗಳು ಬಹಿರಂಗವಾದ ಬಳಿಕ ವಿವಾದ ಭುಗಿಲೆದ್ದಿದೆ.

ವಂದೇ ಮಾತರಂ ಹಾಡಲಾಗುತ್ತಿದ್ದ ಸಂದರ್ಭದಲ್ಲಿ ಕಾಂಗ್ರೆಸ್‌ನ ಹಿರಿಯ ನಾಯಕರು ಪರಸ್ಪರ ಮಾತನಾಡುತ್ತಿರುವುದು ದೃಶ್ಯಗಳಲ್ಲಿ ಕಂಡುಬಂದಿತ್ತು.


ಈ ದೃಶ್ಯಗಳನ್ನು ಆಧರಿಸಿ ಬಿಜೆಪಿ ನಾಯಕರು ಕಾಂಗ್ರೆಸ್ ವಿರುದ್ಧ ಟೀಕಾಪ್ರಹಾರ ನಡೆಸಿದ್ದಾರೆ. ವಂದೇ ಮಾತರಂ ಹಾಡುವ ಸಂದರ್ಭದಲ್ಲಿ ಕಾಂಗ್ರೆಸ್ ನಾಯಕರ ವರ್ತನೆಯು ರಾಷ್ಟ್ರಗೀತೆಗೆ ಅಗೌರವ ತೋರಿದಂತಾಗಿದೆ ಎಂದು ಬಿಜೆಪಿ ನಾಯಕರು ಆರೋಪಿಸಿದ್ದಾರೆ.

### ವೋಟ್ ಬ್ಯಾಂಕ್ ರಾಜಕಾರಣ




ಸೋನಿಯಾ ಗಾಂಧಿ ವಂದೇ ಮಾತರಂ ಗೀತೆಗೆ ಅವಮಾನ ಮಾಡಿರುವುದರ ಹಿಂದೆ ಕಾಂಗ್ರೆಸ್‌ನ ವೋಟ್ ಬ್ಯಾಂಕ್ ರಾಜಕಾರಣ ಅಡಗಿದೆ ಎಂದಿರುವ ಅಮಿತ್ ಶಾ, ಮತಕ್ಕಾಗಿ ಪ್ರತಿಪಕ್ಷ ರಾಷ್ಟ್ರೀಯ ಗೀತೆಗೆ ಸಂಬಂಧಿಸಿದ ತ್ಯಾಗ-ಬಲಿದಾನಗಳನ್ನು ಮರೆತಿದೆ ಎಂದು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಕೆಂಪುಕೋಟೆ ಸ್ವಾತಂತ್ರ್ಯ ದಿನಾಚರಣೆಗೆ ಮಲ್ಲಿಕಾರ್ಜುನ ಖರ್ಗೆ ಮತ್ತು ರಾಹುಲ್‌ಗಾಂಧಿ ಗೈರು ಹಾಜರಾಗಿದ್ದಕ್ಕೂ ಬಿಜೆಪಿ ಆಕ್ಷೇಪ ವ್ಯಕ್ತಪಡಿಸಿರುವುದನ್ನು ನಾವು ಇಲ್ಲಿ ಉಲ್ಲೇಖಿಸಬಹುದು.ಸಾವಿರಾರು ಜನರು ಗಲ್ಲುಗಂಬವನ್ನು ಅಪ್ಪಿಕೊಂಡರು, ಗುಂಡಿನ ದಾಳಿ ಹಾಗೂ ಲಾಠಿಚಾರ್ಜ್‌ಗಳನ್ನು ಎದುರಿಸಿದರು ಮತ್ತು ವರ್ಷಗಳ ಕಾಲ ಸೆರೆವಾಸವನ್ನು ಅನುಭವಿಸಿದರು.

ಕಾಂಗ್ರೆಸ್ ಪಕ್ಷದವರಿಗೆ ಸ್ವಲ್ಪವಾದರೂ ನಾಚಿಕೆ ಎಂಬುದು ಉಳಿದುಕೊಂಡಿದ್ದರೆ, ಅವರು ಕೈಮುಗಿದು ಬಂಕಿಮ್ ಬಾಬು ಹಾಗೂ ದೇಶದ ಜನರ ಕ್ಷಮೆ ಯಾಚಿಸಬೇಕು. ಸೋನಿಯಾ ಗಾಂಧಿ ಅವರೇ ಸಾರ್ವಜನಿಕರು ನಿಮ್ಮನ್ನು ಗಮನಿಸುತ್ತಿದ್ದಾರೆ. ದೇಶದ ಜನರು ಇದನ್ನು ಎಂದಿಗೂ ಕ್ಷಮಿಸುವುದಿಲ್ಲ ಎಂದು ಕೇಂದ್ರ ಗೃಹ ಸಚಿವರು ಗುಡುಗಿದರು.



### ವಂದೇ ಮಾತರಂಗೆ ಅಟ್ಟಿ

**1875ರಲ್ಲಿ ಬಂಕಿಮ್ ಚಂದ್ರ ಚಟರ್ಜಿ ಬರೆದ ವಂದೇ ಮಾತರಂನ ಮೊದಲ ಎರಡು ಚರಣಗಳನ್ನು 1937ರಲ್ಲಿ ರಾಷ್ಟ್ರೀಯ ಗೀತೆಯಾಗಿ ಅಂಗೀಕರಿಸಲಾಯಿತು. ಹಿಂದೂ ದೇವತೆಗಳ ಉಲ್ಲೇಖಗಳನ್ನು ಹೊಂದಿರುವ ನಾಲ್ಕು ಇತರ ಚರಣಗಳನ್ನು ಬಿಟ್ಟುಬಿಡಲಾಯಿತು. 2026ರ ಫೆಬ್ರವರಿಯಲ್ಲಿ, ಕೇಂದ್ರ ಸರ್ಕಾರ ಸಾರ್ವಜನಿಕ ಸಭೆಗಳು, ಶಾಲೆಗಳು ಮತ್ತು ಅಧಿಕೃತ ಸರ್ಕಾರಿ ಕಾರ್ಯಕ್ರಮಗಳಲ್ಲಿ ವಂದೇ ಮಾತರಂ ಅನ್ನು ಸಂಪೂರ್ಣವಾಗಿ ಹಾಡುವುದನ್ನು ಕಡ್ಡಾಯಗೊಳಿಸಿತು.**

**ಸ್ವಾತಂತ್ರ್ಯ ದಿನಾಚರಣೆಯಂದು ಕಂಡುಬಂದ ದೃಶ್ಯವು ಅತ್ಯಂತ ನಾಚಿಕೆಗೇಡಿನ ಸಂಗತಿಯಾಗಿದೆ. ಭಾರತದ ರಾಷ್ಟ್ರೀಯ ಗೀತೆ 'ವಂದೇ ಮಾತರಂ' ಹಾಡುವಾಗ ಸೋನಿಯಾ ಗಾಂಧಿ ಅವರು ವ್ಯಕ್ತಪಡಿಸಿದ ಆಕ್ಷೇಪ ಮತ್ತು ಅದನ್ನು ಏಕೆ ನುಡಿಸಲಾಗುತ್ತಿದೆ ಎಂದು ಕಾರ್ಯಕರ್ತರನ್ನು ಪ್ರಶ್ನಿಸಿದ್ದು, ಕಾಂಗ್ರೆಸ್ ಪಕ್ಷದ ಮನಸ್ಥಿತಿಯನ್ನು ಬಯಲು ಮಾಡಿದೆ. ವಂದೇ ಮಾತರಂ ಕೇವಲ ಒಂದು ಹಾಡಲ್ಲ, ಬದಲಾಗಿ ಭಾರತದ ಸ್ವಾತಂತ್ರ್ಯ ಹೋರಾಟ, ರಾಷ್ಟ್ರೀಯ ಪ್ರಜ್ಞೆ ಮತ್ತು ದೇಶಭಕ್ತಿಯ ಐತಿಹಾಸಿಕ ಸಂಕೇತವಾಗಿದೆ ಎಂದು ಅವರು ಬಣ್ಣಿಸಿದ್ದಾರೆ.**

ಗೋಪಾಲ್ ಕೃಷ್ಣ ಅಗರ್ವಾಲ್ ಬಿಜೆಪಿ ವಕ್ತಾರ

## ಟ್ರಯಲ್ ಮುಗಿಯೋವರೆಗೂ ದರ್ಶನ್‌ಗೆ ಜೈಲೇ ಗತಿ! ಹೇಳಿಕೆ ನಿಜ ಅಂತ ಪ್ರೂವ್ ಆದರೆ ಕಂಟಕ ಫಿಕ್ಸ್

• ಉದಯವಾಹಿನಿ, ಬೆಂಗಳೂರು

ನಟ ದರ್ಶನ್ ಎರಡನೇ ಬಾರಿ ಜೈಲು ಸೇರಿ ಒಂದು ವರ್ಷವಾಗಿದೆ. ಕಾನೂನು ಹೋರಾಟದಲ್ಲಿ ಏಳು ಬೀಳು ಕಂಡ ದರ್ಶನ್ ಸಾಕಷ್ಟು ಸವಾಲು ಎದುರಿಸಿದ್ದಾರೆ. ದರ್ಶನ್‌ಗೆ ಮತ್ತೆ ಸಾಲು ಸಾಲು ಸಂಕಷ್ಟ ಎದುರಾಗುತ್ತಿದೆ. ಜೊತೆಗಿದ್ದವನಿಂದಲೇ ದರ್ಶನ್‌ಗೆ ಹಿನ್ನಡೆಯಾಗಿದೆ. ಪ್ರದೋಷ್ ಮಾಫಿ ಸಾಕ್ಷಿ ಅರ್ಜಿ ವಿಚಾರಣೆ ನಡೆಯುತ್ತಿದ್ದು ನ್ಯಾಯಾಲಯದಲ್ಲಿ ವಾದ ಪ್ರತಿವಾದ ಜೋರಾಗಿದೆ. ಅದರಲ್ಲೂ ದರ್ಶನ್ ಹಿನ್ನಡೆಯಾಗಿದೆ.

ಅತ್ತ ದರ್ಶನ್ ಸೆರೆವಾಸದಲ್ಲಿದ್ದರೆ ಇತ್ತ ಕುಟುಂಬದ ಪ್ರಾರ್ಥನೆ ಮುಂದುವರಿದಿದೆ.

ಪತ್ನಿ ವಿಜಯಲಕ್ಷ್ಮಿ ರಿಂದ ಟೆಂಪಲ್ ರನ್ ನಡೆಯುತ್ತಲೇ ಇವೆ. ಸೋಶಿಯಲ್ ಮೀಡಿಯಾದಲ್ಲಿ ದರ್ಶನ್ ಬಗ್ಗೆ ಸರಣಿ ಪೋಸ್ಟ್ ಹಾಕುತ್ತಲೇ ಇದ್ದಾರೆ.

ಒಂದು ವರ್ಷದಿಂದಲೂ ದರ್ಶನ್‌ಗೆ ಕೋರ್ಟ್‌ನಲ್ಲಿ ಹಿನ್ನಡೆ ಆಗುತ್ತಿದೆ. ಎರಡನೇ ಬಾರಿ ಜೈಲಿಗೆ ಹೋದ ಮೇಲೆ ಸೆಷನ್ಸ್ ಕೋರ್ಟ್, ಹೈಕೋರ್ಟ್, ಸುಪ್ರೀಂಕೋರ್ಟ್‌ಗೆ ಹಾಕಿರೋ ಬಹುತೇಕ ಅರ್ಜಿಗಳು ರಿಜೆಕ್ಟ್ ಆಗಿವೆ. ಈ ಬಗ್ಗೆ ವಕೀಲರುಗಳು ಕೂಡ ಕೇಸ್ ಬಗ್ಗೆ ಸಾಕಷ್ಟು ವಿಮರ್ಶೆ ಮಾಡುತ್ತಿದ್ದಾರೆ. ಇನ್ನು ಮಾಫಿ ಸಾಕ್ಷಿ ವಿಚಾರ ದರ್ಶನ್‌ಗೆ ದೊಡ್ಡ ಕಂಟಕವೇ.

ಮಾಫಿ ಸಾಕ್ಷಿ ಹೇಳೋದು ಎಲ್ಲವೂ ಸತ್ಯ ಅಂತಾ ಪ್ರೂವ್ ಆದರೆ ಮಾತ್ರ. ಇವತ್ತು ಮಾಫಿ ಸಾಕ್ಷಿ ಅಂತಾ ಬಂದವರು ನಾಳೆ ಉಲ್ಟಾ ಹೊಡಿಬಹುದು. ಹೀಗಾಗಿ ದರ್ಶನ್ ಅರ್ಜೆಂಟ್ ಮಾಡಬಾರದಾಗಿತ್ತು. ಆಗಸ್ಟ್ 18ರ ಒಳಗೆ ಸುಪ್ರೀಂಕೋರ್ಟ್‌ಗೆ ಹೋಗಿ ಬರೋಕೆ ಆಗಲ್ಲ. ಮಾಫಿ ಸಾಕ್ಷಿಯನ್ನ ಎದುರಿಸಲೇಬೇಕಾದ ಪರಿಸ್ಥಿತಿ ದರ್ಶನ್‌ಗೆ ಇದೆ ಅನ್ನೋದು ಹಿರಿಯ ವಕೀಲರ ಅಭಿಪ್ರಾಯ.

## ಲಾಲ್‌ಬಾಗ್ ಉಳಿಸಿ ಬಂಡೆ ತಬ್ಬಿಕೊಂಡು ವಾಕರ್ಸ್ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ಸುರಂಗ ರಸ್ತೆ ಯೋಜನೆ ವಿರುದ್ಧ ವಾಕರ್ಸ್ ಅಸೋಷಿಯೇಷನ್ ವಿಭಿನ್ನವಾಗಿ ಪ್ರತಿಭಟನೆ ನಡೆಸಿದೆ. ಲಾಲ್‌ಬಾಗ್‌ನಲ್ಲಿರುವ ಬಂಡೆಯನ್ನು ತಬ್ಬಿಕೊಂಡು ಲಾಲ್‌ಬಾಗ್ ಉಳಿಸಿ ಎಂದು ವಾಕಾರ್ಸ್ ಘೋಷಣೆ ಕೂಗಿ ಆಕ್ರೋಶ ಹೊರಹಾಕಿದ್ದಾರೆ. ಬಂಡೆಯನ್ನು ತಬ್ಬಿಕೊಳ್ಳಿ ಹೆಸರಿನಲ್ಲಿ ಪ್ರತಿಭಟನೆ ನಡೆದಿದೆ.

ಸುರಂಗ ರಸ್ತೆ ಯೋಜನೆಯಿಂದ ಲಾಲ್‌ಬಾಗ್‌ಗೆ ಸಮಸ್ಯೆಯಾಗಲಿದೆ. ಯಾವುದೇ ಕಾರಣಕ್ಕೂ ಲಾಲ್‌ಬಾಗ್‌ಗೆ ಧಕ್ಕೆ ಆಗಬಾರದು ಎಂದು ಪ್ರತಿಭಟನಾಕಾರರು ಆಗ್ರಹಿಸಿದ್ದಾರೆ. ಅನುಮತಿ ಇಲ್ಲದೇ ಪ್ರತಿಭಟನೆ ಮಾಡೋ ಹಾಗಿಲ್ಲ ಎಂದು ಪೊಲೀಸರು ಪ್ರತಿಭಟನಾಕಾರರಿಗೆ ಮಾಹಿತಿ ನೀಡಿ ಕಳುಹಿಸಿದ್ದಾರೆ. ಮುಂದಿನ ದಿನಗಳಲ್ಲಿ ಫ್ರೀಡಂಪಾರ್ಕ್ ಪ್ರತಿಭಟನೆ ಮಾಡೋದಾಗಿ ಹೇಳಿ ಪ್ರತಿಭಟನಾಕಾರರು ಅಲ್ಲಿಂದ ತೆರಳಿದ್ದಾರೆ. ಈ ಹಿಂದೆ ಮಾನವ ಸರಪಳಿ ಮಾಡಿ ಸರ್ಕಾರದ ವಿರುದ್ಧ ಕಿಡಿಕಾರಿದ್ದರು. ಮತ್ತೊಮ್ಮೆ ಲಾಲ್ ಬಾಗ್ ಉಳಿಸಬೇಕು.

## ವಿಧಾನಸೌಧದ ಮುಂದೆ ಮನಮೋಹಕ ಮ್ಯೂಸಿಕಲ್ ನೈಟ್ ಶಕ್ತಿಸೌಧಕ್ಕೆ ಹೊಸ ಕಳೆ ತಂದು ಕೊಟ್ಟ ಫ್ರೀಡಂಹಬ್ಬ

• ಉದಯವಾಹಿನಿ, ಬೆಂಗಳೂರು

ವಿಧಾನಸೌಧದ ಮುಂಭಾಗದಲ್ಲಿ ಪ್ರಥಮ ಬಾರಿಗೆ ಸಾರ್ವಜನಿಕರಿಗಾಗಿ 'ಫ್ರೀಡಂ ಹಬ್ಬ' ಕಾರ್ಯಕ್ರಮವನ್ನು ರಾಜ್ಯ ಸರ್ಕಾರದ ವತಿಯಿಂದ ಆಯೋಜಿಸಲಾಗಿತ್ತು. ಆ.15ರ ಮಧ್ಯಾಹ್ನ 12 ಗಂಟೆಯಿಂದ ಆರಂಭವಾಗಿ ರಾತ್ರಿ 10 ಗಂಟೆಯವರೆಗೆ ಸತತ 10 ಗಂಟೆಗಳ ಕಾಲ ಮೈ ನವಿರೇಳಿಸುವ ಸಂಭ್ರಮದ ಕಾರ್ಯಕ್ರಮ ಶಕ್ತಿಸೌಧದಲ್ಲಿ ನಡೆಯಿತು. ನಮ್ಮೂರು, ನಿಮ್ಮೂರು, ಎಲ್ಲರ ಬೆಂಗಳೂರು ಎಂಬ ಹೆಮ್ಮೆಯ ಥೀಮ್‌ನೊಂದಿಗೆ ಜರುಗಿದ ಈ ಮಹಾಸಂಭ್ರಮದಲ್ಲಿ, ಸುಮಾರು 20 ಸಾವಿರಕ್ಕೂ ಹೆಚ್ಚು ಜನರು ನೊಂದಾಯಿಸಿಕೊಂಡಿದ್ದರು.

ಒಂದು ಅಂದಾಜಿನಂತೆ ಸುಮಾರು 28-30 ಸಾವಿರ ಜನ ಈ ಕಾರ್ಯಕ್ರಮ ಕಣ್ತುಂಬಿಕೊಂಡರು. ಮಕ್ಕಳಿಗಾಗಿ ಅನೇಕ ಸ್ಟಾಲ್ ಗಳನ್ನು, ಅನೇಕ ಆಟೋಟ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಇದೇ ಮೊದಲ ಬಾರಿಗೆ ವಿಧಾನಸೌಧ ಪ್ರವೇಶಿಸಲು ಕ್ಯೂ ಆರ್ ಕೋಡ್ ಮೂಲಕ ಅವಕಾಶ ಕಲ್ಪಿಸಲಾಗಿತ್ತು.

## ಎಮ್ಮೆ ತರ ಇದ್ದೀಯಾ' ಎಂದು ಹೀಯಾಳಿಸಿ ಮಹಿಳಾ ಐಪಿಎಸ್ ಮೇಲೆ ಹಲ್ಲೆ

• ಉದಯವಾಹಿನಿ, ಬೆಂಗಳೂರು

ಕೆ.ಆರ್.ಪುರಂ ಸಂಚಾರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕರ್ತವ್ಯ ನಿರತ ಮಹಿಳಾ ಐಪಿಎಸ್‌ಮೇಲೆ ಕೆಲ ಕಿಡಿಗೇಡಿಗಳು ಹಲ್ಲೆ ನಡೆಸಿದ್ದುಅಲ್ಲದೆ ಬಾಡಿ ಶೇಮಿಂಗ್ ಮಾಡಿ ಅವಮಾನಿಸಿರುವ ಘಟನೆ ನಡೆದಿದೆ. ಸಂಚಾರಿ ಮಹಿಳಾ ಪಿಎಸ್‌ಐ ನಯಾನಾ ಮೇಲೆ ಹಲ್ಲೆ ನಡೆಸಿದ್ದ ಪ್ರಕರಣ ಸಂಬಂಧ ಹರ್ಷಿತ್ ರೆಡ್ಡಿ, ಹೇಮಂತ್ ರೆಡ್ಡಿ, ರಾಹುಲ್ ಹಾಗೂ ರಾಧಾಕೃಷ್ಣ ರೆಡ್ಡಿ ಎಂಬುವವರ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಬೆಂಗಳೂರಿನ ಭಟ್ಟರಹಳ್ಳಿ ಜಂಕ್ಷನ್ ಬಳಿ ಆರೋಪಿಗಳು ಸಂಚಾರ ನಿಯಂತ್ರಣ ಕರ್ತವ್ಯದಲ್ಲಿದ್ದ ಕಾನ್‌ಸ್ಟೇಬಲ್ ಮಂಜುನಾಥ್ ಜಗಳ ಮಾಡುತ್ತಿದ್ದರು. ಇದನ್ನು ಗಮನಿಸಿ ಐಪಿಎಸ್‌ನಯನಾ ಪರಿಸ್ಥಿತಿ ನಿಭಾಯಿಸಲು ಸ್ಥಳಕ್ಕೆ ತೆರಳಿದರು. ಈ ವೇಳೆ ಆರೋಪಿಗಳು ನಯನಾ ಅವರ ಮೇಲೆಯೇ ಹಲ್ಲೆ ಮಾಡಿದ್ದಲ್ಲೇ 'ಎಮ್ಮೆ ತರ ಇದ್ದೀಯಾ, ಹೊಟ್ಟೆಗೇನು ತಿಂತೀಯಾ?' ಎಂದು ಬಾಡಿ ಶೇಮಿಂಗ್ ಮಾಡಿದ್ದಾರೆ. ಈ ಘಟನೆ ಕರ್ತವ್ಯದಲ್ಲಿದ್ದ ಸಿಬ್ಬಂದಿಯ ಬಾಡಿವೋರ್ನ್ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಈ ವಿಡಿಯೋ ಸಾಕ್ಷ್ಯವನ್ನು ಆಧರಿಸಿ ನಾಲ್ವರು ಆರೋಪಿಗಳ ವಿರುದ್ಧ ಕೆ.ಆರ್. ಪುರಂ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

## ರೈಲ್ವೆ ನಿಲ್ದಾಣಗಳ ಕುಡಿಯುವ ನೀರಿನಲ್ಲಿ ಇ-ಕೋಲಿ ಬ್ಯಾಕ್ಟೀರಿಯಾ ಪತ್ತೆ

• ಉದಯವಾಹಿನಿ, ನವದೆಹಲಿ

ದೇಶದ ಹಲವು ರೈಲು ನಿಲ್ದಾಣಗಳಲ್ಲಿ ವಾಟರ್ ಕೂಲರ್‌ಗಳಿಂದ ಸಂಗ್ರಹಿಸಲಾದ ಕುಡಿಯುವ ನೀರಿನ ಮಾದರಿಗಳಲ್ಲಿ ಇ. ಕೋಲಿ ಬ್ಯಾಕ್ಟೀರಿಯಾ ಪತ್ತೆಯಾಗಿದೆ ಎಂದು ಕಂಟ್ರೋಲರ್ ಮತ್ತು ಆಡಿಟರ್ ಜನರಲ್ ವರದಿ ತಿಳಿಸಿದೆ. ರೈಲ್ವೆ ನಿಲ್ದಾಣಗಳಲ್ಲಿನ ಶೌಚಾಲಯಗಳಲ್ಲೂ ಸ್ವಚ್ಛತೆಯ ಕೊರತೆ ಕಂಡುಬಂದಿವೆ ಎಂದು ಲೆಕ್ಕಪರಿಶೋಧಕರು ತಿಳಿಸಿದ್ದಾರೆ.

ದಕ್ಷಿಣ ರೈಲ್ವೆ ವಲಯದ ಎರಡು ನಿಲ್ದಾಣ ಕೊಯಮತ್ತೂರು ಮತ್ತು ಪಾಲಕ್ಕಾಡ್ ಜಂಕ್ಷನ್‌ಗಳು, ದಕ್ಷಿಣ ಮಧ್ಯ ರೈಲ್ವೆಯ ಒಂದು ನಿಲ್ದಾಣ ಮಧ್ಯ ರೈಲ್ವೆ ವಲಯದ ನಾಲ್ಕು ನಿಲ್ದಾಣಗಳು ಛತ್ರಪತಿ ಶಿವಾಜಿ ಮಹಾರಾಜ್ ಟರ್ಮಿನಸ್, ಭಿವಂಡಿ ರಸ್ತೆ, ಕಲ್ಯಾಣ್ ಮತ್ತು ಲೋನಾವಾಲಾ ಮತ್ತು ಪೂರ್ವ ರೈಲ್ವೆಯ ಒಂದು ನಿಲ್ದಾಣದ ವಾಟರ್ ಕೂಲರ್‌ನಿಂದ ಸಂಗ್ರಹಿಸಿ ಪರೀಕ್ಷಿಸಲಾದ ನೀರಿನ ಮಾದರಿಯಲ್ಲಿ ಇ. ಕೋಲಿ ಬ್ಯಾಕ್ಟೀರಿಯಾ ದೃಢಪಟ್ಟಿದೆ ಎಂದು ವರದಿ ತಿಳಿಸಿದೆ.

2022-23ರ ಅವಧಿಯಲ್ಲಿ ರೈಲ್ವೆಯ 8 ವಲಯಗಳ 49 ನಿಲ್ದಾಣಗಳಲ್ಲಿ ಮತ್ತು 2023-24ರ ಅವಧಿಯಲ್ಲಿ 9 ವಲಯಗಳ 56 ನಿಲ್ದಾಣಗಳಲ್ಲಿ ಪ್ಲಾಟ್‌ಫಾರ್ಮ್‌ಗಳ ನಲ್ಲಿಗಳಿಂದ ಸಂಗ್ರಹಿಸಲಾದ ಕುಡಿಯುವ ನೀರಿನ ಮಾದರಿಗಳ ಪರೀಕ್ಷಾ ಫಲಿತಾಂಶಗಳು ಕೋಲಿಫಾರ್ಮ್ ಬ್ಯಾಕ್ಟೀರಿಯಾ ಇ-ಕೋಲಿ ಸೇರಿದಂತೆ) ಇರುವಿಕೆಯನ್ನು ಸೂಚಿಸಿವೆ ಎಂದು ವರದಿ ಹೇಳಿದೆ. ಇ.ಕೋಲಿ ಬ್ಯಾಕ್ಟೀರಿಯಾದ ಕೆಲವು ತಳಿಗಳು ಫುಡ್ ಪಾಯಿಸನ್, ಅತಿಸಾರ ಮತ್ತು ಮೂತ್ರಪಿಂಡ ವೈಫಲ್ಯಕ್ಕೆ ಕಾರಣವಾಗಲಿವೆ. ಇಂತಹ ಗಂಭೀರ ಸ್ವರೂಪದ ಬ್ಯಾಕ್ಟೀರಿಯಾ ರೈಲ್ವೆ ನಿಲ್ದಾಣಗಳ ನೀರಿನ ಮೂಲಗಳಲ್ಲಿ ಕಂಡುಬಂದಿರುವುದು ಆತಂಕಕಾರಿ ವಿಷಯ.

2022-23ರ ಅವಧಿಯಲ್ಲಿ 4 ವಲಯಗಳ 8 ನಿಲ್ದಾಣಗಳಲ್ಲಿ ಮತ್ತು 2023-24ರ ಅವಧಿಯಲ್ಲಿ 5 ವಲಯಗಳ 11 ನಿಲ್ದಾಣಗಳಲ್ಲಿ ಟೋಟಲ್ ಕೋಲಿಫಾರ್ಮ್ ಪರೀಕ್ಷೆಗಳನ್ನು ಹೊರತುಪಡಿಸಿ ಇತರೆ ಬ್ಯಾಕ್ಟೀರಿಯಾ ಸಂಬಂಧಿತ ಪರೀಕ್ಷೆಗಳ ಫಲಿತಾಂಶ ತೃಪ್ತಿಕರವಾಗಿಲ್ಲ ಎಂದು ಆಡಿಟ್ ತಿಳಿಸಿದೆ. ಮತ್ತು 2023-24 ರ ನಂತರದ ಪ್ರಕರಣಗಳನ್ನೂ ವರದಿ ಒಳಗೊಂಡಿದೆ ಎಂದು ಸಿಎಜಿ ಹೇಳಿದೆ.

## ಕಾವೇರಿ ವಿಚಾರದ ನನ್ನ ಕರ್ತವ್ಯ: ಸಿಎಂ ಡಿ.ಕೆ.ಶಿವಕುಮಾರ್

• ಉದಯವಾಹಿನಿ, ಬೆಂಗಳೂರು



ರಾಜ್ಯದ ಜಲಾಶಯಗಳು ಇನ್ನೂ ಸಂಪೂರ್ಣವಾಗಿ ತುಂಬಿಲ್ಲ. ನಮ್ಮ ರೈತರನ್ನು ಬದುಕಿಸುವ ಸವಾಲಿನ ಜೊತೆಗೆ ಕಾನೂನನ್ನೂ ಕಾಪಾಡಬೇಕು. ಎರಡೂ ಬಹಳ ಮುಖ್ಯ ಕಾವೇರಿ ವಿಚಾರದಲ್ಲಿ ರೈತರ ಹಿತ ಕಾಯುವುದು ನನ್ನ ಕರ್ತವ್ಯ ಎಂದು ಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು. ಕೊಡಗಿನ ಭಾಗಮಂಡಲದಲ್ಲಿ ಮಾಧ್ಯಮಗಳಿಗೆ ಶಿವಕುಮಾರ್ ಅವರು ರವಿವಾರ ಪ್ರತಿಕ್ರಿಯೆ ನೀಡಿದರು.

ಕುಡಿಯುವ ನೀರು, ಕೃಷಿಗೆ ಜಲಾಶಯಗಳಲ್ಲಿನ ನೀರಿನ ಲಭ್ಯತೆಯನ್ನು ಗಮನದಲ್ಲಿಟ್ಟುಕೊಂಡೇ ನಾವು ನಿರ್ಧಾರ ಕೈಗೊಳ್ಳಬೇಕು. ಉತ್ತಮ ಮಳೆಯಾಗಿ ಬೆಳೆ ಸಮೃದ್ಧಿಯಾಗಬೇಕು, ರೈತರಿಗೆ ಅನ್ನ ಸಿಗಬೇಕು ಎಂಬುದು ನಮ್ಮ ಆಶಯ ಎಂದು ತಿಳಿಸಿದರು.

ಸರ್ಕಾರಿ ಜಾಗಗಳಲ್ಲಿ ಕಾರ್ಯಕ್ರಮ ನಡೆಸಲು ಅನುಮತಿ ಪಡೆಯಬೇಕು ಎನ್ನುವ ನಿಯಮದ ಬಗ್ಗೆ ಬಿಜೆಪಿ ನಾಯಕ ಬಿ ಎಲ್ ಸಂತೋಷ್ ಆಕ್ಷೇಪದ ಬಗ್ಗೆ ಕೇಳಿದಾಗ, ನಾವು ಮೊದಲಿನಿಂದಲೂ ಯಾವುದನ್ನೋ ಹಿಡಿದುಕೊಂಡು ರಾಜಕೀಯ ಮಾಡುವುದಿಲ್ಲ. ಯಾರೂ ಗಾಬರಿಪಡುವ ಅಗತ್ಯವಿಲ್ಲ. ಯಾವುದೇ ಸಂಘಟನೆಯಾಗಲಿ ಕಾನೂನು ಪಾಲಿಸಬೇಕು.

**'ಒಂದು ಲಕ್ಷ ಹೊಸ ಉದ್ಯೋಗ ಸೃಷ್ಟಿ':** ಉದ್ಯೋಗಾಕಾಂಕ್ಷಿಗಳಿಗಾಗಿ 'ಮುಖ್ಯಮಂತ್ರಿ ಉದ್ಯೋಗ ಸಂಕಲ್ಪ ಯೋಜನೆ ಆರಂಭಿಸಲಾಗುತ್ತಿದ್ದು ಸರ್ಕಾರದ ವಿವಿಧ ಇಲಾಖೆಗಳ 72000 ಪ್ರಮುಖ ಖಾಲಿ ಹುದ್ದೆಗಳ ಭರ್ತಿ ಪ್ರಕ್ರಿಯೆ ಆರಂಭವಾಗಿದೆ.

ಮುಂದಿನ ಆರು ತಿಂಗಳಲ್ಲಿ ಎಲ್ಲಾ ಹುದ್ದೆಗಳ ಭರ್ತಿಗೆ ಅಧಿಸೂಚನೆ ಹೊರಡಿಸಲಾಗುವುದು ಎಂದು ಶಿವಕುಮಾರ್ ಹೇಳಿದರು. ರಾಜ್ಯದ ಹಿಂದುಳಿದ ಹತ್ತು ಜಿಲ್ಲೆಗಳಲ್ಲಿ ಉದ್ಯೋಗ ಸೃಷ್ಟಿಸುವ ಉದ್ಯಮಿಗಳಿಗೆ ಪ್ರೋತ್ಸಾಹ ನೀಡಲು ಉದ್ಯೋಗ ನಿಧಿ ಯೋಜನೆ ಜಾರಿಯಾಗಲಿದ್ದು ಪ್ರತಿ ಹೊಸ ಉದ್ಯೋಗಕ್ಕೆ ತಿಂಗಳಿಗೆ 2500 ಪ್ರೋತ್ಸಾಹಧನ ನೀಡಲಾಗುವುದು.

## ಮತ್ತೆ ರಂಗೇರಲಿದೆ ವಿಧಾನಮಂಡಲ ಅಧಿವೇಶನ : ನಾಗೇಂದ್ರಾಸ್ತ್ರ ಪ್ರಯೋಗಕ್ಕೆ ಬಿಜೆಪಿ ತಯಾರಿ

• ಉದಯವಾಹಿನಿ, ನವದೆಹಲಿ

ಮತ್ತೆ ಆರಂಭವಾಗಲಿರುವ ವಿಧಾನಮಂಡಲದ ಉಭಯ ಸದನಗಳ ಕಲಾಪವು ಆಡಳಿತಾರೂಢ ಕಾಂಗ್ರೆಸ್ ಹಾಗೂ ಪ್ರತಿಪಕ್ಷ ಬಿಜೆಪಿ ನಡುವಿನ ರಾಜಕೀಯ ಸಂಘರ್ಷಕ್ಕೆ ವೇದಿಕೆಯಾಗುವ ಸಾಧ್ಯತೆ ಹೆಚ್ಚಾಗಿದೆ. ವಾಲ್ಮೀಕಿ ಮಹರ್ಷಿ ಅಭಿವೃದ್ಧಿ ನಿಗಮದ ಹಣ ದುರುಪಯೋಗ ಪ್ರಕರಣವನ್ನು ಪ್ರಮುಖ ಅಸ್ತ್ರವನ್ನಾಗಿ ಮಾಡಿಕೊಂಡಿರುವ ಬಿಜೆಪಿ, ಸಚಿವ ಬಿ.ನಾಗೇಂದ್ರ ಅವರ ರಾಜೀನಾಮೆಗೆ ಆಗ್ರಹಿಸಿ ವಿಧಾನಸಭೆ ಮತ್ತು ವಿಧಾನ ಪರಿಷತ್ ಎರಡೂ ಕಡೆ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸಲು ಸಜ್ಜಾಗಿದೆ. ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ವರ್ಗಾವಣೆ ಮತ್ತು ದುರುಪಯೋಗ ಆರೋಪಗಳು ಈಗಾಗಲೇ ರಾಜ್ಯ ರಾಜಕೀಯದಲ್ಲಿ ಭಾರಿ ಚರ್ಚೆಗೆ ಕಾರಣವಾಗಿದ್ದವು. ವಾಲ್ಮೀಕಿ ನಿಗಮದ ಬಹುಕೋಟಿ ಹಣ ದುರುಪಯೋಗ ಪ್ರಕರಣ ಹಾಗೂ ಹೈಕೋರ್ಟ್ ಮತ್ತು ತನಿಖಾ ಸಂಸ್ಥೆಗಳ ಕಣ್ಣುತಪ್ಪಿಸಿ ಅಥವಾ ನಿಬಂಧನೆಗಳನ್ನು ಮೀರಿ ದೆಹಲಿಗೆ ತೆರಳಿರುವ ಆರೋಪಗಳನ್ನು ಮುನ್ನೆಲೆಗೆ ತಂದು ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸಲು ಕೇಸರಿ ಪಡೆ ಸಜ್ಜಾಗಿದೆ.ನ್ಯಾಯಾಲಯದ ಷರತ್ತುಗಳನ್ನು ಉಲ್ಲಂಘಿಸಿ ದೆಹಲಿಗೆ ಹೋಗಿ ಬಂದಿದ್ದಾರೆಂಬ ದಾಖಲೆಗಳು ಪ್ರತಿಪಕ್ಷಗಳ ಕೈಗೆ ಸಿಕ್ಕಿದ್ದು, ಅಧಿವೇಶನದಲ್ಲಿ ಸರ್ಕಾರದ ನೈತಿಕತೆಯನ್ನು ಪ್ರಶ್ನಿಸಲು ಇದು ಪ್ರಮುಖ ಅಸ್ತ್ರವಾಗಲಿದೆ.

ಸಚಿವರಾಗಿರುವ ನಾಗೇಂದ್ರ ಅವರು ಕೂಡಲೇ ತಮ ಸ್ಥಾನಕ್ಕೆ ರಾಜೀನಾಮೆ ನೀಡಲೇಬೇಕು ಎಂದು ವಿಧಾನಸಭೆ ಮತ್ತು ವಿಧಾನ ಪರಿಷತ್ ಎರಡೂ ಕಡೆಗಳಲ್ಲಿ ಸರ್ಕಾರದ ವಿರುದ್ಧ ಮುಗಿಬೀಳಲು ಬಿಜೆಪಿ ಶಾಸಕಾಂಗ ಪಕ್ಷ ಸಂಪೂರ್ಣ ಸಿದ್ಧತೆ ನಡೆಸಿದೆ. ಪ್ರಕರಣದ ತನಿಖೆ, ಹೊಣೆಗಾರಿಕೆ ನಿಗದಿ ಹಾಗೂ ಸಚಿವರ ರಾಜೀನಾಮೆ ವಿಚಾರವನ್ನು ಮುಂದಿಟ್ಟುಕೊಂಡು ಬಿಜೆಪಿ ಸರ್ಕಾರದ ವಿರುದ್ಧ ಸದನದೊಳಗೆ ನಿರಂತರ ಒತ್ತಡ ಹೇರುವ ತಂತ್ರ ರೂಪಿಸಿದೆ. ಇದಕ್ಕೆ ಮತ್ತಷ್ಟು ರಾಜಕೀಯ ಬಲ ನೀಡಲು ಬಿಜೆಪಿ, ಸಚಿವ ನಾಗೇಂದ್ರ ಅವರು ನ್ಯಾಯಾಲಯದ ನಿರ್ದೇಶನಗಳನ್ನು ಉಲ್ಲಂಘಿಸಿ ದೆಹಲಿಗೆ ತೆರಳಿ ಬಂದಿದ್ದಾರೆ ಎಂಬ ಆರೋಪವನ್ನೂ ಮುನ್ನೆಲೆಗೆ ತರುವ ಸಾಧ್ಯತೆ ಇದೆ. ನ್ಯಾಯಾಲಯದ ಆದೇಶದ ಹಿನ್ನೆಲೆಯಲ್ಲಿಯೇ ಈ ಪ್ರವಾಸ ನಡೆದಿದೆ ಎಂಬ ಆರೋಪವನ್ನು ಪ್ರತಿಪಕ್ಷಗಳು ಪ್ರಶ್ನಿಸುತ್ತಿದ್ದು, ಇದನ್ನೇ ಸರ್ಕಾರದ ವಿರುದ್ಧದ ಮತ್ತೊಂದು ಅಸ್ತ್ರವನ್ನಾಗಿ ಬಳಸಲು ಬಿಜೆಪಿ ಮುಂದಾಗಿದೆ.



### ಒತ್ತಡ ಹೇರುವುದು ಪ್ರತಿಪಕ್ಷದ ಉದ್ದೇಶ

**ಪ್ರತಿಪಕ್ಷದಲ್ಲಿದ್ದಾಗ ಒಂದು ನಿಲುವು ಅಧಿಕಾರದಲ್ಲಿದ್ದಾಗ ಮತ್ತೊಂದು ನಿಲುವು ಎಂಬ ಆರೋಪವನ್ನು ಕಾಂಗ್ರೆಸ್ ವಿರುದ್ಧ ಮಾಡುವುದು ಬಿಜೆಪಿ ತಂತ್ರದ ಭಾಗವಾಗಬಹುದು. ಇದರ ಪರಿಣಾಮವಾಗಿ ಸೋಮವಾರದಿಂದ ಆರಂಭವಾಗುವ ಕಲಾಪದಲ್ಲಿ ನಾಗೇಂದ್ರ ರಾಜೀನಾಮೆ ವಿಚಾರವೇ ಪ್ರಮುಖ ಸಂಘರ್ಷದ ಕೇಂದ್ರವಾಗುವ ಸಾಧ್ಯತೆ ಇದೆ. ಪ್ರಶ್ನೋತ್ತರ ಅವಧಿ, ಶೂನ್ಯವೇಳೆ ಸೇರಿದಂತೆ ಕಲಾಪದ ವಿವಿಧ ಹಂತಗಳಲ್ಲಿ ಬಿಜೆಪಿ ಸದಸ್ಯರು ಪ್ರಕರಣವನ್ನು ಪ್ರಸ್ತಾಪಿಸಿ ಸರ್ಕಾರದಿಂದ ಸ್ಪಷ್ಟನೆಗೆ ಒತ್ತಾಯಿಸಬಹುದು. ಸರ್ಕಾರ ಸಮರ್ಪಕ ಉತ್ತರ ನೀಡದಿದ್ದರೆ ಧರಣಿ, ಘೋಷಣೆ, ಸಭಾತ್ಯಾಗ ಸೇರಿದಂತೆ ವಿವಿಧ ರೀತಿಯ ಪ್ರತಿಭಟನಾ ತಂತ್ರಗಳನ್ನು ಬಿಜೆಪಿ ಅನುಸರಿಸುವ ಸಾಧ್ಯತೆ ಇದೆ. ವಿಧಾನಸಭೆಯ ಜೊತೆಗೆ ವಿಧಾನ ಪರಿಷತ್ತಿನಲ್ಲಿಯೂ ಇದೇ ವಿಚಾರವನ್ನು ಪ್ರತಿಧ್ವನಿಸುವಂತೆ ಮಾಡುವ ಮೂಲಕ ಸರ್ಕಾರದ ಮೇಲೆ ಎರಡು ಸದನಗಳಿಂದಲೂ ಒತ್ತಡ ಹೇರುವುದು ಪ್ರತಿಪಕ್ಷದ ಉದ್ದೇಶವಾಗಿದೆ.**

ಈ ಬಾರಿ ಬಿಜೆಪಿ ತಂತ್ರದ ಮತ್ತೊಂದು ಪ್ರಮುಖ ಅಂಶವೆಂದರೆ ದೆಹಲಿಯ ಜಂತರ್ ಮಂತರ್‌ನಲ್ಲಿ ವಿದ್ಯಾರ್ಥಿಗಳ ಪ್ರತಿಭಟನೆ ವೇಳೆ ನಡೆದ ಪೊಲೀಸ್ ಲಾಠಿಚಾರ್ಜ್ ಪ್ರಕರಣ. ಈ ಘಟನೆಗೆ ಸಂಬಂಧಿಸಿ ಕೇಂದ್ರ ಗೃಹ ಸಚಿವ ಅಮಿತ್ ಶಾ ರಾಜೀನಾಮೆಗೆ ಕಾಂಗ್ರೆಸ್ ಒತ್ತಾಯಿಸಿದ್ದ ವಿಚಾರವನ್ನು ಬಿಜೆಪಿ ಇದೀಗ ರಾಜ್ಯದ ಸದನದಲ್ಲಿ ಪ್ರಸ್ತಾಪಿಸುವ ಸಾಧ್ಯತೆ ಇದೆ. ದೆಹಲಿಯ ಜಂತರ್ ಮಂತರ್‌ನಲ್ಲಿ ವಿದ್ಯಾರ್ಥಿಗಳ ಪ್ರತಿಭಟನೆ ವೇಳೆ ಪೊಲೀಸರು ನಡೆಸಿದ ಲಾಠಿಚಾರ್ಜ್ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ರಾಜೀನಾಮೆಗೆ ಆಗ್ರಹಿಸಿ ರಾಷ್ಟ್ರಮಟ್ಟದಲ್ಲಿ ಹಾಗೂ ಸಂಸತ್ತಿನ ಉಭಯ ಸದನಗಳಲ್ಲಿ (ಲೋಕಸಭೆ ಮತ್ತು ರಾಜ್ಯಸಭೆ) ಕಾಂಗ್ರೆಸ್ ಪಕ್ಷ ಮುಗಿಬಿದ್ದಿತ್ತು.

**ಈ ದಿನದ ದರ** ಪೆಟ್ರೋಲ್: 111.68₹/L ಡೀಸೆಲ್ : 99.56₹/L ಬಂಗಾರ: ₹ 15,513 /Gram 24ct ₹ 14,220 /Gram 22ct ಬೆಳ್ಳಿ: ₹250.00/

ಉದಯ ವಾಹಿನಿ
ಬೆಂಗಳೂರು
ಸೋಮವಾರ 17 ಆಗಸ್ಟ್ 2026


## ಕೆಂಪಾಪುರ ಪ್ರೀಮಿಯರ್ ಲೀಗ್ ಸೀಸನ್-2ರ ಗೋಲ್ಡನ್ ಈಗಲ್ ತಂಡ ಚಾಂಪಿಯನ್

• ಉದಯವಾಹಿನಿ, ಬೆಂಗಳೂರು

ಕೆಂಪಾಪುರ ಸ್ಪೋರ್ಟ್ಸ್ ಕ್ಲಬ್ ವತಿಯಿಂದ ಆಯೋಜಿಸಲಾಗಿದ್ದ ಕೆಂಪಾಪುರ ಪ್ರೀಮಿಯರ್ ಲೀಗ್ ಸೀಸನ್– 2 ಕ್ರಿಕೆಟ್ ಪಂದ್ಯಾವಳಿ ಯಶಸ್ವಿಯಾಗಿ ಸಂಪನ್ನಗೊಂಡಿದ್ದು, ರೋಚಕ ಫೈನಲ್ ಪಂದ್ಯದಲ್ಲಿ ಗೋಲ್ಡನ್ ಈಗಲ್ ತಂಡವು ಅತ್ಯುತ್ತಮ ಪ್ರದರ್ಶನ ನೀಡಿ ಚಾಂಪಿಯನ್ ಆಗಿ ಹೊರಹೊಮ್ಮಿದೆ.

ಕ್ರೀಡಾ ಪ್ರತಿಭೆಗಳನ್ನು ಉತ್ತೇಜಿಸುವ ಹಾಗೂ ಯುವಕರಲ್ಲಿ ಕ್ರೀಡಾಸಕ್ತಿ ಬೆಳೆಸುವ ಉದ್ದೇಶದಿಂದ ಆಯೋಜಿಸಲಾದ ಈ ಪಂದ್ಯಾವಳಿಯಲ್ಲಿ ಹಲವು ತಂಡಗಳು ಭಾಗವಹಿಸಿ ಉತ್ತಮ ಕ್ರೀಡಾ ಸ್ಪರ್ಧೆಯನ್ನು


ಉದಯವಾಹಿನಿ ಚಿತ್ರ

ನೀಡಿದವು. ಕೆಂಪಾಪುರ ಸ್ಪೋರ್ಟ್ಸ್ ಕ್ಲಬ್ ವತಿಯಿಂದ ನಡೆದ ಈ ಪಂದ್ಯಾವಳಿಯ ಯಶಸ್ಸಿಗೆ ಕ್ಲಬ್ ಅಧ್ಯಕ್ಷರಾದ ಮೂರ್ತಿ, ಖಜಾಂಚಿ ರಾಹುಲ್ ಗೌಡ ಹಾಗೂ ಕಾರ್ಯದರ್ಶಿ ಧೀರಜ್ ಅವರ ನೇತೃತ್ವ ಮತ್ತು ಸಹಕಾರ ಪ್ರಮುಖವಾಗಿತ್ತು.

ವಿಜೇತ ಗೋಲ್ಡನ್ ಈಗಲ್ ತಂಡಕ್ಕೆ ಕೆಂಪಾಪುರ ಸ್ಪೋರ್ಟ್ಸ್ ಕ್ಲಬ್ ಪದಾಧಿಕಾರಿಗಳು ಹಾಗೂ ಕ್ರೀಡಾಭಿಮಾನಿಗಳು ಅಭಿನಂದನೆ ಸಲ್ಲಿಸಿದರು.

ಮುಂದಿನ ದಿನಗಳಲ್ಲಿ ಇನ್ನಷ್ಟು ಕ್ರೀಡಾ ಚಟುವಟಿಕೆಗಳು ಮತ್ತು ಯುವಕರಿಗಾಗಿ ಕ್ರೀಡಾ ಪ್ರತಿಭೆಗಳನ್ನು ಉತ್ತೇಜಿಸುವ ವಿವಿಧ ಕ್ರೀಡಾ ಕಾರ್ಯಕ್ರಮಗಳನ್ನು ಆಯೋಜಿಸುವುದಾಗಿ ಕ್ಲಬ್ ತಿಳಿಸಿದೆ.

## ಸುಧೀಂದ್ರನಗರ ರಾಯರ ಮಠದಲ್ಲಿ ಗುರುರಾಯರ ಆರಾಧನೆ

• ಉದಯವಾಹಿನಿ, ಬೆಂಗಳೂರು

ಶ್ರೀರಾಘವೇಂದ್ರ ಸೇವಾ ಸಮಿತಿಯ ವತಿಯಿಂದ ನಗರದ ಈಜುಕೊಳ ಬಡಾವಣೆಯ ಸುಧೀಂದ್ರನಗರದ 6ನೇ ಅಡ್ಡರಸ್ತೆಯಲ್ಲಿರುವ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಕಲಿಯುಗದ ಕಾಮಧೇನು' ಶ್ರೀ ರಾಘವೇಂದ್ರ ಗುರುಸಾರ್ವಭೌಮರ 355ನೇ ಆರಾಧನಾ ಮಹೋತ್ಸವವನ್ನು ಆ.19ರಿಂದ ಸೆಪ್ಟೆಂಬರ್ 1ರ ವರೆಗೆ ಆಯೋಜಿಸಲಾಗಿದೆ.

ಆಗಸ್ಟ್ 19–ಶ್ರೀಮನ್ಮಾಧವತೀರ್ಥ ಮಠಾಧೀಶರಾದ ಶ್ರೀ 1008 ಶ್ರೀ ವಿದ್ಯಾವಲ್ಲಭಮಾಧವತೀರ್ಥ ಶ್ರೀ ಪಾದಂಗಳವರಿಂದ ಸಮಾರಂಭದ ಉದ್ಘಾಟನೆ ಮತ್ತು ಅನುಗ್ರಹ ಸಂದೇಶ.

**ಭಜನಾ ಕಾರ್ಯಕ್ರಮ :** ಪ್ರತಿದಿನ ಸಂಜೆ 5–30ಕ್ಕೆ ವಿವಿಧ ಭಜನಾ


ಉದಯವಾಹಿನಿ ಚಿತ್ರ

ಮಂಡಲಿಗಳ ಸದಸ್ಯರಿಂದ ಹರಿ ಭಜನೆ ಸಾಂಸ್ಕೃತಿಕ ಕಾರ್ಯಕ್ರಮಗಳು (ಪ್ರತಿದಿನ ಸಂಜೆ 6–30ಕ್ಕೆ) ಆಗಸ್ಟ್ 20–ಕೆ.ಪಿ. ಶಿಶಿರ್ ಮತ್ತು ಸಂಗಡಿಗರಿಂದ ಹರಿದಾಸ ವರ್ಷಿಣಿ, ಆಗಸ್ಟ್ 21–ಪ್ರಾಣೇಶ್ ಪಿ. ಭಾರದ್ವಾಜ್ ಮತ್ತು ಸಂಗಡಿಗರಿಂದ ಹರಿದಾಸ ವೈಭವ, ಆ. 22– ಡಾ. ಮಾಲಿನಿ ರವಿಶಂಕರ್ ಶಿಷ್ಯೆಯರಾದ ಕು. ಶ್ರೇಯಾ ಮತ್ತು ಕು. ಮಂದಾರ ಇವರಿಂದ ಭರತನಾಟ್ಯ ಪ್ರದರ್ಶನ, ಆ. 23– ಶ್ರೀ ಮತಿ ಮಾನಸಾ ಕುಲಕರ್ಣಿ, ಶ್ರೀಮತಿ ಸುಮಲತಾ ಮಂಜುನಾಥ್ ಮತ್ತು ಸಂಗಡಿಗರಿಂದ ಹರಿದಾಸ ಮಂಜರಿ, ಆ.24–ಕು.ನಿರೀಕ್ಷ ಎಂ.ರಾವ್ ಮತ್ತು ಸಂಗಡಿಗರಿಂದ ಹರಿದಾಸ ಝೇಂಕಾರ, ಆ. 25–ಕು.ಸ್ಫೂರ್ತಿ ಗುರುಪ್ರಸಾದ್ ಮತ್ತು ಸಂಗಡಿಗರಿಂದ ವೀಣಾ ವಾದನ, ಆ. 26– ಶ್ರೀ ಸುಶ್ರುತ್ ರಾವ್ ಮತ್ತು ಸಂಗಡಿಗರಿಂದ ಹರಿದಾಸ ನಮನ.

ಆ.27–ಶ್ರೀವೇಣುಗೋಪಾಲಾಚಾರ್ ಅಗ್ನಿಹೋತ್ರಿ, ಆ. 28– ಶ್ರೀ ವೆಂಕಟನರಸಿಂಹಾಚಾರ್, ಆಗಸ್ಟ್ 29– ಶ್ರೀ ಮರುತಾಚಾರ್ ,ಆ. 29–ಶ್ರೀ ಮಾಳಗಿ ಆನಂದತೀರ್ಥಾಚಾರ್, ಆಗಸ್ಟ್ 30– ಶ್ರೀ ದ್ವೈಪಾಯನಾಚಾರ್, ಆಗಸ್ಟ್ 31–ಶ್ರೀಕಲ್ಯಾ ಶ್ರೀಕಾಂತಾಚಾರ್ ಇವರುಗಳು ಪ್ರವಚನ ನೀಡಲಿದ್ದಾರೆ.

## ಸಂಚಾರಿ ಪೊಲೀಸ್ ಮೇಲೆ ಆಟೋ ಹತ್ತಿಸಲು ಯತ್ನ- ಚಾಲಕ ಬಂಧನ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಸಂಚಾರ ಪೊಲೀಸ್ ಹೆಡ್ ಕಾನ್‌ಸ್ಟೆಬಲ್ ಮೇಲೆ ಆಟೋ ಹತ್ತಿಸಲು ಯತ್ನಿಸಿದ ಆಟೋ ಚಾಲಕನನ್ನು ಬೆನ್ನಟ್ಟಿ ಬಂಧಿಸಲಾಗಿದೆ.

ಹುಳಿಮಾವು ಸಂಚಾರ ಪೊಲೀಸ್ ವ್ಯಾಪ್ತಿಯಲ್ಲಿ ಬನ್ನೇರುಘಟ್ಟ ರಸ್ತೆಯ ಮೀನಾಕ್ಷಿ ಮಾಲ್ ಬಳಿಯ ಗುಹೆ ದೇವಾಲಯ ರಸ್ತೆಯಲ್ಲಿ ಘಟನೆ ನಡೆದಿದ್ದು, ಪೊಲೀಸ್ ಅಧಿಕಾರಿಯ ಬಲಗಾಲಿನ ಮೂಳೆ ಮುರಿದಿದೆ.

ಆರೋಪಿ ಆಟೋ ಚಾಲಕ ಕಾರ್ತಿಕ್ ಸಣ್ಣ ಅಪಘಾತದ ನಂತರ ಮತ್ತೊಬ್ಬ ಆಟೋ ಚಾಲಕನೊಂದಿಗೆ ಜಗಳವಾಡುತ್ತಿದ್ದ. ರಾತ್ರಿ 8.30 ಕ್ಕೆ, ಕರ್ತವ್ಯದಲ್ಲಿದ್ದ ಹೆಡ್ ಕಾನ್‌ಸ್ಟೆಬಲ್ ಹುಳಿಮಾವು ಸಂಚಾರ ಪೊಲೀಸ್ ಠಾಣೆಯ ಮಾಣಿಕ್ ಪ್ರಭು ಎನ್ ಬಿರಾದಾರ್, ಎರಡೂ ವಾಹನಗಳು ಸಂಚಾರಕ್ಕೆ ಅಡ್ಡಿಯಾಗುತ್ತಿರುವುದರಿಂದ ಅವುಗಳನ್ನು ಬದಿಗೆ ಸರಿಸಲು ಕೇಳಿಕೊಂಡರು. ಜೊತೆಗೆ ವಾಹನದ ದಾಖಲೆಗಳನ್ನು ಕೇಳಿದರು. ಈ ವೇಳೆ ಕಾರ್ತಿಕ್ ಮತ್ತು ಆತನ ಆಟೋದಲ್ಲಿದ್ದ ಮೂವರು ಪ್ರಯಾಣಿಕರು ಪರಾರಿಯಾಗಲು ಯತ್ನಿಸಿ ಪೊಲೀಸರಿಗೆ ಡಿಕ್ಕಿ ಹೊಡೆಯಲು ಪ್ರಯತ್ನಿಸಿದರು. ಬಿರಾದಾರ್ ಸಾರ್ವಜನಿಕರ ಸಹಾಯದಿಂದ ಆಟೋವನ್ನು ಬೆನ್ನಟ್ಟಿ ಚಾಲಕನನ್ನು ಬಂಧಿಸಿದರು. ಈ ಸಂಬಂಧ ಅವರು ದೂರು ದಾಖಲಿಸಿದ್ದಾರೆ.

ಸಾರ್ವಜನಿಕ ಸೇವಕನನ್ನು ಕರ್ತವ್ಯದಿಂದ ತಡೆಯಲು ಹಲ್ಲೆ ಅಥವಾ ಕ್ರಿಮಿನಲ್ ಬಲಪ್ರಯೋಗದ ಪ್ರಕರಣ (ಬಿಎನ್‌ಎಸ್ 132) ಮತ್ತು ಬಿಎನ್‌ಎಸ್‌ನ ಇತರ ವಿಭಾಗಗಳೊಂದಿಗೆ ಆರೋಪಿ ಆಟೋ ಚಾಲಕನ ವಿರುದ್ಧ ದಾಖಲಾಗಿದೆ

## ಒಂದೇ ಸರ್ಕಾರ, ಒಂದೇ ಯೋಜನೆ, ಮೂರು ಅಂಕಿ ಅಂಶ': ಆರ್ ಅಶೋಕ್ ಆಗ್ರಹ

### ತಮ್ಮದೇ ಸರ್ಕಾರದ ಅಧಿಕೃತ ದಾಖಲೆಗಳಿಗೆ ವಿರುದ್ಧವಾದ ಅಂಕಿಅಂಶಗಳನ್ನು ನೀಡಿ ಕರ್ನಾಟಕದ ಜನರನ್ನು ದಾರಿ ತಪ್ಪಿಸಲು ಮುಂದಾಗಿದ್ದಾರೆ

• ಉದಯವಾಹಿನಿ, ಬೆಂಗಳೂರು

**1** ಶಕ್ತಿ ಯೋಜನೆಯ ವ್ಯತ್ಯಾಸ
**2** ಗ್ಯಾರಂಟಿ ಗೋಲ್ ಮಾಲ್
**3** ಯೋಜನೆಗೆ 19,771 ಕೋಟಿ

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸರ್ಕಾರದ ಗ್ಯಾರಂಟಿ ಯೋಜನೆಗಳ ಕುರಿತು ನೀಡಿದ ಅಂಕಿಅಂಶಗಳು, ಅವರದೇ ಸರ್ಕಾರದ ಅಧಿಕೃತ ದಾಖಲೆಗಳಿಗೆ ವಿರುದ್ಧವಾಗಿವೆ ಎಂದು ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್. ಅಶೋಕ್ ಆರೋಪಿಸಿದ್ದಾರೆ.

ಗ್ಯಾರಂಟಿ ಯೋಜನೆಗಳಡಿ ಇದುವರೆಗೆ ಖರ್ಚು ಮಾಡಿರುವ ಪ್ರತಿಯೊಂದು ರೂಪಾಯಿ ಹಾಗೂ ಫಲಾನುಭವಿಗಳಸಂಪೂರ್ಣ ವಿವರಗಳನ್ನು ಒಳಗೊಂಡ ಶ್ವೇತಪತ್ರವನ್ನು ಸರ್ಕಾರ ಹೊರಡಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಸ್ವಾತಂತ್ರ್ಯ ದಿನವು ಜನರ ಮುಂದೆ ಸತ್ಯವನ್ನು ಹೇಳುವ ದಿನವಾಗಿದ್ದು, ಅನುಕೂಲಕರ ಅಂಕಿಅಂಶಗಳನ್ನು ಸೃಷ್ಟಿಸುವ ದಿನವಲ್ಲ ಎಂದು ಹೇಳಿರುವ ಬಿಜೆಪಿ ನಾಯಕರು, ಮುಖ್ಯಮಂತ್ರಿ ಕರ್ನಾಟಕದ ಜನರಿಗೆ ವಿವರಣೆ ನೀಡಬೇಕಿದೆ ಎಂದು ಆರೋಪಿಸಿದ್ದಾರೆ.

ಕರ್ನಾಟಕದ ಅಂಕಿಅಂಶಗಳು ತಾಳೆಯಾಗುತ್ತಿಲ್ಲ. ಸ್ವಾತಂತ್ರ್ಯ ದಿನದಂದೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ತಮ್ಮದೇ ಸರ್ಕಾರದ ಅಧಿಕೃತ ದಾಖಲೆಗಳಿಗೆ ವಿರುದ್ಧವಾದ ಅಂಕಿಅಂಶಗಳನ್ನು ನೀಡಿ ಕರ್ನಾಟಕದ ಜನರನ್ನು ದಾರಿ ತಪ್ಪಿಸಲು ಮುಂದಾಗಿದ್ದಾರೆ. ಇದು ಇನ್ನು ರಾಜಕೀಯ ವಾಕ್ಚಾತುರ್ಯದ ಪ್ರಶ್ನೆಯಲ್ಲ. ಇದು ಸಾರ್ವಜನಿಕ ಹೊಣೆಗಾರಿಕೆ ಮತ್ತು ತೆರಿಗೆದಾರರ ಹಣಕ್ಕೆ ಸಂಬಂಧಿಸಿದ ಮೂಲಭೂತ ಪ್ರಶ್ನೆಯಾಗಿದೆ, ಎಂದು ಅಶೋಕ ಹೇಳಿದ್ದಾರೆ.

ಪ್ರತಿ ಕುಟುಂಬದ ಮಹಿಳಾ ಮುಖ್ಯಸ್ಥರಿಗೆ ತಿಂಗಳಿಗೆ 2,000 ರೂ. ನೆರವು ನೀಡುವ ಗೃಹಲಕ್ಷ್ಮಿ ಯೋಜನೆ ಕುರಿತು ಅಶೋಕ ಅವರು, ಕರ್ನಾಟಕ ಸರ್ಕಾರ ಹಾಗೂ



ಉದಯವಾಹಿನಿ ಚಿತ್ರ

ಸರ್ಕಾರವು ತನ್ನದೇ ಇಲಾಖೆಗಳು, ಸಚಿವರು, ಅಧಿಕೃತ ಪ್ರಕಟಣೆಗಳು ಮತ್ತು ಅನುಷ್ಠಾನ ಸಮಿತಿಗಳು ಪರಸ್ಪರ ವಿರುದ್ಧವಾದ ಲೆಕ್ಕಗಳನ್ನು ನೀಡುತ್ತಿರುವಾಗ, ಇಷ್ಟೊಂದು ದೊಡ್ಡ ಗ್ಯಾರಂಟಿ ಯೋಜನೆಗಳ ಮೂಲಕ ಸಾರ್ವಜನಿಕ ಹಣವನ್ನು ಖರ್ಚು ಮಾಡಲು ಸಾಧ್ಯವಿಲ್ಲ ಎಂದು ಅವರು ಹೇಳಿದ್ದಾರೆ.
-ಆರ್ ಅಶೋಕ್

**ಶ್ವೇತಪತ್ರ ಹೊರಡಿಸ ಬೇಕು**

ಕಾಂಗ್ರೆಸ್ ಸರ್ಕಾರವು ಘೋಷಣೆಗಳು ಮತ್ತು ಜಾಹೀರಾತುಗಳಿಂದ ಕರ್ನಾಟಕದ ತೆರಿಗೆದಾರರನ್ನು ಮರುಳುಗೊಳಿಸಬಹುದು ಎಂಬಂತೆ ವರ್ತಿಸುವುದನ್ನು ನಿಲ್ಲಿಸಬೇಕು ಎಂದು ಒತ್ತಾಯಿಸಿದ ಅವರು, ಗ್ಯಾರಂಟಿ ಯೋಜನೆಗಳಡಿ ಖರ್ಚಾದ ಪ್ರತಿಯೊಂದು ರೂಪಾಯಿ ಮತ್ತು ಒಳಗೊಂಡಿರುವ ಪ್ರತಿಯೊಬ್ಬ ಫಲಾನುಭವಿಯ ವಿವರಗಳನ್ನು ಒಳಗೊಂಡ ಶ್ವೇತಪತ್ರ ಹೊರಡಿಸಬೇಕು ಎಂದು ಆಗ್ರಹಿಸಿದ್ದಾರೆ.

ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧಿಕೃತ ಮಾಹಿತಿಯ ಪ್ರಕಾರ ಫಲಾನುಭವಿಗಳ ಸಂಖ್ಯೆ 1.24 ಕೋಟಿ (1,24,48,000) ಎಂದು ತಿಳಿಸಿದ್ದಾರೆ. 2026ರ ಮೇ 25ರಂದು ಮುಖ್ಯಮಂತ್ರಿಗಳ ಕಚೇರಿಯೂ ಇದೇ ಅಂಕಿಅಂಶವನ್ನು ಉಲ್ಲೇಖಿಸಿತ್ತು. ಆದರೆ ನಿನ್ನೆ ಸ್ವಾತಂತ್ರ್ಯ ದಿನದ ಭಾಷಣದಲ್ಲಿ ಡಿ ಕೆ ಶಿವಕುಮಾರ್ ಅವರು 1.28 ಕೋಟಿ ಫಲಾನುಭವಿಗಳಿದ್ದಾರೆ ಎಂದು ಹೇಳಿದ್ದಾರೆ ಎಂದು ಅಶೋಕ ಆರೋಪಿಸಿದ್ದಾರೆ.

ಹಾಗಾದರೆ ಈ ಹೆಚ್ಚುವರಿ 4 ಲಕ್ಷ ಫಲಾನುಭವಿಗಳು ಏಕಾಏಕಿ ಎಲ್ಲಿಂದ ಬಂದರು? ಅವರು ಯಾರು? ಈ ಹೆಚ್ಚುವರಿ ಹಣ ಪಾವತಿಗೆ ಅನುಮತಿ ನೀಡಿದವರು ಯಾರು? ಮುಖ್ಯವಾಗಿ, ಯಾರ ಖಾತೆಗಳಿಗೆ ಈ ಹಣ ಜಮೆಯಾಗಿದೆ? ಎಂದು ಅವರು ಪ್ರಶ್ನಿಸಿದ್ದಾರೆ.ಮಹಿಳೆಯರಿಗೆ ಉಚಿತ ಬಸ್ ಪ್ರಯಾಣದ ಸೌಲಭ್ಯ ನೀಡುವ ಶಕ್ತಿ ಯೋಜನೆ ಕುರಿತು ಅಶೋಕ ಅವರು, 2026ರ ಜೂನ್ 11ರಂದು ಮುಖ್ಯಮಂತ್ರಿಗಳ ಕಚೇರಿ ಯೋಜನೆಗೆ 19,771 ಕೋಟಿ ರೂ. ವೆಚ್ಚವಾಗಿದೆ ಎಂದು ತಿಳಿಸಿತ್ತು ಎಂದಿದ್ದಾರೆ.ಇದಕ್ಕೂ ಮುನ್ನ ಮೇ 25ರಂದು ಮುಖ್ಯಮಂತ್ರಿಗಳ ಕಚೇರಿ ನೀಡಿದ್ದ ಮಾಹಿತಿಯಲ್ಲಿ ವೆಚ್ಚ 18,943 ಕೋಟಿ ರೂ. ಎಂದು ಹೇಳಲಾಗಿತ್ತು. ಆದರೆ ಸ್ವಾತಂತ್ರ್ಯ ದಿನದ ಭಾಷಣದಲ್ಲಿ ಮುಖ್ಯಮಂತ್ರಿ ಕೇವಲ 14,875 ಕೋಟಿ ರೂ. ವೆಚ್ಚವಾಗಿದೆ ಎಂದು ಹೇಳಿದ್ದಾರೆ. ಒಂದೇ ಸರ್ಕಾರ. ಒಂದೇ ಯೋಜನೆ. ಮೂರು ವಿಭಿನ್ನ ಅಂಕಿಅಂಶಗಳು ಸಾವಿರಾರು ಕೋಟಿ ರೂಪಾಯಿಗಳ ವ್ಯತ್ಯಾಸ ಎಂದು ಅಶೋಕ್ ಹೇಳಿದ್ದಾರೆ.ಹಾಗಾದರೆ ಯಾವ ಅಂಕಿಅಂಶ ಸರಿಯಾಗಿದೆ? ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಪ್ಪು ಹೇಳುತ್ತಿದ್ದಾರೆಯೇ? ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಪ್ಪು ಹೇಳುತ್ತಿದ್ದಾರೆಯೇ? ಅಥವಾ ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ತಪ್ಪು ಹೇಳುತ್ತಿದ್ದಾರೆಯೇ? ಎಂದು ಅವರು ಪ್ರಶ್ನಿಸಿದ್ದಾರೆ.

## ನೂರಕ್ಕೂ ಹೆಚ್ಚು ಮಕ್ಕಳಿಗೆ ಪ್ರತಿಭಾ ಪುರಸ್ಕಾರ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೆ.ಆರ್.ಪುರ,

ಕೆಂಚಪ್ಪ ಹಾಗೂ ಲಕ್ಷ್ಮಮ್ಮ ಚಾರಿಟೇಬಲ್ ಟ್ರಸ್ಟ್ ಹಾಗೂ ಕುಟುಂಬದ ವತಿಯಿಂದ ದೇವಸಂದ್ರದ ಬಿವಿಎನ್ ಎಸ್ ಎಸ್ ಶಾಲೆಯ ನೂರಕ್ಕು ಹೆಚ್ಚು ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಬಡಮಕ್ಕಳಿಗೆ ಶಿಕ್ಷಣ ಶುಲ್ಕ ಬೆಂಗಳೂರು ಪೂರ್ವ ಜಿಲ್ಲಾ ಅಧ್ಯಕ್ಷ ಡಿ.ಕೆ.ಮೋಹನ್ ಹಾಗೂ ಮಾಜಿ ಶಾಸಕಿ ಕೆ. ಪೂರ್ಣಿಮಾ ಶ್ರೀನಿವಾಸ್ ಅವರು ವಿತರಣೆ ಮಾಡಿದರು.

ದೇವಸಂದ್ರದ ಬಿವಿಎನ್‌ಎಚ್‌ಎಸ್ ಎಸ್ ಶಾಲೆಯಲ್ಲಿ ಏರ್ಪಡಿಸಿದ್ದ 80ನೇ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರತಿಭಾ ಪುರಸ್ಕಾರ ಮಾಡಿ ಮಾತನಾಡಿದ ಬೆಂಗಳೂರು ಪೂರ್ವ ಜಿಲ್ಲಾ ಅಧ್ಯಕ್ಷ ಡಿ.ಕೆ.ಮೋಹನ್ ಅವರು ಟ್ರಸ್ಟ್‌ನ ವತಿಯಿಂದ ಬಡ ಮಕ್ಕಳ ಹಾಗೂ ಪ್ರತಿಭಾನ್ವಿತ ಮಕ್ಕಳ ಅಭಿವೃದ್ಧಿಗೆ ಕೆಂಚಪ್ಪಹಾಗೂ ಲಕ್ಷ್ಮಮ್ಮಚಾರಿಟೇಬಲ್ ಟ್ರಸ್ಟ್ ಹಾಗೂ ಕುಟುಂಬದವರು ಹಲವು ಯೋಜನೆಗಳನ್ನು ರೂಪಿಸಿದ್ದು ಮಕ್ಕಳ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಲಾಗುವುದು ಎಂದು ನುಡಿದರು.ಯುವಜನತೆ ದೇಶದ ಭವಿಷ್ಯವಾಗಿದ್ದು, ಪ್ರತಿಭಾನ್ವಿತ ಬಡ ಮಕ್ಕಳ ಜೀವನಕ್ಕೆ ಆಧಾರವಾಗುವ ನಿಟ್ಟಿನಲ್ಲಿ ಅಳಿಲು ಸೇವೆ ಮಾಡುತ್ತಿದ್ದು,ಉಳ್ಳವರು ಸಮಾಜಮುಖಿ ಕಾರ್ಯಗಳನ್ನು ಮಾಡುವಂತೆ ಮನವಿ ಮಾಡಿದರು.

ಮಾಜಿ ಶಾಸಕಿ ಪೂರ್ಣಿಮಾ ಶ್ರೀನಿವಾಸ್ ಅವರು ಮಾತನಾಡಿ ಸಮಾಜಮುಖಿ ಕಾರ್ಯಗಳಿಂದ ಮಾತ್ರ ನಮ್ಮ ಕರ್ತವ್ಯ ನಿರ್ವಹಣೆ ಸಾದ್ಯ,ಸ್ವಾತಂತ್ರ್ಯದ ಜೋತೆಗೆ ಸಮಾಜಿ ಕಾರ್ಯಗಳನ್ನು ಮಾಡುವ ಮೂಲಕ ದೇಶಕ್ಕೆ ಸೇವೆ ಸಲ್ಲಿಸುವಂತೆ ನುಡಿದರು. ಕಾಂಗ್ರೆಸ್ ಮುಖಂಡ ಡಿ.ಕೆ.ರಮೇಶ್ ಅವರು ಮಾತನಾಡಿ ಮಕ್ಕಳ ಶಿಕ್ಷಣ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ನುಡಿದರು.

## ರೋಗಿಗಳ ಸುರಕ್ಷತೆ ಗುಣಮಟ್ಟದ ಚಿಕಿತ್ಸೆಗೆ ಕ್ಲಿನಿಕಲ್ ಪರ್ಫ್ಯೂಷನ್ ಕ್ಷೇತ್ರ ಬಲಪಡಿಸಲು ಕೆಸಿಪಿಎ ಚಾಲನೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಾದ್ಯಂತ ಕ್ಲಿನಿಕಲ್ ಪರ್ಫ್ಯೂಷನಿಸ್ಟ್‌ಗಳನ್ನು ಒಂದೇ ವೇದಿಕೆಯಡಿ ಒಗ್ಗೂಡಿಸಿ, ವೃತ್ತಿಪರ ಗುಣಮಟ್ಟ, ಶಿಕ್ಷಣ, ಸಂಶೋಧನೆ ಹಾಗೂ ರೋಗಿಗಳ ಸುರಕ್ಷತೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಕರ್ನಾಟಕ ಕ್ಲಿನಿಕಲ್ ಪರ್ಫ್ಯೂಷನಿಸ್ಟ್ಸ್ ಅಸೋಸಿಯೇಷನ್ ಅನ್ನು ಬೆಂಗಳೂರಿನಲ್ಲಿ ಅಧಿಕೃತವಾಗಿ ಉದ್ಘಾಟಿಸಲಾಯಿತು. ರೋಗಿಗಳ ಸುರಕ್ಷತೆ ಮತ್ತು ಗುಣಮಟ್ಟದ ಚಿಕಿತ್ಸೆಗೆ ಕ್ಲಿನಿಕಲ್ ಪರ್ಫ್ಯೂಷನ್ ಕ್ಷೇತ್ರ ಬಲಪಡಿಸಲು ಚಾಲನೆ

ಕಾರ್ಯಕ್ರಮಕ್ಕೆ ಪದ್ಮಶ್ರೀ ಡಾ. ಸಿ. ಎನ್. ಮಂಜುನಾಥ್, ಸಂಸದರು, ಮುಖ್ಯ ಅತಿಥಿಯಾಗಿ ಆಗಮಿಸಿದ್ದರುರಾಜೇಶ್ ಶೆಣೈ ಗೌರವ ಅತಿಥಿಯಾಗಿ ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

ಕಾರ್ಯಕ್ರಮದಲ್ಲಿ ಹಿರಿಯ ಕ್ಲಿನಿಕಲ್ ಪರ್ಫ್ಯೂಷನಿಸ್ಟ್‌ಗಳು, ವೈದ್ಯಕೀಯ ಕ್ಷೇತ್ರದ ಗಣ್ಯರು ಹಾಗೂ ಸಂಬಂಧಿತ ಆರೋಗ್ಯ ಕ್ಷೇತ್ರದ ಪ್ರತಿನಿಧಿಗಳು ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ಕೆಸಿಪಿಎ ವೈಜ್ಞಾನಿಕ ಸಮಿತಿ ಸದಸ್ಯರಾದ ಶ್ರೀ ಮಧನ್ ಕುಮಾರ್, ಕೆಸಿಪಿಎ ಅಧ್ಯಕ್ಷರಾದ ಶ್ರೀ ಕೃಷ್ಣ ಪ್ರಸಾದ್ ಟಿ. ಎಚ್., ಕೆಸಿಪಿಎ ಪ್ರಧಾನ ಕಾರ್ಯದರ್ಶಿ ಶ್ರೀ ಗೋಪು ಸಬಾಪತಿ, ಕೆಸಿಪಿಎ ಜಂಟಿ ಕಾರ್ಯದರ್ಶಿ ಶ್ರೀಜಾನ್ ಪೀಟರ್ ಪ್ಯಾಟ್ರಿಕ್, ಐಸೆಕ್ಟ್ ಪ್ರಧಾನ ಕಾರ್ಯದರ್ಶಿ ಶ್ರೀಲೋಕನಾಥ್ ತಿವಾರಿ ಹಾಗೂ ಕೆಸಿಪಿಎ ಕಾರ್ಯಕಾರಿ ಸಮಿತಿ ಸದಸ್ಯರಾದ ಶ್ರೀ ತೇಜಸ್ ಮಂಜು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ 'ಕ್ಲಿನಿಕಲ್ ಪರ್ಫ್ಯೂಷನಿಸ್ಟ್' ಪುಸ್ತಕವನ್ನು ಬಿಡುಗಡೆ ಮಾಡಲಾಯಿತು. ಹೃದಯ ಶಸ್ತ್ರಚಿಕಿತ್ಸೆ ಮತ್ತು ತೀವ್ರ ನಿಗಾ ಚಿಕಿತ್ಸೆಯಲ್ಲಿ ಕ್ಲಿನಿಕಲ್ ಪರ್ಫ್ಯೂಷನಿಸ್ಟ್‌ಗಳು ಅತ್ಯಂತ ಪ್ರಮುಖ ಪಾತ್ರ ವಹಿಸುತ್ತಾರೆ. ತೆರೆದ ಹೃದಯ ಶಸ್ತ್ರಚಿಕಿತ್ಸೆಯ ಹೃದಯ-ಶ್ವಾಸಕ ಯಂತ್ರವನ್ನು ನಿರ್ವಹಿಸುವುದರ ಜೊತೆಗೆ, ರೋಗಿಯ ರಕ್ತಸಂಚಾರ, ಆಮ್ಲಜನಕ ಪೂರೈಕೆ ಹಾಗೂ ದೇಹದ ಪ್ರಮುಖ ಶಾರೀರಿಕ ಸ್ಥಿತಿಗಳನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡುತ್ತಾರೆ.

**ಸಾಕ್ಷ್ಯಾಧಾರಿತ ಚಿಕಿತ್ಸಾ ಪದ್ಧತಿ**

ಕ್ಲಿನಿಕಲ್ ಪರ್ಫ್ಯೂಷನ್ ಕ್ಷೇತ್ರದಲ್ಲಿ ಉನ್ನತ ವೃತ್ತಿಪರ ಮಾನದಂಡಗಳನ್ನು ರೂಪಿಸುವುದು, ರೋಗಿಗಳ ಸುರಕ್ಷತೆಯನ್ನು ಉತ್ತೇಜಿಸುವುದು, ನಿರಂತರ ವೈದ್ಯಕೀಯ ಶಿಕ್ಷಣ ಮತ್ತು ತರಬೇತಿಗೆ ಅವಕಾಶ ಕಲ್ಪಿಸುವುದು, ವೈಜ್ಞಾನಿಕ ಸಮ್ಮೇಳನಗಳು ಹಾಗೂ ಕಾರ್ಯಾಗಾರಗಳನ್ನು ಆಯೋಜಿಸುವುದು ಮತ್ತು ಸಂಶೋಧನೆ ಹಾಗೂ ಸಾಕ್ಷ್ಯಾಧಾರಿತ ಚಿಕಿತ್ಸಾ ಪದ್ಧತಿಗಳನ್ನು ಉತ್ತೇಜಿಸುವುದು ಕೆಸಿಪಿಎಯ ಪ್ರಮುಖ ಉದ್ದೇಶಗಳಾಗಿವೆ

## ತಕ್ಷಣವೇ ನೈಸ್ ರಸ್ತೆಯಲ್ಲಿ ಟೋಲ್ ಸಂಗ್ರಹ ನಿಲ್ಲಿಸಿ: ಸಿಎಂ ಡಿಕೆ ಶಿವಕುಮಾರ್‌ಗೆ ಎಚ್.ಡಿ ಕುಮಾರಸ್ವಾಮಿ ಪತ್ರ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ನೈಸ್ ರಸ್ತೆಯಲ್ಲಿ ಟೋಲ್ ಸಂಗ್ರಹ ಸ್ಥಗಿತಗೊಳಿಸುವಂತೆ ಆಗ್ರಹಿಸಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಪತ್ರ ಬರೆದಿದ್ದಾರೆ. ನೈಸ್ ರಸ್ತೆಯಲ್ಲಿ ಅನಧಿಕೃತವಾಗಿ ಟೋಲ್ ಸಂಗ್ರಹ ಮಾಡಲಾಗ್ತಿದೆ. ಕೋರ್ಟ್ ಆದೇಶ ಇದ್ದರೂ ಸರ್ಕಾರ ಗಮನ ಹರಿಸುತ್ತಿಲ್ಲ ಎಂದು ದೂರಿರುವ ಅವರು,

ನೈಸ್ ಯೋಜನೆಯನ್ನ ಸರ್ಕಾರದ ವಶಕ್ಕೆ ಪಡೆದು ಟೋಲ್ ಸಂಗ್ರಹ ಕೂಡಲೇ ನಿಲ್ಲಿಸುವಂತೆ ಆಗ್ರಹಿಸಿದ್ದಾರೆ. ಬೆಂಗಳೂರುಮೈಸೂರು ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಯೋಜನೆ ಅಕ್ರಮಗಳ ಬಗ್ಗೆ ಕುಮಾರಸ್ವಾಮಿಯವರು ಪತ್ರದಲ್ಲಿ ಉಲ್ಲೇಖಿಸಿದ್ದು, ನೈಸ್ ಸಂಸ್ಥೆ ಈ ನೆಲದ ಕಾನೂನು ಹಾಗೂ ಫ್ರೇಮ್ ವರ್ಕ್ ಅಗ್ರಿಮೆಂಟ್ ಉಲ್ಲಂಘಿಸಿದೆ. ಭೂಸ್ವಾಧೀನ ಮಾಡಿಕೊಂಡು 23 ವರ್ಷಗಳೇ ಕಳೆದರೂ ಭೂಮಿ ಕಳೆದುಕೊಂಡ ರೈತರಿಗೆ ಇನ್ನೂ ಪರಿಹಾರ ನೀಡದಿರುವುದರಿಂದ ಅವರೆಲ್ಲರೂ ಬೀದಿ ಪಾಲಾಗಿದ್ದಾರೆ ಎಂದವರು ದೂರಿದ್ದಾರೆ. ಕರ್ನಾಟಕ ಹೈಕೋರ್ಟ್, ಸುಪ್ರೀಂಕೋರ್ಟ್ ತೀರ್ಪುಗಳಲ್ಲಿ ನೀಡಿರುವ ನಿರ್ದೇಶನಗಳಂತೆ ಹಾಗೂ ವಿಧಾನಸಭೆ ಸದನ ಸಮಿತಿ ಮತ್ತು ಸಚಿವ ಸಂಪುಟದ ಉಪ ಸಮಿತಿಗಳ ಶಿಫಾರಸುಗಳಲ್ಲಿ ದಾಖಲಿಸಿರುವಂತೆ ನೈಸ್ ಸಂಸ್ಥೆ ಃಯೋಜನೆ ಅನುಷ್ಠಾನದಲ್ಲಿ ಫ್ರೇಮ್ ವರ್ಕ್ ಅಗ್ರಿಮೆಂಟ್ ಮತ್ತು ಪ್ರಾಜೆಕ್ಟ್ ಟೆಕ್ನಿಕಲ್ ಅಗ್ರಿಮೆಂಟ್‌ಗಳಲ್ಲಿರುವ ನಿಬಂಧನೆ ಮತ್ತು ಷರತ್ತುಗಳನ್ನು ಸ್ಪಷ್ಟವಾಗಿ ಉಲ್ಲಂಘಿಸಲಾಗಿದೆ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ನೈಸ್ ಸಂಸ್ಥೆ ಅನಧಿಕೃತವಾಗಿ ಸಂಗ್ರಹಿಸುತ್ತಿರುವ ಟೋಲ್ ಅನ್ನು ತಕ್ಷಣ ಜಾರಿಗೆ ಬರುವಂತೆ ನಿಷೇಧಿಸಬೇಕು. ಒಂದು ಶಾಸನವನ್ನು ರಚಿಸುವ ಮೂಲಕ ನೈಸ್ ರಸ್ತೆ ಯೋಜನೆಯನ್ನು ರಾಜ್ಯ ಸರಕಾರ ಸ್ವಾಧೀನ ಮಾಡಿಕೊಳ್ಳಬೇಕು ಎಂದು ಕುಮಾರಸ್ವಾಮಿ ಅವರು ಪತ್ರದ ಮೂಲಕ ಆಗ್ರಹಿಸಿದ್ದಾರೆ.

## ಮನೆ ವಿಚಾರದ ವೈಷಮ್ಯಕ್ಕೆ ಕೊಲೆಗಾರನೂ ಆತ್ಮಹತ್ಯೆ!

• ಉದಯವಾಹಿನಿ, ಬೆಂಗಳೂರು

ಮನೆ ನಿರ್ಮಾಣ ಮತ್ತು ಆಸ್ತಿ ವಿಚಾರಕ್ಕೆ ಸಂಬಂಧಿಸಿದ ವೈಷಮ್ಯ ಹಿನ್ನೆಲೆಯಲ್ಲಿ, 32 ವರ್ಷದ ಸಿವಿಲ್ ಎಂಜಿನಿಯರ್ ಒಬ್ಬರು ಬೆಂಗಳೂರಿನ ಸಾಫ್ಟ್‌ವೇರ್ ಎಂಜಿನಿಯರ್ (ಟೆಕ್ಕಿ) ಒಬ್ಬರನ್ನು ದೋಣಿಯಿಂದ ಹೊಡೆದು ಕೊಲೆ ಮಾಡಿ, ಬಳಿಕ ತಾವು ಕೂಡ ನೇಣಿಗೆ ಶರಣಾಗಿರುವ ದೋಖಾಜನಕ ಘಟನೆ ನಗರದಲ್ಲಿ ವರದಿಯಾಗಿದೆ.

ಆರೋಪಿಯು ಕೃತ್ಯ ಎಸಗುವ ಮುನ್ನ ತನ್ನ ಸಹೋದರನಿಗೆ ವಾಟ್ಸಾಪ್ ಮೂಲಕ ಧ್ವನಿ ಸಂದೇಶ ರವಾನಿಸಿ, ಈ ಭೀಕರ ಕೃತ್ಯದ ಸುಳಿವು ನೀಡಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.

ಪೊಲೀಸರ ಪ್ರಾಥಮಿಕ ತನಿಖೆಯ ಪ್ರಕಾರ, ಸಿವಿಲ್ ಎಂಜಿನಿಯರ್ ಹಾಗೂ ಟೆಕ್ಕಿ ನಡುವೆ ಮನೆ ನಿರ್ಮಾಣದ ಕಾಮಗಾರಿ ಹಾಗೂ ಹಣಕಾಸಿನ ವಿಚಾರದಲ್ಲಿ ತೀವ್ರ ವಿವಾದವಿತ್ತು. ಹಲವು ದಿನಗಳಿಂದ ನಡೆಯುತ್ತಿದ್ದ ಈ ಜಗಳ ಅಂತಿಮವಾಗಿ ವಿಕೋಪಕ್ಕೆ ತಿರುಗಿತ್ತು.ಘಟನಾ ದಿನದಂದು ಆರೋಪಿಯು ಟೆಕ್ಕಿಯ ಮನೆಗೆ ತೆರಳಿ ತೀವ್ರವಾಗಿ ಗಲಾಟೆ ಮಾಡಿದ್ದಾನೆ. ಮಾತಿಗೆ ಮಾತು ಬೆಳೆದು ಆಕ್ರೋಶಗೊಂಡ ಸಿವಿಲ್ ಎಂಜಿನಿಯರ್, ಟೆಕ್ಕಿಯ ಮೇಲೆ ಭೀಕರವಾಗಿ ಹಲ್ಲೆ ನಡೆಸಿ ಕೊಲೆ ಮಾಡಿದ್ದಾನೆ.

## ಆಟವಾಡುತ್ತಾ 3ನೇ ಮಹಡಿಯಿಂದ ಕೆಳಗೆ ಬಿದ್ದ ಮಗುವಿಗೆ ಗಂಭೀರ ಗಾಯ; ಐಸಿಯುನಲ್ಲಿ ಚಿಕಿತ್ಸೆ

• ಉದಯವಾಹಿನಿ, ಬೆಂಗಳೂರು

ಪೋಷಕರ ಸಣ್ಣ ನಿರ್ಲಕ್ಷ್ಯವೂ ಪುಟ್ಟ ಮಕ್ಕಳ ಜೀವಕ್ಕೆ ಎಷ್ಟು ಅಪಾಯಕಾರಿಯಾಗಬಲ್ಲದು ಎಂಬುದಕ್ಕೆ ಇಲ್ಲೊಂದು ನಿದರ್ಶನವಿದೆ.ಕಟ್ಟಡದ ಮೂರನೇ ಮಹಡಿಯಲ್ಲಿ ಆಟವಾಡುತ್ತಾ ಗ್ರಿಲ್ ಮೇಲೆ ಹತ್ತಿದ ಮಗು, ಆಯತಪ್ಪಿ ಕೆಳಗೆ ಬಿದ್ದು ಗಂಭೀರವಾಗಿ ಗಾಯಗೊಂಡ ಘಟನೆ ಬೆಂಗಳೂರಿನ ಮಡಿವಾಳದ ಚಿಕ್ಕ ಆಡುಗೋಡಿಯಲ್ಲಿ ನಡೆದಿದೆ. ಸ್ಥಳದಲ್ಲಿದ್ದ ಸ್ಥಳೀಯರ ನೆರವಿನಿಂದ ಮಗುವನ್ನು ತಕ್ಷಣವೇ ಆಸ್ಪತ್ರೆಗೆ ದಾಖಲಿಸಲಾಗಿದೆ. ಮಗು ನೆಲಕ್ಕಪ್ಪಳಿಸಿರುವ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ.ಪೋಷಕರು ತಮ್ಮ ಮನೆ ಮುಂದೆ ಮಗುವನ್ನು ಆಟವಾಡಲು ಬಿಟ್ಟಿದ್ದರು. ಮಗು ಗ್ರಿಲ್ ಮೇಲೆ ಹತ್ತಿ ಆಯತಪ್ಪಿ ಕೆಳಗೆ ಬಿದ್ದಿದೆ ಎಂದು ಪೊಲೀಸ್ ಮೂಲಗಳಿಂದ ತಿಳಿದು ಬಂದಿದೆ. ಕೋರಮಂಗಲದ ಖಾಸಗಿ ಆಸ್ಪತ್ರೆಯ ತೀವ್ರ ನಿಗಾ ಘಟಕದಲ್ಲಿ ಮಗುವಿಗೆ ಚಿಕಿತ್ಸೆ ನೀಡಲಾಗುತ್ತಿದೆ. ಸಾಕಷ್ಟು ಬಾರಿ ತಿಳಿಸಿದರೂ ಪೋಷಕರು ಸೂಕ್ತ ಗಮನ ಹರಿಸಿರಲಿಲ್ಲ ಎಂದು ಅಕ್ಕಪಕ್ಕದವರು ಹೇಳುತ್ತಿದ್ದಾರೆ.

ಈಗ ಅವರ ಅಜಾಗರೂಕತೆಯೇ ಮಗುವಿನ ಜೀವಕ್ಕೆ ಕಂಟಕವಾಗಿ ಪರಿಣಮಿಸಿದೆ ಎಂದು ಮಗುವನ್ನು ಸ್ಕೂಟರ್‌ನಲ್ಲಿ ಕರೆದೊಯ್ದು ಆಸ್ಪತ್ರೆಗೆ ದಾಖಲಿಸಲು ನೆರವಾದ ಡಾರ್ವಿನ್ ಎಂಬವರು ತಿಳಿಸಿದರು.

## ಮೋದಿನೇ ಡಿ.ಕೆ - ಡಿ.ಕೆ ಅಂತಿದ್ದಾರೆ ನೀವ್ಯಾಕೆ ತಲೆ ಕೆಡಿಸಿಕೊಳ್ಳುತ್ತಿದ್ದೀರಾ?

• ಉದಯವಾಹಿನಿ, ಬೆಂಗಳೂರು

ವಿಧಾನಸೌಧದಲ್ಲಿ ಆಯೋಜಿಸಿದ್ದ ಫ್ರೀಡಂ ಹಬ್ಬ ಸಮಾರಂಭದಲ್ಲಿ ಸಿಎಂ ಡಿ.ಕೆ.ಶಿವಕುಮಾರ್ ಅವರು ಮಾತನಾಡುವಾಗ ಜನರು, ಮೋದಿ ಮೋದಿ ಅಂತ ಕೂಗಿದ ಪ್ರಸಂಗ ನಡೆಯಿತು. ಸಮಾರಂಭದಲ್ಲಿ ಸಿಎಂ ಮಾತು ಆರಂಭಿಸುತ್ತಿದ್ದಂತೆ ಜನರು, 'ಮೋದಿ ಮೋದಿ' ಅಂತಾ ಕೂಗಿದರು. ಅದಕ್ಕೆ ಪ್ರತಿಕ್ರಿಯಿಸಿದ ಸಿಎಂ, 'ಮೋದಿನೇ ಡಿಕೆ ಡಿಕೆ ಅಂತಿದ್ದಾರೆ.. ನೀವು ಮೋದಿ ಮೋದಿ ಅಂತಿದ್ದೀರಾ' ಎಂದು ಜನರಿಗೆ ಟಾಂಗ್ ಕೊಟ್ಟರು. ಆಗ ಮತ್ತೆ ಜನರು, 'ಡಿಕೆ ಡಿಕೆ' ಅಂತ ಕೂಗಿದರು. 80ನೇ ವರ್ಷದ ಸ್ವಾತಂತ್ರ್ಯದ ದಿನಾಚರಣೆ ಕೋರುತ್ತೇನೆ. ಇದು ನವಯುಗ, ಇದು ನಿಮ್ಮ ಯುಗ, ನವ ಕರ್ನಾಟಕ, ನಿಮ್ಮ ಬೆಂಗಳೂರು. ನಮ್ಮ ಹಿರಿಯರು ಕೊಟ್ಟ ಸ್ವಾತಂತ್ರ್ಯದ ಸಂಗ್ರಾಮದಲ್ಲಿ ನಾವು ಇದನ್ನ ಉಳಿಸಿಕೊಳ್ಳಬೇಕು. ಇಡೀ ದೇಶ ನಿಮ್ಮನ್ನ ನೋಡ್ತಾ ಇದೆ.ಇಂದು ಮಧ್ಯಾಹ್ನ 15 ಸಾವಿರ ಮಂದಿ ವಿಧಾನಸೌಧಕ್ಕೆ ಬಂದಿದ್ದರು. ಮೊದಲು ಜನ ಇಲ್ಲಿ ಬಂದು ಫೋಟೊ ತೆಗೆದುಕೊಂಡು, ಕಡಲೆಕಾಯಿ ತಿನ್ಕೊಂಡು ಹೋಗ್ತಿದ್ರು. ಈ ದೇಗುಲದಲ್ಲಿ ನೀವು ನಾವು ಸೇರಿದ್ದು ಒಂದು ಪುಣ್ಯ.

## ಸಿಲಿಕಾನ್ ಸಿಟಿಯಲ್ಲಿ ಹಳ್ಳಿ ಸೊಗಡಿನ ಊರಹಬ್ಬ

• ಉದಯವಾಹಿನಿ, ಬೆಂಗಳೂರು

ಸ್ವಾತಂತ್ರ್ಯ ದಿನಾಚರಣೆ ವೇಳೆ ಫ್ರೀಡಂ ಹಬ್ಬದ ಮೂಲಕ ಸಿಲಿಕಾನ್ ಸಿಟಿ ಜನರು ಮನರಂಜನೆಯ ರಸದೌತಣಕ್ಕೆ ರಾಜ್ಯ ಸರ್ಕಾರ ವೇದಿಕೆ ಮಾಡಿಕೊಟ್ಟಿತ್ತು. ಇದರ ಬೆನ್ನಲ್ಲೇ ಮತ್ತೊಂದು ಹಬ್ಬ, ಹಬ್ಬ ಅಲ್ಲ ಈ ಭಾರಿ ಅದ್ದೂರಿ ಜಾತ್ರೆಗೆ ರಾಜ್ಯ ಸರ್ಕಾರ ತಯಾರಿ ಮಾಡಿಕೊಳ್ಳುತ್ತಿದೆ. ಅದರಂತೆ, ಮುಂಬರುವ ಡಿಸೆಂಬರ್‌ನಲ್ಲಿ ಬೆಂಗಳೂರು ಜಾತ್ರೆ ಆಯೋಜಿಸುವುದಾಗಿ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಘೋಷಣೆ ಮಾಡಿದ್ದಾರೆ. ಆ ಕುರಿತು ವರದಿ ಇಲ್ಲಿದೆ: ಫ್ರೀಡಂ ಹಬ್ಬದ ವೇಳೆ ಬೆಂಗಳೂರು ಜಾತ್ರೆ ಬಗ್ಗೆ ಘೋಷಣೆ ಮಾಡಿದ ಸಿಎಂ ಡಿಕೆ ಶಿವಕುಮಾರ್, ಡಿಸೆಂಬರ್‌ನಲ್ಲಿ ಬೆಂಗಳೂರು ಜಾತ್ರೆಯನ್ನ ಆಚರಣೆ ಮಾಡಬೇಕು ಅಂತೇಳಿ ಈಗಾಗಲೇ ಕೃಷ್ಣ ಬೈರೇಗೌಡರು ಅದಕ್ಕೆ ತಯಾರನ್ನ ಮಾಡ್ಲಿಕ್ಕೆ ಸಿದ್ಧತೆಯನ್ನ ನಡೆಸ್ತಾ ಇದ್ದಾರೆ ಎಂದು ತಿಳಿಸಿದರು. ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ, ನೀವು ನಿಮ್ಮ ಊರಿನಲ್ಲಿ ದೊಡ್ಡ ಜಾತ್ರೆಗಳನ್ನ ನೋಡಿರ್ತೀರ. ಬೆಂಗಳೂರು ಜಾತ್ರೆಯನ್ನ, ಸಿಎಂ ಡಿಕೆ ಶಿವಕುಮಾರ್ ಸೂಚನೆಯ ಮೇರೆಗೆ ಇದೆ ಡಿಸೆಂಬರ್‌ನಲ್ಲಿ ಆಯೋಜನೆ ಮಾಡುತ್ತೇವೆ ಎಂದು ತಿಳಿಸಿದರು.


## ಖರ್ಗೆ ಕುಟುಂಬವನ್ನು ರಜಾಕರಿಂದ ರಕ್ಷಿಸಿದ್ದು ಆರ್‌ಎಸ್‌ಎಸ್ : ಬಿ.ಎಲ್.ಸಂತೋಷ್

### ಬಿಜೆಪಿ ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್.ಸಂತೋಷ್ ತಿಳಿಸಿದ್ದಾರೆ.

• ಉದಯವಾಹಿನಿ, ಬೆಂಗಳೂರು

ಆರ್‌ಎಸ್‌ಎಸ್ ಈ ಹಿಂದೆಯೂ ನೋಂದಣಿ ಆಗಿಲ್ಲ, ಮುಂದೆನೂ ಆಗಲ್ಲ. ಏಕೆಂದರೆ ನಿಮ್ಮ ನೋಂದಣಿಯಿಂದ ಜಗತ್ತು ನಡೆಯುವುದಿಲ್ಲ ಎಂದು ಬಿಜೆಪಿ ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್.ಸಂತೋಷ್ ತಿಳಿಸಿದರು.80ನೇ ಸ್ವಾತಂತ್ರ್ಯ ದಿನಾಚರಣೆಯ ಹಿನ್ನೆಲೆಯಲ್ಲಿ ಬೆಂಗಳೂರಿನ ಬನ್ನಪ್ಪ ಪಾರ್ಕ್‌ನಲ್ಲಿ ಆಯೋಜಿಸಿದ್ದ 'ಅಖಂಡ ಭಾರತ ಸಂಕಲ್ಪ ದಿನ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಆರ್‌ಎಸ್‌ಎಸ್ ಈ ಹಿಂದೆಯೂ ನೋಂದಣಿ ಆಗಿಲ್ಲ, ಮುಂದೆನೂ ಆಗಲ್ಲ. ಏಕೆಂದರೆ ನಿಮ್ಮ ನೋಂದಣಿಯಿಂದ ಜಗತ್ತು ನಡೆಯುವುದಿಲ್ಲ. ದೇಶದ ಇತಿಹಾಸ ಹಾಗೂ ಆರ್‌ಎಸ್‌ಎಸ್‌ನ ಕೊಡುಗೆಗಳೇನು ಎಂಬುದು ಅಭಿಮಾನಿಗಳಿಗೆ ಗೊತ್ತಿದೆ ಎಂದರು. ನೋಂದಣಿಯಾಗಿರುವ ಸಂಸ್ಥೆಗಳು ಆರ್ಥಿಕ ಅವ್ಯವಹಾರದಲ್ಲಿ ಮುಳುಗಿ ಜೈಲಿಗೆ ಹೋಗುವ ಈ ಸಂದರ್ಭದಲ್ಲಿ ಕಳೆದ ನೂರು ವರ್ಷಗಳಲ್ಲಿ ನೋಂದಣಿಯನ್ನೇ ಮಾಡಿಕೊಳ್ಳದೇ ಇರುವ ಆರ್‌ಎಸ್‌ಎಸ್ ಪ್ರತಿಯೊಬ್ಬರ ವಿಶ್ವಾಸಗಳಿಸಿ ದೇಶ ಸೇವೆ ಮಾಡುತ್ತಿದೆ. ವಿಭಜನೆ ಸಮಯದಲ್ಲಿ ಹಿಂದೂಗಳನ್ನು ರಕ್ಷಣೆ ಮಾಡಿದೆ. ನೋಂದಣಿಯಾಗದೇ ಹಿಂದೂಗಳನ್ನು ರಕ್ಷಿಸಿ, ಸುರಕ್ಷಿತ ಪ್ರದೇಶಗಳಿಗೆ ಶಿಫ್ಟ್ ಮಾಡಿಸಿದೆ. ನೋಂದಣಿ ಮಾಡುವುದು ಮಾನದಂಡ ಅಲ್ಲ ಪ್ರಿಯಾಂಕ್ ಖರ್ಗೆ ಅವರೇ. ನೋಂದಣಿ ಮಾಡಿದವರು ಅವ್ಯವಹಾರಗಳಲ್ಲಿ ತೊಡಗಿದ್ದಾರೆ. ನೋಂದಣಿಯಾಗದಿರುವ ಆರ್‌ಎಸ್‌ಎಸ್ ಕೋಟ್ಯಂತರ ಜನರ ನಂಬಿಕೆ ಜೊತೆ ಕೆಲಸ


ಉದಯವಾಹಿನಿ ಚಿತ್ರ

ಮಾಡುತ್ತಿದೆ ಎಂದು ತಿರುಗೇಟು ನೀಡಿದರು. ಮಲ್ಲಿಕಾರ್ಜುನ ಖರ್ಗೆಯವರ ಕುಟುಂಬ ಹೈದರಾಬಾದ್‌ನಿಂದ ರಜಾಕರ ದಾಳಿಗೆ ಹೆದರಿ ಗುಲ್ಬರ್ಗಾಕ್ಕೆ ಓಡಿ ಬಂದಿತ್ತು. ಆ ರಜಾಕರನ್ನು ಎದುರಿಸಿದ್ದು ಇದೇ ಆರ್‌ಎಸ್‌ಎಸ್. ಆಗ ಆರ್‌ಎಸ್‌ಎಸ್ ನೋಂದಣಿಯಾಗಿರಲಿಲ್ಲ. ನೀವು ನಿಮ್ಮ ಕುಟುಂಬ ಇಲ್ಲಿ ನೆಮ್ಮದಿಯಿಂದ ವಾಸ ಮಾಡುವುದಕ್ಕೆ ಹಿಂದೂಗಳು ಕಾರಣ ಎಂದು ಇದೇ ವೇಳೆ ತಿಳಿಸಿದರು.

ಆವತ್ತು ನೀವು ಓಡಿ ಬಂದ ದಿನ ರಜಾಕರ ವಿರುದ್ಧ ನಿಂತಿದ್ದು ಇದೇ ಆರ್‌ಎಸ್‌ಎಸ್. ಆಗ ನಿಮ್ಮ ಪೊಲೀಸರು ಬಂದಿಲ್ಲ. ನಿಮ್ಮ ರಾಜಕಾರಣಿಗಳು ಬಂದಿಲ್ಲ. ಇದೇ ಆರ್‌ಎಸ್‌ಎಸ್. ಹುಡುಗರು ರಸ್ತೆಗಳಲ್ಲಿ ನಿಂತಿದ್ದರು. ಇದನ್ನು ನೀವೂ ನೆನಪಿಟ್ಟುಕೊಳ್ಳಬೇಕು ಎಂದು ಪ್ರಿಯಾಂಕ್ ಖರ್ಗೆಗೆ ತಿರುಗೇಟು ನೀಡಿದ್ದಾರೆ.

**ಕ್ರಾಂತಿಕಾರಿಗಳ ತ್ಯಾಗವನ್ನು ಸ್ಮರಿಸಿ**

ಭಾರತದ ಸ್ವಾತಂತ್ರ್ಯ ಕೇವಲ ಉಪ್ಪಿನ ಸತ್ಯಾಗ್ರಹ ಅಥವಾ ಚರಕದಿಂದ ಬಂದಿದ್ದಲ್ಲ. ಸಾವಿರಾರು ಕ್ರಾಂತಿಕಾರಿಗಳು ಮತ್ತು ಸ್ವಾತಂತ್ರ್ಯ ಹೋರಾಟಗಾರರ ತ್ಯಾಗದಿಂದ ಸ್ವಾತಂತ್ರ್ಯ ದೊರೆಯಿತು. ಮದನ್ ಲಾಲ್ ಧಿಂಗ್ರಾ, ಚಂದ್ರಶೇಖರ್ ಆಜಾದ್, ಭಗತ್ ಸಿಂಗ್, ಸುಖದೇವ್ ಮತ್ತು ರಾಜಗುರು ಅವರಂತಹ ಕ್ರಾಂತಿಕಾರಿಗಳ ತ್ಯಾಗವನ್ನು ಸ್ಮರಿಸಬೇಕು ಎಂದರು.

**ಎರಡು ಕ್ಷೇತ್ರಗಳಲ್ಲಿ ಹಿಂದೂ ನಾಯಕರನ್ನು ನಿಲ್ಲಿಸಿ**

ಇವತ್ತು ಬೆಂಗಳೂರಿನ ಶಿವಾಜಿನಗರ ಮತ್ತು ಚಾಮರಾಜಪೇಟೆ ವಿಧಾನಸಭಾ ಕ್ಷೇತ್ರದಲ್ಲಿ 20 ವರ್ಷದಿಂದ ಹಿಂದೂ ಪ್ರತಿನಿಧಿಯನ್ನು ಶಾಸಕನಾಗಿ ಮಾಡಲು ಆಗಿಲ್ಲ. ಈ ಎರಡೂ ಕ್ಷೇತ್ರದಲ್ಲಿ ಹಿಂದೂ ನಾಯಕನನ್ನು ಚುನಾವಣೆಗೆ ನಿಲ್ಲಿಸಿ, ಗೆಲ್ಲಿಸಿ ನೋಡೋಣ ಎಂದು ಸವಾಲು ಹಾಕಿದರು.

# ಮೂವರ ಎನ್‌ಕೌಂಟರ್ ಖಂಡನೀಯ, ಸೂಕ್ತ ತನಿಖೆ ಆಗಬೇಕು: ಬಿ.ವೈ. ವಿಜಯೇಂದ್ರ

## ರಾಜ್ಯದಲ್ಲಿ ಗೋವುಗಳ ಸಾಗಣೆ ಅತಿ ಹೆಚ್ಚು ನಡೆಯುತ್ತಿದೆ. ಇದಕ್ಕೆ ಕಡಿವಾಣ ಹಾಕುವ ಕೆಲಸ ಮಾಡಲೇಬೇಕು ಎಂದು ಆಗ್ರಹಿಸಿದರು

• **ಉದಯವಾಹಿನಿ ಶಿವಮೊಗ್ಗ:**

ಚಾಮರಾಜ ನಗರದ ಹನೂರು ತಾಲ್ಲೂಕಿನಲ್ಲಿ ಕಾಡಿಗೆ ಹೋದ ಮೂವರನ್ನು ಎನ್‌ಕೌಂಟರ್ ಮಾಡಿರುವುದು ಖಂಡನೀಯ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದ್ದಾರೆ. ಅಲ್ಲದೆ, ಪ್ರಕರಣವನ್ನು ಸೂಕ್ತ ರೀತಿಯಲ್ಲಿ ತನಿಖೆ ನಡೆಸಬೇಕೆಂದು ಆಗ್ರಹಿಸಿದ್ದಾರೆ. ನಗರದಲ್ಲಿ ಭಾನುವಾರ ಮಾಧ್ಯಮದವರೊಂದಿಗೆ ಮಾತನಾಡಿದ

1 : ಸದನದ ಒಳಗೂ, ಹೊರಗೂ ಹೋರಾಟ
2 : ಸರ್ಕಾರ ಸೂಕ್ತ ಕ್ರಮ ತೆಗೆದುಕೊಳ್ಳಬೇಕು
3 : ಬಿಜೆಪಿ ಗಂಭೀರವಾಗಿ ತೆಗೆದುಕೊಂಡಿದೆ

ಅವರು, ನಿನ್ನೆ ಬೆಳಗಿನ ಜಾವ ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನಲ್ಲಿ ಮೂವರನ್ನು ಕಾಡಿನೊಳಗೆ ಬೇಟೆಗೆ ಹೋಗಿದ್ದರೆಂದು ಎನ್‌ಕೌಂಟರ್ ಮಾಡಿರುವಂತದ್ದನ್ನು ಖಂಡಿತ ಯಾರು ಒಪ್ಪುವುದಕ್ಕೆ ಸಾಧ್ಯ ಇಲ್ಲ. ರಾಜ್ಯ ಸರ್ಕಾರ ಇದನ್ನು ಸರಿಯಾಗಿ ತನಿಖೆ ನಡೆಸಬೇಕಾಗುತ್ತದೆ. ಎನ್‌ಕೌಂಟರ್‌ನಲ್ಲಿ ಪ್ರಾಣ ಕಳೆದುಕೊಂಡವರಿಗೆ ರಾಜ್ಯ ಸರ್ಕಾರ ಸೂಕ್ತ ಪರಿಹಾರ ಕೊಡಬೇಕು. ಕಾಡಿನಲ್ಲಿ ಬೇಟೆಗೆ ಹೋಗಿದ್ದರೆಂದು, ಅವರನ್ನು ಎನ್‌ಕೌಂಟರ್ ಮಾಡುವ ಅವಕಾಶಗಳಿಲ್ಲ. ಇದನ್ನು ಖಂಡಿಸುತ್ತೇವೆ ಎಂದರು.

**ಗೋವುಕಳ್ಳರ ಬಗ್ಗೆ ಸರ್ಕಾರ ಸೂಕ್ತ ಕ್ರಮ ತೆಗೆದುಕೊಳ್ಳಬೇಕು:** ನಿನ್ನೆ ಮಧ್ಯರಾತ್ರಿ ಹೊಸನಗರ ತಾಲ್ಲೂಕು ಹರತಾಳು ಗ್ರಾಮದಲ್ಲಿ ಭಜರಂಗದಳದ ಕಾರ್ಯಕರ್ತರ ಮನೆಯಲ್ಲಿಯೇ ಗೋವುಗಳನ್ನು ಕಳ್ಳತನ ಮಾಡಿರುವಂತದ್ದು ನಡೆದಿದೆ. ಅಕ್ರಮವಾಗಿ ಗೋವು ಸಾಗಣೆ ಮಾಡುವಾಗ ಬೆನ್ನಟ್ಟಿದಂತಹ ನಮ್ಮ ಭಜರಂಗದಳದ ಕಾರ್ಯಕರ್ತರ ಮೇಲೆ ಮಾರಣಾಂತಿಕ ಹಲ್ಲೆ ನಡೆದಿದೆ. ಎಲ್ಲರೂ ಆಸ್ಪತ್ರೆಗೆ ದಾಖಲಾಗಿದ್ದಾರೆ ಎಂದು ಹೇಳಿದರು.



ಉದಯವಾಹಿನಿ ಚಿತ್ರ

> ಈ ವಿಚಾರವನ್ನು ಗಂಭೀರವಾಗಿ ತೆಗೆದುಕೊಂಡು ತಕ್ಷಣದಿಂದ ನಾಗೇಂದ್ರ ಅವರನ್ನು ಸಚಿವ ಸಂಪುಟದಿಂದ ಕೈ ಬಿಡಬೇಕು ಎಂದು ನಾನು ಸಿಎಂ ಅವರನ್ನು ಒತ್ತಾಯಿಸುತ್ತೇನೆ. ಅವರನ್ನು ಕೈಬಿಟ್ಟು ಇಬ್ಬರನ್ನು ಕ್ಯಾಬಿನೆಟ್‌ಗೆ ಸೇರಿಸಿಕೊಳ್ಳಿ. ನಮ್ಮದೇನು ಅಭ್ಯಂತರವಿಲ್ಲ ಎಂದು ಹೇಳಿದರು.
> -ಬಿ.ವೈ. ವಿಜಯೇಂದ್ರ

ಕಾಂಗ್ರೆಸ್ ಸರ್ಕಾರ ಬಂದಾಗಿನಿಂದ ಈ ರೀತಿಯ ಅಕ್ರಮ ಚಟುವಟಿಕೆಗಳು ನಿರಂತರವಾಗಿ ಸಾಗುತ್ತಿವೆ. ಮುಖ್ಯಮಂತ್ರಿಗಳು ನಾನು ಹಿಂದೂಗಳ ಪರ ಅಂತ ಆಗಾಗ್ಗೆ ಪೋಸ್ ಕೊಡುತ್ತಿರುತ್ತಾರೆ. ಗೃಹ ಸಚಿವರು ಇಂತಹ ವಿಚಾರಗಳನ್ನು ಬಿಟ್ಟು ಉಳಿದೆಲ್ಲಾ ವಿಚಾರಗಳ ಬಗ್ಗೆ ಮಾತನಾಡುತ್ತಾರೆ. ಇದರಿಂದ ಗೃಹ ಸಚಿವರಲ್ಲಿ ನಾವು ವಿನಂತಿ ಮಾಡುವುದೇನಂದ್ರೆ, ನಮ್ಮ ರಾಜ್ಯದಲ್ಲಿ ಗೋವುಗಳ

> ನಾಗೇಂದ್ರ ಅವರು ನ್ಯಾಯಾಲಯದಲ್ಲಿ ನಿರ್ದೋಷಿ ಅಂತ ತೀರ್ಮಾನವಾಗುವುದಿಲ್ಲವೋ ಅಲ್ಲಿಯವರೆಗೂ ಅವರನ್ನು ಕ್ಯಾಬಿನೆಟ್‌ನಲ್ಲಿ ಇಟ್ಟುಕೊಳ್ಳುವ ಅವಶ್ಯಕತೆ ಇಲ್ಲ. ಇದರಿಂದ ನಾಳೆ ವಿಧಾನಸಭೆಯ ಒಳಗೂ, ಹೊರಗೂ ಹಾಗೂ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿ ಕಚೇರಿಗಳ ಎದುರು ಪ್ರತಿಭಟನೆ ನಡೆಸಲಿದ್ದೇವೆ ಎಂದು ಘೋಷಿಸಿದರು.
> -ಬಿ.ವೈ. ವಿಜಯೇಂದ್ರ

ಸಾಗಣೆ ಅತಿ ಹೆಚ್ಚು ನಡೆಯುತ್ತಿದೆ. ಇದಕ್ಕೆ ಕಡಿವಾಣ ಹಾಕುವ ಕೆಲಸ ಮಾಡಲೇಬೇಕು ಎಂದು ಆಗ್ರಹಿಸಿದರು.

**ನಾಗೇಂದ್ರ ವಿರುದ್ಧ ಸದನದ ಒಳಗೂ, ಹೊರಗೂ ಹೋರಾಟ:** ಸಚಿವರಾಗಿರುವಂತಹ ನಾಗೇಂದ್ರ ಅವರನ್ನು ಯಾವ ಕಾರಣದಿಂದ ಸಿದ್ದರಾಮಯ್ಯನವರ ಮಂತ್ರಿಮಂಡಲದಿಂದ ಕೈ ಬಿಡಲಾಯಿತು. ವಾಲ್ಮೀಕಿ ನಿಗಮದ ಹಗರಣದಲ್ಲಿ 185 ಕೋಟಿ ರೂ. ಹಗರಣದ

### ಪಾಕ್‌ಗೆ ಜಿಂದಾಬಾದ್ ಎನ್ನುವರಿಗೆ ರಕ್ಷಣೆ

ವಿಧಾನಸಭೆಯಲ್ಲಿ ಪಾಕ್‌ಗೆ ಜಿಂದಾಬಾದ್ ಎನ್ನುವರಿಗೆ ರಕ್ಷಣೆ ಕೊಡುತ್ತಾರೆ. ಕಲಬುರಗಿಯಲ್ಲಿ ಪಾಕ್ ಏಜೆಂಟ್‌ಗಳು ಅರೆಸ್ಟ್ ಆಗಿದ್ದಾರೆ. ಅವರ ಬಗ್ಗೆ ಇವರು ಚಕಾರ ಎತ್ತುವುದಿಲ್ಲ. ಕಾಂಗ್ರೆಸ್ ಸರ್ಕಾರ ಅಲ್ಪಸಂಖ್ಯಾಂತರನ್ನು ಓಲೈಸುವ ನಿಟ್ಟಿನಲ್ಲಿ ಯಾವ ಹಂತಕ್ಕೂ ಹೋಗುತ್ತದೆ ಎಂಬುದನ್ನು ಪದೇ ಪದೆ ತೋರಿಸುತ್ತಿದೆ ಎಂದು ದೂರಿದರು.

ನೇರ ಮತ್ತು ನಂಬರ್ ಒನ್ ಆರೋಪಿ ನಾಗೇಂದ್ರರವರು. ಈ ಹಗರಣದಿಂದ ಶಿವಮೊಗ್ಗದ ಅಧಿಕಾರಿ ಚಂದ್ರಶೇಖರ್ ಅವರು ಆತ್ಮಹತ್ಯೆ ಮಾಡಿಕೊಂಡರು. ತನಿಖೆ ಆಗಿದೆ, ಚಾರ್ಜ್ ಶೀಟ್ ಸಲ್ಲಿಸಿದ್ದಾರೆ ಎಂದು ಅವರು ತಿಳಿಸಿದರು.

ನಾಗೇಂದ್ರ ಅವರ ವಿರುದ್ಧ ಗಂಭೀರ ಆರೋಪಗಳಿದ್ದರೂ ಸಿಎಂ ಡಿ.ಕೆ. ಶಿವಕುಮಾರ್ ಅವರು ತಮ್ಮ ಕ್ಯಾಬಿನೆಟ್‌ಗೆ ಸೇರಿಸಿಕೊಂಡಿದ್ದಾರೆ ಅಂದ್ರೆ, ಅಂತಹ ಅನಿವಾರ್ಯತೆ ಏನಿತ್ತು? ಭ್ರಷ್ಟಾಚಾರದ ಆರೋಪ ಹೊತ್ತಿರುವಂತಹ ನಾಗೇಂದ್ರ ಅವರನ್ನು ಮಂತ್ರಿ ಮಂಡಲಕ್ಕೆ ಸೇರಿಸಿಕೊಳ್ಳುವ ಅನಿವಾರ್ಯತೆಯ ಬಗ್ಗೆ ಸಿಎಂ ಬಹಿರಂಗಪಡಿಸಬೇಕು ಎಂದು ವಿಜಯೇಂದ್ರ ಆಗ್ರಹಿಸಿದರು. ಇದನ್ನು ಬಿಜೆಪಿ ಬಹಳ ಗಂಭೀರವಾಗಿ ತೆಗೆದುಕೊಂಡಿದೆ.

ನಾಗೇಂದ್ರ ಅವರ ವಿರುದ್ಧ ನಮಗೇನು ವೈಯಕ್ತಿಯ ದ್ವೇಷ ಇಲ್ಲ. ನಾಗೇಂದ್ರ ಅವರ ಹೇಳಿಕೆಯನ್ನು ಗಮನಿಸುತ್ತಿದ್ದೇವೆ. ದಲಿತರ ಮೇಲೆ ಈ ರೀತಿಯ ಆರೋಪ ಮಾಡುತ್ತಿದ್ದಾರೆ ಎನ್ನುತ್ತಿದ್ದಾರೆ. ನಾಗೇಂದ್ರ ಅವರೇ ನಿಮ್ಮ ಮೇಲೆ ಇರುವುದು ಭ್ರಷ್ಟಾಚಾರದ ಆರೋಪ, ಎಸ್ಟಿಗಳಿಗೆ ಮೀಸಲಿಟ್ಟ ಹಣವನ್ನು ಲೂಟಿ ಮಾಡಲಾಗಿದೆ ಎಂಬ ಗಂಭೀರ ಆರೋಪ ನಿಮ್ಮ ಮೇಲೆ ಇದೆ ಎಂದರು.

# ಗಡಿ ಗ್ರಾಮಗಳ ಅಭಿವೃದ್ಧಿಗೆ ಆದ್ಯತೆ: ಎಂ.ಬಿ. ಪಾಟೀಲ

• **ಉದಯವಾಹಿನಿ ವಿಜಯಪುರ, :**

ಗಡಿ ಗ್ರಾಮಗಳ ಸಮಗ್ರ ಅಭಿವೃದ್ಧಿಗೆ ಸರ್ಕಾರ ಆದ್ಯತೆ ನೀಡುತ್ತಿದ್ದು, ರಸ್ತೆ, ನೀರಾವರಿ ಸೇರಿದಂತೆ ಅಗತ್ಯ ಮೂಲಸೌಲಭ್ಯಗಳನ್ನು ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ ಹೇಳಿದರು.

ತಿಕೋಟಾ ತಾಲ್ಲೂಕಿನ ಯತ್ನಾಳ ಗ್ರಾಮದಲ್ಲಿ ಲೋಕೋಪಯೋಗಿ ಇಲಾಖೆಯಿಂದ 5 ಕೋಟಿ ವೆಚ್ಚದಲ್ಲಿ ಕೈಗೆತ್ತಿಕೊಂಡಿರುವ ಯತ್ನಾಳ ಜಾಲಗೇರಿ ರಸ್ತೆ ಸುಧಾರಣೆ ಕಾಮಗಾರಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಯತ್ನಾಳ ಗ್ರಾಮದಿಂದ ಮಹಾರಾಷ್ಟ್ರ ಗಡಿ ಪ್ರದೇಶದವರೆಗೆ ರಸ್ತೆ ಅಭಿವೃದ್ಧಿಗೆ 5 ಕೋಟಿ ಅನುದಾನ ಮಂಜೂರಾಗಿದ್ದು, ಸುಸಜ್ಜಿತ ರಸ್ತೆ ನಿರ್ಮಾಣವಾಗಲಿದೆ. ಅಲ್ಲದೆ, ಇಟ್ಟಂಗಿಹಾಳದಿಂದ ಯತ್ನಾಳದವರೆಗೆ ಎಸ್‌ಎಚ್‌ಡಿಪಿ ಯೋಜನೆಯಡಿ 25 ಕೋಟಿ ವೆಚ್ಚದಲ್ಲಿ ರಸ್ತೆ ನಿರ್ಮಾಣ ಕಾಮಗಾರಿ ಟೆಂಡರ್ ಹಂತದಲ್ಲಿದೆ ಎಂದು ತಿಳಿಸಿದರು.

ರಸ್ತೆ ಕಾಮಗಾರಿಯಲ್ಲಿ ಗುಣಮಟ್ಟಕ್ಕೆ ಯಾವುದೇ ರೀತಿಯ ರಾಜಿ ಮಾಡಿಕೊಳ್ಳಬಾರದು. ನಿಗದಿತ ಗುಣಮಟ್ಟದಂತೆ ಕಾಮಗಾರಿ


ಉದಯವಾಹಿನಿ ಚಿತ್ರ

ಪೂರ್ಣಗೊಳಿಸುವಂತೆ ಗುತ್ತಿಗೆದಾರರು ಹಾಗೂ ಅಧಿಕಾರಿಗಳಿಗೆ ಸಚಿವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಗಡಿ ಭಾಗದ ಜಮೀನುಗಳಿಗೆ ಸಮರ್ಪಕವಾಗಿ ನೀರು ಒದಗಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಗಡಿಯ ಕೊನೆಯ ಭಾಗವಾಗಿರುವುದರಿಂದ ನೀರು ತಲುಪುವಲ್ಲಿ ಕೆಲವೊಂದು ತಾಂತ್ರಿಕ ಹಾಗೂ ಪ್ರಾಯೋಗಿಕ ಅಡಚಣೆಗಳು ಎದುರಾಗುವುದು ಸಹಜ. ಮೇಲ್ಭಾಗ ಮತ್ತು ಕೆಳಭಾಗದ ರೈತರು ಪರಸ್ಪರ ಸಹಕಾರದಿಂದ ನೀರನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದು ಮನವಿ ಮಾಡಿದರು.

# ಜಿಲ್ಲಾ ಪತ್ರಿಕಾ ಭವನದಲ್ಲಿ ಸಂಭ್ರಮದ ಸ್ವಾತಂತ್ರ್ಯ ದಿನಾಚರಣೆ

• **ಉದಯವಾಹಿನಿ ಯಾದಗಿರಿ:**

ದೇಶದ ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ, ಬಲಿದಾನ, ಹೋರಾಟ ಹಾಗೂ ಅಚಲ ದೇಶಭಕ್ತಿಯನ್ನು ಸ್ಮರಿಸುವ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಯಾದಗಿರಿ ಜಿಲ್ಲಾ ಪತ್ರಿಕಾ ಭವನದಲ್ಲಿ ಶನಿವಾರ ಅತ್ಯಂತ ಸಂಭ್ರಮ, ಸಡಗರ ಹಾಗೂ ದೇಶಭಕ್ತಿಯ ವಾತಾವರಣದಲ್ಲಿ ಆಚರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ಜಿಲ್ಲಾ ಕಾರ್ಯಕಾರಿಣಿ ಸದಸ್ಯ ಹನುಮಂತ ಪಿ. ಹಾಗೂ ಹಿರಿಯ ಪತ್ರಕರ್ತ ಗಣೇಶ್ ಪಾಟೀಲ್ ಅವರು ರಾಷ್ಟ್ರಧ್ವಜಾರೋಹಣ ನೆರವೇರಿಸಿ, ಧ್ವಜಕ್ಕೆ ಗೌರವ ಸಮರ್ಪಿಸಿದರು. ಬಳಿಕ ರಾಷ್ಟ್ರಗೀತೆಯೊಂದಿಗೆ ದೇಶದ ಸಾರ್ವಭೌಮತ್ವ, ಏಕತೆ, ಅಖಂಡತೆ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಗೌರವಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಗಣ್ಯರು, ಸ್ವಾತಂತ್ರ್ಯವೆಂಬುದು ಕೇವಲ ಸಂಭ್ರಮಾಚರಣೆಗೆ ಸೀಮಿತವಾಗದೆ, ದೇಶಕ್ಕಾಗಿ ಪ್ರಾಣತ್ಯಾಗ ಮಾಡಿದ ಅಸಂಖ್ಯಾತ ಹೋರಾಟಗಾರರ ಆದರ್ಶ, ತ್ಯಾಗ ಮತ್ತು ಬಲಿದಾನದ ಸ್ಮರಣೆಯ ಸಂಕೇತವಾಗಿದೆ. ಸ್ವಾತಂತ್ರ್ಯದ ಆಶಯಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವುದು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ ಎಂದು ಅಭಿಪ್ರಾಯಪಟ್ಟರು.

ಪ್ರಜಾಪ್ರಭುತ್ವದ ನಾಲ್ಕನೇ ಅಂಗವೆಂದು ಗುರುತಿಸಲ್ಪಡುವ


ಉದಯವಾಹಿನಿ ಚಿತ್ರ

ಪತ್ರಿಕಾರಂಗವು ಸಮಾಜದ ಆಗುಹೋಗುಗಳನ್ನು ಜನಸಾಮಾನ್ಯರ ಗಮನಕ್ಕೆ ತರುವುದರ ಜೊತೆಗೆ, ಆಡಳಿತ ವ್ಯವಸ್ಥೆಯ ಲೋಪ ದೋಷಗಳನ್ನು ಎತ್ತಿಹಿಡಿದು, ಜನರ ಹಕ್ಕುಗಳು ಮತ್ತು ಸಮಸ್ಯೆಗಳಿಗೆ ಧ್ವನಿಯಾಗುವ ಮಹತ್ವದ ಹೊಣೆಗಾರಿಕೆಯನ್ನು ನಿರ್ವಹಿಸುತ್ತಿದೆ ಎಂದು ಹೇಳಿದರು.

ಪತ್ರಕರ್ತರು ಸ್ವಾತಂತ್ರ್ಯ ಹೋರಾಟದ ಮೌಲ್ಯಗಳನ್ನು ಮೈಗೂಡಿಸಿಕೊಂಡು, ನಿಷ್ಪಕ್ಷಪಾತ, ನಿರ್ಭೀತ ಹಾಗೂ ಜನಪರ ಪತ್ರಿಕೋದ್ಯಮದ ಮೂಲಕ ಸಮಾಜದ ಕಟ್ಟಕಡೆಯ ವ್ಯಕ್ತಿಯ ಧ್ವನಿಗೂ ವೇದಿಕೆ ಕಲ್ಪಿಸುವ ಸಂಕಲ್ಪವನ್ನು ಹೊಂದಬೇಕು ಎಂಬ ಆಶಯ ವ್ಯಕ್ತವಾಯಿತು.

# ವಿಜಯಪುರ ಜಿಲ್ಲೆಯಲ್ಲಿ ಬರ ಪರಿಸ್ಥಿತಿ, ಬೆಳೆ ಹಾನಿ ಪರಿಶೀಲಿಸಿದ ಜಿಲ್ಲಾ ಉಸ್ತುವಾರಿ ಸಚಿವ

• **ಉದಯವಾಹಿನಿ ವಿಜಯಪುರ, :**

ತೀವ್ರ ಮಳೆ ಕೊರತೆಯಿಂದ ಜಿಲ್ಲೆಯಾದ್ಯಂತ ಎದುರಾಗಿರುವ ಬರ ಪರಿಸ್ಥಿತಿಯನ್ನು ಗಂಭೀರವಾಗಿ ಪರಿಗಣಿಸಿರುವ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ. ಪಾಟೀಲ ಅವರು ಭಾನುವಾರ ಜಿಲ್ಲೆಯ ವಿವಿಧೆಡೆ ರೈತರ ಜಮೀನುಗಳಿಗೆ ಭೇಟಿ ನೀಡಿ ಬೆಳೆಗಳ ಸ್ಥಿತಿಗತಿಯನ್ನು ಪರಿಶೀಲಿಸಿದರು.

ಇಂಡಿ ತಾಲ್ಲೂಕಿನ ಹೊರ್ತಿ ಗ್ರಾಮದ ರೈತ ಮಾಳಪ್ಪ ಸೊನಕನಹಳ್ಳಿ ಅವರ ಆರು ಎಕರೆ ಜಮೀನಿಗೆ ಭೇಟಿ ನೀಡಿದ ಸಚಿವರು, ಒಣಗುತ್ತಿರುವ ತೊಗರಿ ಬೆಳೆಯನ್ನು ವೀಕ್ಷಿಸಿದರು. ರೈತರ ಸಮಸ್ಯೆಗಳನ್ನು ಆಲಿಸಿದ ಅವರು, ''ಸಂಕಷ್ಟದಲ್ಲಿರುವ ರೈತರ ಪರವಾಗಿ ನಮ್ಮ ಸರ್ಕಾರ ನಿಲ್ಲಲಿದೆ. ರೈತರ ಕಷ್ಟ-ನಷ್ಟಗಳನ್ನು


ಉದಯವಾಹಿನಿ ಚಿತ್ರ

ಅರಿಯಲು ಜಿಲ್ಲೆಯಾದ್ಯಂತ ಪ್ರವಾಸ ಕೈಗೊಂಡಿದ್ದು, ವೈಜ್ಞಾನಿಕ ಬೆಳೆ ಹಾನಿ ವರದಿ ಸಿದ್ಧಪಡಿಸಲು ಕೃಷಿ ಹಾಗೂ ತೋಟಗಾರಿಕೆ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಗಿದೆ'' ಎಂದರು. ವೈಜ್ಞಾನಿಕ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿ ರೈತರಿಗೆ ಸೂಕ್ತ ಪರಿಹಾರ ದೊರಕಿಸಲು ಪ್ರಾಮಾಣಿಕ ಪ್ರಯತ್ನ

> ಇಂಡಿ ತಾಲ್ಲೂಕಿನಲ್ಲಿ 42 ಸಾವಿರ ರೈತರು ಬೆಳೆ ವಿಮೆ ನೋಂದಣಿ ಮಾಡಿಕೊಂಡಿದ್ದು, ಜಿಲ್ಲಾದ್ಯಂತ ಒಟ್ಟು 2.50 ಲಕ್ಷ ರೈತರು ಬೆಳೆ ವಿಮೆ ಮಾಡಿಸಿದ್ದಾರೆ ಎಂದು ಸಚಿವರು ಮಾಹಿತಿ ನೀಡಿದರು.

ಮಾಡಲಾಗುವುದು ಎಂದು ಸಚಿವರು ಭರವಸೆ ನೀಡಿದರು.

ಇಂಡಿ ತಾಲ್ಲೂಕಿನಲ್ಲಿ ಬಹುತೇಕ ಬೆಳೆಗಳು ಸಂಪೂರ್ಣ ಹಾನಿಗೀಡಾಗಿವೆ. ಕಳೆದ ವಾರ ಕೆಲವು ಪ್ರದೇಶಗಳಿಗೆ ಭೇಟಿ ನೀಡಿದಾಗ ಶೇ.80ರಷ್ಟು ಬೆಳೆ ಹಾನಿಯಾಗಿದ್ದರೆ, ಇದೀಗ ಪರಿಸ್ಥಿತಿ ಮತ್ತಷ್ಟು ಹದಗೆಟ್ಟಿದ್ದು, ಒಟ್ಟಾರೆ ಬೆಳೆ ಹಾನಿ ಶೇ.100ರಷ್ಟಾಗಿದೆ ಎಂದು ಸಚಿವ ಎಂ.ಬಿ. ಪಾಟೀಲ ತಿಳಿಸಿದರು. ''ರೈತರ ಸಂಕಷ್ಟವನ್ನು ಖುದ್ದಾಗಿ ನೋಡಿದ್ದೇನೆ. ಅವರೆಲ್ಲ ತೀವ್ರ ಸಂಕಷ್ಟದಲ್ಲಿದ್ದಾರೆ. ಈ ವಾಸ್ತವವನ್ನು ಅರಿತಿರುವ ಸರ್ಕಾರ ರೈತರ ನೆರವಿಗೆ ಬರಲಿದೆ'' ಎಂದು ಅವರು ಹೇಳಿದರು.

# ನಾಗರ ಪಂಚಮಿ ಹಬ್ಬದ ನಿಮಿತ್ತ ಮಹಿಳೆಯರು ನಾಗ ಮೂರ್ತಿಗಳಿಗೆ ಹಾಲನ್ನು ಎರೆದು ಭಕ್ತಿ ಭಾವ ಮೆರೆದರು.

• **ಉದಯವಾಹಿನಿ ಯಲಬುರ್ಗಾ :**

ತಾಲ್ಲೂಕಿನಾದ್ಯಾಂತ ನಾಗರ ಪಂಚಮಿ ಹಬ್ಬದ ಅಂಗವಾಗಿ ಪಟ್ಟಣ ಸೇರಿದಂತೆ ಹಲವಾರು ಗ್ರಾಮಗಳಲ್ಲಿ ಶುಚಿಗೊಳಿಸಲಾಗಿದ್ದ ನಾಗರಕಟ್ಟೆಗಳತ್ತ ರವಿವಾರ ಮನೆ ಮಂದಿಯಲ್ಲ ಜೊತೆಗೂಡಿ ನಡೆದರು. ನಾಗರ ದೇವರ ವಿಗ್ರಹಗಳಿಗೆ ಶ್ರದ್ಧಾಭಕ್ತಿಯಿಂದ ಪೂಜೆ ಸಮರ್ಪಿಸಿದರು.

ಮಹಿಳೆಯರು ಮನೆಯಲ್ಲಿಯೇ ಮಡಿಯಿಂದ ತಯಾರಿಸಿದ ಚಿಗಳಿ, ತಮಟ, ಅಳಿಟ್ಟು, ತಂಬಿಟ್ಟು, ಅಳ್ಳು, ಕಡಲೆಕಾಳು, ಗೆಜ್ಜೆವಸ್ತ್ರ ಹಾಗೂ ತೆಂಗಿನಕಾಯಿ, ಬಾಳೆಹಣ್ಣು ಸೇರಿ ಇತರೆ ಪೂಜಾ ಸಾಮಗ್ರಿಗಳೊಂದಿಗೆ ನಾಗರಕಟ್ಟೆಗಳಿಗೆ ಸಂಭ್ರಮದಿಂದ ಬಂದು ಇಷ್ಟಾರ್ಥ ಈಡೇರಿಸುವಂತೆ ನಾಗದೇವರನ್ನು ಪ್ರಾರ್ಥಿಸಿಕೊಂಡರು.

ಶ್ರಾವಣ ಮಾಸದಲ್ಲಿ ಬರುವ ಅನೇಕ ಹಬ್ಬಗಳು ಸ್ತ್ರೀಯರು ಸಂಭ್ರಮಿಸುವಂಥ ಹಬ್ಬಗಳಾಗಿವೆ. ಭಕ್ತಿ, ಶ್ರದ್ಧೆಯಿಂದ ಆಚರಿಸುವ ಈ ಹಬ್ಬದಲ್ಲಿ ಕೆಲವರು ಬೆಳ್ಳಿ ನಾಗರ ಮತ್ತು ಚಿನ್ನದ ನಾಗರವನ್ನು ನಾಗದೇವತೆಗೆ ಅರ್ಪಿಸುವ ಸಂಪ್ರದಾಯ ಕೂಡ ಇದ್ದು, ನಾಗರ ಹುತ್ತಗಳಿಗೆ ಭಕ್ತರು ಬೆಳಿಗ್ಗೆಯಿಂದಲೇ ಬಂದು ಹಾಲು ಎರೆದರು. ಹಬ್ಬಕ್ಕಾಗಿ


**ಸಂಭ್ರಮದ ನಾಗರ ಪಂಚಮಿ ಹಬ್ಬ ಆಚರಣೆ**



ಉದಯವಾಹಿನಿ ಚಿತ್ರ

ಮನೆಯಲ್ಲಿ ವಿಶೇಷವಾಗಿ ಎಳ್ಳು ಉಂಡೆ, ಶೇಂಗಾ, ಕಡಲೆ ಸೇರಿ ಇತರೆ ಉಂಡೆಗಳನ್ನು ತಯಾರಿಸಿದ್ದರು. ಪೂಜೆ ನೆರವೇರಿಸಿದ ಬಳಿಕ ಮನೆಗೆ ಬಂದು ಕೆಲವರು ಉಂಡೆಗಳ ರುಚಿಯನ್ನೂ ಆಸ್ವಾದಿಸಿದರು.

# ವಿದ್ಯಾರ್ಥಿನಿಯ ಬಾಳಿಗೆ ಬೆಳಕಾದ ಶ್ರೀ ಗುರು ರಾಘವೇಂದ್ರ ಸ್ವಾಮಿ; ಚೇತರಿಸಿಕೊಂಡ ಕೋಮಾದಲ್ಲಿದ್ದ ವಿದ್ಯಾರ್ಥಿನಿ


ಉದಯವಾಹಿನಿ ಚಿತ್ರ

• **ಉದಯವಾಹಿನಿ ಹಾವೇರಿ, :**

ಏಳು ತಿಂಗಳನಿಂದ ಜೀವನ್ಮರಣದ ಹೋರಾಟ ನಡೆಸುತ್ತಿದ್ದ ಹಾವೇರಿಯ ಮೆಡಿಕಲ್ ವಿದ್ಯಾರ್ಥಿನಿಗೆ ಕಲಿಯುಗದ ಕಾಮಧೇನು ಮಂತ್ರಾಲಯದ ಶ್ರೀ ಗುರು ರಾಘವೇಂದ್ರ ಸ್ವಾಮಿಗಳ ಕೃಪಾಶೀರ್ವಾದ ದೊರೆತಿದೆ. ಫಿಟ್ಸ್ ಬಂದು ನಡೆಯಲು ಬಾರದೆ ಕೋಮಾದಲ್ಲಿದ್ದ ಮೆಡಿಕಲ್ ವಿದ್ಯಾರ್ಥಿನಿಯ ಬಾಳಲ್ಲಿ ಬೆಳಕು ಮೂಡಿದೆ. ಹಾವೇರಿ ತಾಲ್ಲೂಕಿನ ನೆಗಳೂರು ಗ್ರಾಮದ ನಿವಾಸಿ ನಿವೇದಿತಾ ನೆಗಳೂರು ಅಂತಿಮ ವರ್ಷದ ಮೆಡಿಕಲ್ ವ್ಯಾಸಂಗ ಮಾಡುತ್ತಿದ್ದರು. ಆದರೆ ಅನಾರೋಗ್ಯಕ್ಕೆ ಒಳಗಾಗಿ ನಡೆಯಲೂ ಸಾಧ್ಯವಾಗದೆ ಕೋಮಾದಲ್ಲಿದ್ದರು. ಹುಬ್ಬಳ್ಳಿಯ ಕಿಮ್ಸ್‌ನಲ್ಲಿ 21 ದಿನಗಳಿಂದ ಚಿಕಿತ್ಸೆ ಪಡೆಯುತ್ತಿದ್ದರು.

ಹಾವೇರಿ ತಾಲ್ಲೂಕಿನ ಹೊಸರಿತ್ತಿ ಗ್ರಾಮದ ಶ್ರೀ ಗುರು ರಾಯರ ಮಠಕ್ಕೆ ಮಂತ್ರಾಲಯ ಶ್ರೀ ಸುಬುಧೇಂದ್ರ ತೀರ್ಥ ಸ್ವಾಮೀಜಿ ಆಗಮಿಸಿದ್ದ ವೇಳೆ ಕುಟುಂಬದವರು ವಿದ್ಯಾರ್ಥಿನಿ ನಿವೇದಿತಾ ನೆಗಳೂರು ಅವರನ್ನು ಕರೆತಂದಿದ್ದರು. ಆ ವೇಳೆ ಶ್ರೀಗಳು, ಆ ಯುವತಿಗೆ 5 ವಾರಗಳಲ್ಲಿ ಅನುಗ್ರಹ ಆಗುತ್ತದೆ ಎಂದು ಆಶೀರ್ವಾದ ಮಾಡಿದ್ದರು. ಅದರಂತೆ 3 ವಾರದಲ್ಲೇ ವಿದ್ಯಾರ್ಥಿನಿ ಚೇತರಿಸಿಕೊಂಡಿದ್ದು, ಎದ್ದು ಓಡಾಡುತ್ತಿರುವುದರನ್ನು ಕಂಡು ಇದು ರಾಯರ ಪವಾಡ ಎಂದು ಕುಂಟುಬಸ್ಥರು ಅಪಾರ ಸಂತಸ ವ್ಯಕ್ತಪಡಿಸಿದ್ದಾರೆ.

ವಿದ್ಯಾರ್ಥಿನಿ ನಿವೇದಿತಾ ನೆಗಳೂರು ಕೂಡ ಖಂಡಿತ ರಾಯರಿದ್ದಾರೆ ಎಂದು ಹೇಳಿದ್ದಾರೆ. ಮಂತ್ರಾಲಯ ಶ್ರೀ ಸುಬುಧೇಂದ್ರ ತೀರ್ಥ ಸ್ವಾಮೀಜಿ ಇದೀಗ ಅನಾರೋಗ್ಯದಿಂದ ಗುಣಮುಖರಾದ ವಿದ್ಯಾರ್ಥಿನಿ ನಿವೇದಿತಾ ನೆಗಳೂರು ಅವರಿಗೆ ಕರೆ ಮಾಡಿ, ಎಲ್ಲರಿಗೂ ಶುಭವಾಗಲಿ, ರಾಯರ ಮಹಿಮೆ ಅಪಾರ. ನಂಬಿದ ಭಕ್ತರನ್ನು ರಾಯರು ಅನುಗ್ರಹ ಮಾಡುತ್ತಾರೆ. ರಾಯರ ಅನುಗ್ರಹ ನಿಮಗಾಗಿದೆ. ಎಲ್ಲವೂ ಒಳ್ಳೆಯದಾಗಲಿ, ಶುಭವಾಗಲಿ ಎಂದು ಆಶೀರ್ವದಿಸಿದ್ದಾರೆ.

# ಆಹಾರ ಸುರಕ್ಷತೆಯ ತಪಾಸಣೆ ವೇಳೆ ಎಷ್ಟೇ ದೊಡ್ಡವರಾದರೂ ಬಿಡುವುದಿಲ್ಲ: ಯು.ಟಿ. ಖಾದರ್

## ಮಾಹಿತಿ ಬಂದ ತಕ್ಷಣವೇ ಅಧಿಕಾರಿಗಳು ಸ್ಥಳಕ್ಕೆ ಹೋಗಿ, ಪರಿಶೀಲನೆ ನಡೆಸಿ ತಕ್ಷಣ ಆ ಮಳಿಗೆಯನ್ನು ಸೀಲ್ ಮಾಡಿದ್ದಾರೆ

• **ಉದಯವಾಹಿನಿ ದಕ್ಷಿಣ ಕನ್ನಡ:**

ಆಹಾರ ಸುರಕ್ಷತೆಯ ತಪಾಸಣೆ ವೇಳೆ ಎಷ್ಟೇ ದೊಡ್ಡವರಾದರೂ ಬಿಡುವುದಿಲ್ಲ, ಎಷ್ಟೇ ಸಣ್ಣವರಾದರೂ ಕೂಡ ಬಿಡಲಿಕ್ಕೆ ಹೋಗುವುದಿಲ್ಲ. ನಮಗೆ ಜನರ ಆರೋಗ್ಯವೇ ಮುಖ್ಯ ಎಂದು ಆರೋಗ್ಯ ಸಚಿವ ಯು. ಟಿ. ಖಾದರ್ ತಿಳಿಸಿದರು.

ನಗರದಲ್ಲಿ ಭಾನುವಾರ ಮಾಧ್ಯಮದವರೊಂದಿಗೆ ಮಾತನಾಡಿದ

1 : ಹೈಟೆಕ್ ಲ್ಯಾಬ್ ನಿರ್ಮಾಣ
2 : ಔಟ್‌ಲೆಟ್‌ಗಳ ಮೇಲೆ ರೇಡ್
3 : ಪಿಜಿ ಅನುಮತಿ ಕೊಡುವುದಿಲ್ಲ

ಅವರು, ಆರೋಗ್ಯವಂತ ಸಮಾಜ ನಿರ್ಮಾಣ ಆಗಬೇಕೆಂಬ ಉದ್ದೇಶದಿಂದ ಆಹಾರ ಕೊಡುವಂತಹ ಜಾಗಗಳು ಹಾಗೂ ಆಹಾರ ಉತ್ಪಾದನಾ ಕೇಂದ್ರಗಳನ್ನು ಗುರುತಿಸಿಕೊಂಡು ರಾಜ್ಯದ ಉದ್ದಗಲಕ್ಕೂ ತಪಾಸಣೆ ಪ್ರಾರಂಭಿಸಿದ್ದೇವೆ. ಈ ತಪಾಸಣೆ ಯಾರ ಮೇಲಿನ ಕೋಪದಿಂದಾಗಲಿ ಅಥವಾ ಪನಿಶ್ಮೆಂಟ್ ಮಾಡಬೇಕೆಂದಾಗಲಿ ಮಾಡುತ್ತಿರುವುದಲ್ಲ. ಅವರವರ ತಪ್ಪೇನಿದೆ ಎಂಬುದನ್ನು ತೋರಿಸಿ, ಜನರಿಗೆ ವಾಸ್ತವ ಪರಿಸ್ಥಿತಿ ಏನಿದೆ ಎಂಬುದನ್ನು ತಿಳಿಸಿಕೊಡುವುದು ನಮ್ಮ ಜವಾಬ್ದಾರಿ ಎಂದರು.

ಬೆಂಗಳೂರಿನಲ್ಲಿ ಎಲ್ಲಾ ರೀತಿಯ ಔಟ್‌ಲೆಟ್‌ಗಳ ಮೇಲೆ ರೇಡ್ ಆದರೂ ಕೂಡ ಮಂಗಳೂರಿನಲ್ಲೂ ಅದೇ ರೀತಿ ಮಾಡುತ್ತಾರೆ


ಉದಯವಾಹಿನಿ ಚಿತ್ರ

> ಪಾನ್ ಮಸಾಲದಲ್ಲಿ ನಿಕೋಟಿನ್ ಮತ್ತು ಗುಟ್ಕಾ ಮಿಶ್ರಣವಾಗುವುದನ್ನು ಸರ್ಕಾರ ನಿಷೇಧಿಸಿದೆ. ಈ ಆದೇಶವನ್ನು ಯಾರೂ ಹಿಂಪಡೆದಿಲ್ಲ. ಇದರಿಂದ ಅಡಿಕೆ ಬೆಳೆಗಾರರಿಗೆ ಯಾವುದೇ ತೊಂದರೆ ಇಲ್ಲ, ಕೇವಲ ಗುಟ್ಕಾ ಕಂಪನಿ ಮಾಲೀಕರಿಗೆ ಮಾತ್ರ ತೊಂದರೆಯಾಗಬಹುದು ಎಂದು ಹೇಳಿದರು.
> -ಸಚಿವ ಯು.ಟಿ. ಖಾದರ್

ಎಂದರೆ ಅವರಿಗೆ ನಾವೇನು ಹೇಳಬೇಕು?. ನಿನ್ನೆ ಮಾಹಿತಿ ಬಂದ ತಕ್ಷಣವೇ ಅಧಿಕಾರಿಗಳು ಸ್ಥಳಕ್ಕೆ ಹೋಗಿ, ಪರಿಶೀಲನೆ ನಡೆಸಿ ತಕ್ಷಣ ಆ ಮಳಿಗೆಯನ್ನು ಸೀಲ್ ಮಾಡಿದ್ದಾರೆ. ಇಂಥ ತಪಾಸಣೆಗಳು ಎಲ್ಲಾ ಕಡೆ ಮುಂದೆಯೂ ನಡೆಯಲಿವೆ. ಹಾಗಾಗಿ ಎಲ್ಲರೂ ತಮ್ಮ ಕಿಚನ್, ಸ್ಟೋರ್ ಹಾಗೂ ಆಹಾರ ಪದಾರ್ಥಗಳ ಗುಣಮಟ್ಟ ಮತ್ತು

> ಹೋಟೆಲ್‌ಗಳಲ್ಲಿ ಬಿಸಿ ನೀರು ಕಡ್ಡಾಯ, ಹೈಟೆಕ್ ಲ್ಯಾಬ್ ನಿರ್ಮಾಣ: ಮಳೆಗಾಲದಲ್ಲಿ ಕಲುಷಿತ ನೀರು ಮತ್ತು ಸಾಂಕ್ರಾಮಿಕ ರೋಗ, ವೈರಸ್‌ಗಳನ್ನು ನಿಯಂತ್ರಿಸಲು ಹೋಟೆಲ್ ಹಾಗೂ ಕ್ಯಾಂಟೀನ್‌ಗಳಲ್ಲಿ ಬಿಸಿ ನೀರನ್ನೇ ನೀಡಬೇಕು ಎಂದು ಈಗಾಗಲೇ ಆದೇಶ ಮಾಡಲಾಗಿದೆ. ಗ್ರಾಹಕರು ಕೇಳಿದರೆ ಮಾತ್ರ ತಣ್ಣೀರು ನೀಡಬೇಕು.
> -ಸಚಿವ ಯು.ಟಿ. ಖಾದರ್

ನೈರ್ಮಲ್ಯವನ್ನು ಕಾಪಾಡಿಕೊಳ್ಳಬೇಕು. ಯಾವುದೇ ಸಂದರ್ಭದಲ್ಲಿ, ಎಲ್ಲಿಗೆ ಬೇಕಾದರೂ ನಾವು ರೇಡ್ ಮಾಡಬಹುದು ಎಂದು ಎಚ್ಚರಿಸಿದರು. ಮುಂದಿನ ಹಂತದಲ್ಲಿ ಕೇಟರಿಂಗ್, ಪಿಜಿ ಸೆಂಟರ್ ಹಾಸ್ಟೆಲ್‌ಗಳನ್ನು ಗುರಿಯಾಗಿಸಿಕೊಂಡಿದ್ದೇವೆ. ಮನೆ ಬಿಟ್ಟು ಬರುವ ವಿದ್ಯಾರ್ಥಿ-

### ವಿಧಾನಸೌಧ, ವಿಕಾಸಸೌಧಗಳಲ್ಲಿ ತಪಾಸಣೆ

ಸ್ವಂತ ಮಕ್ಕಳಂತೆ ನೋಡಿಕೊಳ್ಳುವುದಾದರೆ ಮಾತ್ರ ಪಿಜಿ ನಡೆಸಿ. ಪಿಜಿ ಮತ್ತು ಹಾಸ್ಟೆಲ್‌ಗಳ ಕುರಿತು ಮಾತನಾಡುತ್ತಾ, ಸಾರ್ವಜನಿಕ ಸ್ಥಳಗಳು, ಹೋಟೆಲ್‌ಗಳು, ಕ್ಯಾಂಟೀನ್‌ಗಳು, ವಿಧಾನಸೌಧ, ವಿಕಾಸಸೌಧಗಳಲ್ಲಿ ತಪಾಸಣೆ ನಡೆಸಲಾಗಿದೆ.

ವಿದ್ಯಾರ್ಥಿನಿಯರು, ಯುವಕ-ಯುವತಿಯರಿಗೆ ಊಟದ ಸಮಸ್ಯೆಯಿಂದ ಆರೋಗ್ಯ ಹದಗೆಟ್ಟಾಗ ತೀವ್ರ ತೊಂದರೆ ಯಾಗುತ್ತದೆ.

ನಿಮ್ಮಲ್ಲಿ ಬರುವವರನ್ನು ಸ್ವಂತ ಮಕ್ಕಳಂತೆ, ಸಂಬಂಧಿಕರಂತೆ ನೋಡಿಕೊಂಡು ಊಟದ ವ್ಯವಸ್ಥೆ ಮಾಡುವುದಾದರೆ ಮಾತ್ರ ಪಿಜಿ ತೆರೆಯಿರಿ. ಇಲ್ಲದಿದ್ದರೆ ಪಿಜಿ ಓಪನ್ ಮಾಡಬೇಕಾದ ಅಗತ್ಯವೇ ಇಲ್ಲ. ಸರಿ ಇಲ್ಲದಿದ್ದರೆ ಈಗಲೇ ಸರಿಪಡಿಸಿಕೊಳ್ಳಿ, ನಾಳೆ ತಪಾಸಣೆಗೆ ಬಂದಾಗ ನಿಯಮ ಉಲ್ಲಂಘನೆಯಾಗಿದ್ದರೆ ಅಂತಹ ಪಿಜಿ ನಡೆಸಲು ಅನುಮತಿ ಕೊಡುವುದಿಲ್ಲ ಎಂದು ಸಚಿವರು ತಿಳಿಸಿದರು.

ದೊಡ್ಡ ದೊಡ್ಡ ಕಂಪನಿಗಳ ಮೇಲೆ ದಾಳಿ ಮಾಡಿದಾಗ ಅವರು ಕೋರ್ಟ್‌ಗೆ ಹೋದರೂ ನಮ್ಮ ವರದಿಯನ್ನು ಯಾರೂ ಅಲ್ಲಗಳೆಯಲು ಸಾಧ್ಯವಾಗದಂತೆ, ಸುಪ್ರೀಂ ಕೋರ್ಟ್ ಮಟ್ಟದಲ್ಲೂ ಮಾನ್ಯವಾಗುವ ಅತ್ಯುನ್ನತ ಗುಣಮಟ್ಟದ ರಾಜ್ಯ ಮಟ್ಟದ ಲ್ಯಾಬ್ ನಿರ್ಮಿಸುವ ಯೋಜನೆಯಿದೆ. ಇಲಾಖೆಯನ್ನು ಬಲಪಡಿಸಲು ಮತ್ತು ಸಿಬ್ಬಂದಿ ಕೊರತೆ ನೀಗಿಸಲು ಇಲಾಖೆಯ ಕಾರ್ಯಕ್ಷಮತೆಯನ್ನು ಹೆಚ್ಚಿಸಲಾಗುತ್ತಿದೆ ಎಂದರು.

## ಮಿನಿ ನ್ಯೂಸ್

### ಕಳ್ಳರ ಕರಾಮತ್ತಿಗೆ ಸಾರ್ವಜನಿಕರು ಶಾಕ್

• **ಉದಯವಾಹಿನಿ ಔರಾದ್ :**

ಪಟ್ಟಣದಲ್ಲಿ ಕಳ್ಳರ ಹಾವಳಿ ಹೆಚ್ಚಾಗುತ್ತಿರುವುದು ಸಾರ್ವಜನಿಕರಲ್ಲಿ ಆತಂಕಕ್ಕೆ ಕಾರಣವಾಗಿದೆ. ರಾತ್ರಿ ಸಮಯದಲ್ಲಿ ಮನೆ, ಅಂಗಡಿ ಹಾಗೂ ಸಾರ್ವಜನಿಕ ಸ್ಥಳಗಳನ್ನು ಗುರಿಯಾಗಿಸಿಕೊಂಡು ಕಳ್ಳತನಕ್ಕೆ ಮುಂದಾಗುತ್ತಿರುವ ಕಳ್ಳರು, ತಮ್ಮ ಕೈಚಳಕ ತೋರಿಸುತ್ತಿರುವ ಘಟನೆಗಳು ಜನರನ್ನು ಬೆಚ್ಚಿಬೀಳಿಸಿವೆ. ಪಟ್ಟಣದ ಎಪಿಎಂಸಿ ವೃತ್ತದಲ್ಲಿನ ಬೀದರ್-ಔರಾದ ಹೆದ್ದಾರಿಯಲ್ಲಿ ಕಳ್ಳರು ನಾಲ್ಕೈದು ಅಂಗಡಿಗಳ ಶಟರ್ ಎತ್ತಿ ಬೀಗ ಮುರಿದು ತಮ್ಮ ಕೈಚಳಕ ತೋರಿಸಿದ್ದಾರೆ, ಎಲ್ಲಾ ಕಡೆ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ ಆದರು ಸಹ ರಾಜಾರೋಷವಾಗಿ ಕೃತ್ಯ ನಡೆಸಿರುವುದು ಅನುಮಾನ ಮೂಡುವಂತೆ ಮಾಡಿದೆ. ಕಳ್ಳತನ ಪ್ರಕರಣಗಳಿಗೆ ಕಡಿವಾಣ ಹಾಕುವಲ್ಲಿ ಪೊಲೀಸ್ ಇಲಾಖೆ ಇನ್ನಷ್ಟು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು, ರಾತ್ರಿ ವೇಳೆ ಪ್ರಮುಖ ರಸ್ತೆ, ಮಾರು ಕಟ್ಟೆ ಹಾಗೂ ವಸತಿ ಪ್ರದೇಶಗಳಲ್ಲಿ ಪೊಲೀಸ್ ಗಸ್ತು ಹೆಚ್ಚಿಸಬೇಕು.

ಅನುಮಾನಾಸ್ಪದ ವ್ಯಕ್ತಿಗಳ ಚಲನವಲನಗಳ ಮೇಲೆ ನಿಗಾ ವಹಿಸಿ, ಹಳೆಯ ಕಳ್ಳತನ ಪ್ರಕರಣಗಳ ಆರೋಪಿಗಳನ್ನು ಪರಿಶೀಲಿಸುವ ಮೂಲಕ ಕಳ್ಳರ ಜಾಲವನ್ನು ಭೇದಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ. ಕಳ್ಳರ ಕರಾಮತ್ತಿಗೆ ಶಾಕ್ ಆಗಿರುವ ಸಾರ್ವಜನಿಕರು, ಇನ್ನು ಮುಂದೆ ತಮ್ಮ ಆಸ್ತಿ-ಪಾಸ್ತಿಗೆ ಹೆಚ್ಚಿನ ಭದ್ರತೆ ಒದಗಿಸಿಕೊಳ್ಳುವ ಅನಿವಾರ್ಯತೆ ಎದುರಾಗಿದೆ. ಘಟನಾ ಸ್ಥಳಕ್ಕೆ ಸಿಪಿಐ ರಘುವೀರಸಿಂಗ್ ಠಾಕೂರ್, ಪಿಎಸ್‌ಐ ರೇಣುಕಾ ಭಾಲೆಕರ್ ಸೇರಿದಂತೆ ಪೊಲೀಸ್ ಪಡೆ ಭೇಟಿ ನೀಡಿ ಪರಿಶೀಲನೆ ನಡೆಸಿ ಕೈಚಳಕ ತೋರಿದ ಕಳ್ಳರಿಗೆ ಬಲೆ ಬೀಸಿದ್ದಾರೆ.

### ಸರ್ಕಾರಿ ಶಾಲೆಯಲ್ಲಿನ ಶಿಕ್ಷಕರ ಕೊರತೆ ನೀಗಿಸಿ

• **ಉದಯವಾಹಿನಿ ಔರಾದ್ :**

ತಾಲ್ಲೂಕಿನ ಕರಂಜಿ(ಕೆ) ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆ ಶಿಕ್ಷಕರ ಕೊರತೆಯಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ತೊಂದರೆಯಾಗುತ್ತಿದ್ದು, ಕೂಡಲೇ ಅಗತ್ಯ ಶಿಕ್ಷಕರನ್ನು ನೇಮಕ ಮಾಡಿ ಕೊರತೆ ನೀಗಿಸಬೇಕು ಎಂದು ಮಾಜಿ ಗ್ರಾಮ ಪಂಚಾಯಿತಿ ಸದಸ್ಯ ರಾಜಕುಮಾರ ನಾಯಕ ಒತ್ತಾಯಿಸಿದ್ದಾರೆ.

ಈ ಕುರಿತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮನವಿ ನೀಡಿದ ಅವರು ಕರಂಜಿ(ಕೆ) ಗ್ರಾಮದ ಸರ್ಕಾರಿ ಶಾಲೆಯಲ್ಲಿ ಹಲವು ವಿಷಯಗಳಿಗೆ ಅಗತ್ಯವಿರುವಷ್ಟು ಶಿಕ್ಷಕರು ಇಲ್ಲದ ಪರಿಣಾಮ ವಿದ್ಯಾರ್ಥಿಗಳ ಪಾಠ-ಪ್ರವಚನಕ್ಕೆ ಅಡಚಣೆಯಾಗುತ್ತಿದೆ.

ಈಗಾಗಲೇ ಶೈಕ್ಷಣಿಕ ವರ್ಷ ಆರಂಭವಾಗಿದ್ದು, ಶಿಕ್ಷಕರ ಕೊರತೆಯಿಂದ ವಿದ್ಯಾರ್ಥಿಗಳ ಕಲಿಕೆಯಲ್ಲಿ ಹಿನ್ನಡೆಯಾಗುವ ಆತಂಕ ಪೋಷಕರಲ್ಲಿ ಮೂಡಿದೆ. ಶಿಕ್ಷಕರ ಕೊರತೆಯಿಂದ ಅವರ ಶಿಕ್ಷಣಕ್ಕೆ ಧಕ್ಕೆಯಾಗದಂತೆ ಶಿಕ್ಷಣ ಇಲಾಖೆ ತಕ್ಷಣ ಕ್ರಮ ಕೈಗೊಳ್ಳಬೇಕು. ಸುಮಾರು 120 ವಿದ್ಯಾರ್ಥಿಗಳನ್ನು ಹೊಂದಿರುವ ಶಾಲೆಯಲ್ಲಿ 3 ಶಿಕ್ಷಕರು ಹಾಗೂ ಒಬ್ಬರು ಅತಿಥಿ ಶಿಕ್ಷಕರು ಇದ್ದಾರೆ, ಅದರಲ್ಲಿ ವಿಷಯವಾರು ಖಾಲಿ ಇರುವ ಹುದ್ದೆಗಳಿಗೆ ಅರ್ಹ ಶಿಕ್ಷಕರನ್ನು ನಿಯೋಜಿಸಿ, ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ದೊರೆಯುವಂತೆ ಮಾಡಬೇಕು ಎಂದು ಆಗ್ರಹಿಸಿದ್ದಾರೆ.

### ಕಾಂಗ್ರೆಸ್ ಕಿಸಾನ್ ಘಟಕದ ಕಾರ್ಯದರ್ಶಿ ಚನ್ನಸಂಗಪ್ಪ ಸಿಳ್ಳಿನ್ ನೇಮಕ

• **ಉದಯವಾಹಿನಿ ಯಲಬುರ್ಗಾ:**


ತಾಲ್ಲೂಕಿನ ಮುಧೋಳ ಗ್ರಾಮದ ಮಾಜಿ ಗ್ರಾಮ ಪಂಚಾಯತ್ ಸದಸ್ಯರು ಚನಸಂಗಪ್ಪ ಸಿಳ್ಳಿನ ಅವರನ್ನು ಬ್ಲಾಕ್ ಕಾಂಗ್ರೆಸ್ ಸಮಿತಿ ವತಿಯಿಂದ ಯಲಬುರ್ಗಾ ಬ್ಲಾಕ್ ಕಾಂಗ್ರೆಸ್ ಸಂಘಟನೆ ಕಿಸಾನ್ ಘಟಕದ ಸಂಘಟನಾ ಕಾರ್ಯದರ್ಶಿಯನ್ನಾಗಿ ನೇಮಕಗೊಳಿಸಿದ್ದಾರೆ.

ಮಾನ್ಯ ಕೊಪ್ಪಳ ಜಿಲ್ಲಾ ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾದ ಸನ್ಮಾನ್ಯ ಶ್ರೀ ಅಮರೇಗೌಡ ಬಯ್ಯಾಪೂರ ಅವರಿಂದ ನಿರ್ದೇಶಕನಾಗಿರುತ್ತಾರೆ ಹಾಗೂ ಈ ನೇಮಕಾತಿಗೆ ಮಾನ್ಯ ಕರ್ನಾಟಕ ಸರ್ಕಾರದ ಉನ್ನತ ಶಿಕ್ಷಣ ಸಚಿವರಾದ ಸನ್ಮಾನ್ಯ ಶ್ರೀ ಬಸವರಾಜ ರಾಯರಡ್ಡಿಯವರು ಸಹ ಒಪ್ಪಿಗೆ ನೀಡಿ ಅಭಿನಂದಿಸಿದರು.

ಪಕ್ಷವು ಬಲೀಷ್ಠವಾಗಿರಲು ಕಿಸಾನ್ ಘಟಕದ ಸಂಘಟನಾ ಕಾರ್ಯದರ್ಶಿಯನ್ನಾಗಿ ನೇಮಕ ನೀಡಲಾಗಿದೆ. ಈ ಘಟಕಗಳಲ್ಲಿ ಹುದ್ದೆ, ಜವಾಬ್ದಾರಿ ಪಡೆದ ಬಳಿಕ ಯಾರೂ ನಿಷ್ಕ್ರಿಯವಾಗಿರಬಾರದು. ಜವಾಬ್ದಾರಿಯುತವಾಗಿ ಕೆಲಸ ಮಾಡಬೇಕು. ಪಕ್ಷದ ಸಂಘಟನೆಗಾಗಿರುವ ಪ್ರಮುಖ ಘಟಕವಾಗಿದ್ದು ಈ ಘಟಕವು ಸಕ್ರಿಯವಾಗಿ ಕೆಲಸ ಮಾಡಬೇಕು. ಮುಂಬರುವ ಎಲ್ಲಾ ಚುನಾವಣೆಯಲ್ಲಿ ಸಕ್ರೀಯವಾಗಿ ಕೆಲಸ ಮಾಡಬೇಕು ಎಂದು ತಿಳಿಸಿದರು.

ಕೂಡಲೇ ತಾವು ಜಿಲ್ಲಾ ಮತ್ತು ಬ್ಲಾಕ್ ಕಾಂಗ್ರೆಸ್ ಸಮಿತಿಯ ಮಾರ್ಗದರ್ಶನದಲ್ಲಿ ಮತ್ತು ಸ್ಥಳೀಯ ನಾಯಕರ ಸಹಯೋಗದಲ್ಲಿ ಭಾರತಿಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಸಂಘಟನೆ ಮತ್ತು ಬಲವರ್ಧನೆಗೆ ಕಾರ್ಯೋನ್ಮುಖರಾಗಬೇಕೆಂದು ಎಂದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಕೆರಬಸಪ್ಪ ನಿಡಗುಂದಿ. ಹೇಮರೆಡ್ಡಿ ರೆಡ್ಡರ. ಚಂದ್ರು ದೇಸಾಯಿ. ಕಳಕಪ್ಪ ಕುರಿ. ರೇಣುಕರಾಜ್ ಹರಿಜನ. ಇನ್ನೂ ಹಲವಾರು ಕಾಂಗ್ರೆಸ್ ನಾಯಕರು


ಉದಯವಾಹಿನಿ ಚಿತ್ರ

### ಮಾಡ್ಯುಲರ್ ಕೃತಕ ಅಂಗಾಂಗಳ ಮಾಪನ ಶಿಬಿರದಲ್ಲಿ 1500 ಕ್ಕೂ ಹೆಚ್ಚು ಜನ ಭಾಗಿ

• **ಉದಯವಾಹಿನಿ ಬಳ್ಳಾರಿ, :**

ನಗರದ ಸನ್ಮಾನ ಗೆಳೆಯರ ಹಾಗು ನಾರಾಯಣ ಸೇವಾ ಸಂಸ್ಥೆ ಸಹಯೋಗದಲ್ಲಿ ಇಂದು ನಗರದ ಕ್ಲಾಸಿಕ್ ಪಂಕ್ಷನ್ ಹಾಲ್ ನಲ್ಲಿ ಹಮ್ಮಿಕೊಂಡಿದ್ದ ಮಾಡ್ಯುಲರ್ ಕೃತಕ ಕೈ ಕಾಲಿನ ಅಂಗಾಗಳ ಅಳವಡಿಕೆಯ ಮಾಪನದ ಉಚಿತ ಶಿಬಿರದಲ್ಲಿ ದೇಶದ ವಿವಿಧಡೆಯಿಂದ ಬಂದಿದ್ದ 15 ನೂರಕ್ಕೂ ಹೆಚ್ಚು ವಿಕಲಚೇತನರು ಪಾಲ್ಗೊಂಡಿದ್ದರು.

ಅಪಘಾತ, ಗ್ಯಂಗರಿನ್ ಮೊದಲಾದ ಕಾರಣಗಳಿಂದ ಕೈ ಕಾಲು ಕಳೆದ ಕೊಂಡ ದೇಶದ. ಗೋವಾ, ರಾಜಸ್ಥಾನ, ಅಸ್ಸಾಂ, ಮಹಾರಾಷ್ಟ್ರ, ಬಿಹಾರ್,ತೆಲಂಗಾಣ ಆಂದ್ರಪ್ರದೇಶ ರಾಜ್ಯಗಳ ಮತ್ತು ಕರ್ನಾಟಕದ ವಿವಿಧ ಜಿಲ್ಲೆಗಳಿಂದ ಬಂದಿದ್ದ 1500 ಕ್ಕೂ ಹೆಚ್ಚು ಜನರು ಆಗಮಿಸಿದ್ದಾರೆ.

ಬೆಳಗಿನಿಂದಲೇ ಉದಯಪುರದಿಂದ ಬಂದಿರುವ 30 ಕ್ಕೂ ಹೆಚ್ಚು ವೈದ್ಯ ಸಿಬ್ಬಂದಿ ವಿಕಲಚೇತನರ ಕೈ ಕಾಲುಗಳ ತಪಾಸಣೆ ನಡೆಸಿ. ಅಳತೆ ತೆಗೆದುಕೊಂಡರು. ಒಂದೊಂದು ಅಂಗ ಕನಿಷ್ಟ 75 ಸಾವಿರದಿಂದ ಒಂದು ವರೆ ಲಕ್ಷದ ವರೆಗೆ ವೆಚ್ಚದ್ದಾಗಿರುತ್ತವೆ.

ಈ ಶಿಬಿರದಲ್ಲಿ ಅಳವಡಿಸುವ ಕೃತಕ ಮಾಡ್ಯುಲರ್ ಕೈ ಕಾಲುಗಳಿಂದ ಸಹಜ ಕೈ ಕಾಲಿನಂತೆ ಚಲನ ವಲನ ಮಾಡಬಹುದು. ಐಜಿಪಿ ಡಾ.ಹರ್ಷ ಮೊದಲಾದ ಗಣ್ಯರು ಆಗಮಿಸಿ ಈ ಕಾರ್ಯದ ಬಗ್ಗೆ ಶ್ಲಾಘನೆ ವ್ಯಕ್ತಪಡಿಸಿದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಿಗ್ಗೆ | 10:30 ರಿಂದ 12:00 |

**ಮೇಷ** ನೀವು ಇದು ಒಳ್ಳೆಯ ಆರೋಗ್ಯ ಹೊಂದಿರುವುದರಿಂದ ಅದು ನಿಮಗೆ ಯಶಸ್ಸು ನೀಡುವ ಸಾಧ್ಯತೆಯಿದೆ. ಆದರೆ ನಿಮ್ಮ ಶಕ್ತಿಯನ್ನು ನಾಶಪಡಿಸುವ ಎಲ್ಲವನ್ನೂ ನೀವಿಂದು ತಪ್ಪಿಸಬೇಕು. ಹಿಂದೆ ತಮ್ಮ ಹಣವನ್ನು ಹೂಡಿಕೆ ಮಾಡಿದ ಜನರು ಇಂದು ಆ ಹಣದಿಂದ ಲಾಭ ಪಡೆಯುವ ಸಾಧ್ಯತೆಯಿದೆ.

**ವೃಷಭ** ನಿಮ್ಮ ಹೆಚ್ಚು ಆತ್ಮವಿಶ್ವಾಸವನ್ನು ಇಂದು ಚೆನ್ನಾಗಿ ಬಳಸಿಕೊಳ್ಳಲು ಪ್ರಯತ್ನಿಸಿ. ಒತ್ತಡದ ದಿನದ ಹೊರತಾಗಿಯೂ ನೀವು ನಿಮ್ಮ ಚೈತನ್ಯವನ್ನು ಮರಳಿ ಪಡೆಯಲು ಸಾಧ್ಯವಾಗುತ್ತದೆ. ಹೊಸ ಆರ್ಥಿಕ ಒಪ್ಪಂದ ಕುದುರಿಸಲಾಗುತ್ತದೆ ಮತ್ತು ಹೊಸ ಹಣ ಬರುತ್ತದೆ.

**ಮಿಥುನ** ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ. ಚಂದ್ರನ ಸ್ಥಾನದಿಂದಾಗಿ, ಹಣವನ್ನು ಅನಗತ್ಯ ಕೆಲಸಗಳಿಗೆ ಖರ್ಚು ಮಾಡಬಹುದು.

**ಕರ್ಕಾಟಕ** ನೀವು ನಿಮ್ಮ ತಂತ್ರಗಳನ್ನು ಅಳವಡಿಸಿದಲ್ಲಿ ಇಂದು ಸ್ವಲ್ಪ ಹೆಚ್ಚುವರಿ ಹಣ ಸಂಪಾದಿಸುತ್ತೀರಿ. ಅಗತ್ಯವಿದ್ದರೆ ಸ್ನೇಹಿತರು ನಿಮ್ಮ ನೆರವಿಗೆ ಬರುತ್ತಾರೆ. ನಿಮ್ಮ ಪ್ರೇಮ ಜೀವನವಾಗಿ ಮದುವೆಯ ಪ್ರಸ್ತಾಪ ಜೀವನಪೂರ್ಣದ ಬಂಧದಲ್ಲಿ ಬದಲಾಗಬಹುದು. ಸ್ವಾಭಿಮಾನ ನಿರ್ಧಾರಕ್ಕೆ ಅಡ್ಡಪಡಿಸಲು ಬಿಡಬೇಡಿ.

**ಸಿಂಹ** ನೀವು ಚೈತನ್ಯದಿಂದ ತುಂಬಿರುತ್ತೀರಿ ಮತ್ತು ಇಂದು ಅಸಾಮಾನ್ಯವಾದದ್ದೇನಾದರೂ ಸಾಧಿಸುತ್ತೀರಿ. ಹಣದ ಪರಿಸ್ಥಿತಿ ದಿನದಲ್ಲಿ ನಂತರ ಸುಧಾರಿಸುತ್ತದೆ. ಕುಟುಂಬದ ಸದಸ್ಯರು ನಿಮ್ಮ ಜೀವನದಲ್ಲಿ ಒಂದು ವಿಶೇಷ ಸ್ಥಾನವನ್ನು ಹೊಂದಿರುತ್ತಾರೆ. ನಿಮ್ಮ ಪ್ರೇಮಿಯ ಭಾವನಾತ್ಮಕ ಬೆದರಿಕೆಯ ಬೇಡಿಕೆಗಳಿಗೆ ಸಮ್ಮತಿಸಬೇಡಿ.

**ಕನ್ಯಾ** ಆರೋಗ್ಯ ದೃಷ್ಟಿಯಿಂದ ಉತ್ತಮವಾದ ದಿನ. ನಿಮ್ಮ ಹರ್ಷಚಿತ್ತದ ಮನಸ್ಸು ರಾಜ್ಯದ ನೀವು ಬಯಸಿದ ಟಾನಿಕ್ ನೀಡುತ್ತದೆ ಮತ್ತು ನಿಮಗೆ ಆತ್ಮವಿಶ್ವಾಸ ತರುತ್ತದೆ. ಆಸ್ತಿ ವ್ಯವಹಾರಗಳು ಅಸಾಧಾರಣ ಲಾಭ ತರುತ್ತವೆ. ನೀವು ಪ್ರೀತಿಸುವವರಿಂದ ಉಡುಗೊರೆಗಳನ್ನು ಪಡೆಯಲು ಹಾಗೂ ನೀಡಲು ಪವಿತ್ರವಾದ ದಿನ.

**ತುಲಾ** ನೀವು ಕೆಲವು ಗಂಭೀರ ತೊಂದರೆಗಳನ್ನು ಎದುರಿಸಲು ಸಾಧ್ಯತೆಯಿರುವುದರಿಂದ ನಿಮ್ಮನ್ನು ನಿಯಂತ್ರಿಸಿಕೊಳ್ಳಿ. ವಿಶೇಷವಾಗಿ ಸಣ್ಣ ಹುಚ್ಚಲ್ಲದೇ ಬೇರೇನೂ ಅಲ್ಲದ ನಿಮ್ಮ ಕೋಪವನ್ನು ನಿಯಂತ್ರಿಸಿಕೊಳ್ಳಿ. ನೀವು ಸಂಪ್ರದಾಯಬದ್ಧ ಹೂಡಿಕೆಗಳನ್ನು ಮಾಡಿದಲ್ಲಿ ಒಳ್ಳೆಯ ಹಣ ಮಾಡುತ್ತೀರಿ.

**ವೃಶ್ಚಿಕ** ವಿಜಯೋತ್ಸವವು ನಿಮಗೆ ಪ್ರಚಂಡ ಸಂತೋಷವನ್ನು ನೀಡುತ್ತದೆ. ನಿಮ್ಮ ಸಂತೋಷವನ್ನು ಅನುಭವಿಸಲು ನೀವಿದನ್ನು ನಿಮ್ಮ ಸ್ನೇಹಿತರ ಜೊತೆ ಹಂಚಿಕೊಳ್ಳಬಹುದು. ವಿದೇಶದಲ್ಲಿ ವ್ಯಾಪಾರ ಮಾಡುವ ಈ ರಾಶಿಚಕ್ರದ ಜನರಿಗೆ ಇಂದು ಸಾಕಷ್ಟು ಹಣದ ಲಾಭವನ್ನು ಪಡೆಯಬಹುದು.

**ಧನಸ್ಸು** ಹೊರಾಂಗಣ ಚಟುವಟಿಕೆಗಳು ಇಂದು ದಣವು ಮತ್ತು ಒತ್ತಡ ತರುತ್ತವೆ. ನಿಮ್ಮ ಹಣವನ್ನು ಸಂಗ್ರಹಿಸಿದಾಗ ಮಾತ್ರ ಹಣ ನಿಮ್ಮ ಕೆಲಸಕ್ಕೆ ಬರುತ್ತದೆ. ಇದನ್ನು ನೀವು ಚೆನ್ನಾಗಿ ಅರ್ಥಮಾಡಿಕೊಳ್ಳಿ ಇಲ್ಲದಿದ್ದರೆ ನೀವು ಮುಂಬರುವ ಸಮಯದಲ್ಲಿ ವಿಷಾದಿಸಬೇಕಾಗುತ್ತದೆ.

**ಮಕರ** ಧೃತಿಗೆಡಬೇಡಿ ಹಾಗೂ ನಿರೀಕ್ಷಿತ ಫಲಿತಾಂಶ ಪಡೆಯಲು ಕಠಿಣ ಪರಿಶ್ರಮಪಡಿ. ಈ ಹಿನ್ನಡೆಗಳು ನಿಮ್ಮ ಯಶಸ್ಸಿನ ಸೋಪಾನಗಳಾಗಿರಲಿ. ಬಿಕ್ಕಟ್ಟಿನ ಸಮಯದಲ್ಲಿ ಸಂಬಂಧಿಗಳೂ ಸಹಾಯ ಮಾಡುತ್ತಾರೆ. ನೀವು ಇತರರ ಮಾತುಗಳನ್ನು ನಂಬಿ ಇಂದು ಹೂಡಿಕೆ ಮಾಡಿದಲ್ಲಿ ಇಂದು ಆರ್ಥಿಕ ನಷ್ಟದ ಸಾಧ್ಯತೆಯಿದೆ.

**ಕುಂಭ** ಗಾಳಿಯಲ್ಲಿ ಮನೆ ಕಟ್ಟುವಲ್ಲಿ ನಿಮ್ಮ ಸಮಯ ವ್ಯರ್ಥ ಮಾಡಬೇಡಿ. ಬದಲಿಗೆ ಏನಾದರೂ ಅರ್ಥಪೂರ್ಣವಾದದ್ದನ್ನು ಮಾಡಲು ನಿಮ್ಮ ಶಕ್ತಿ ವ್ಯಯಿಸಿ. ದೊಡ್ಡ ಗುಂಪಿನಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳುವುದು ಅತ್ಯಂತ ಮನರಂಜನಾತ್ಮಕವಾಗಿರುತ್ತದೆ- ಆದರೆ ನಿಮ್ಮ ವೆಚ್ಚಗಳು ಹಚ್ಚಾಗುತ್ತವೆ.

**ಮೀನ** ನೀವು ಇಂದು ಮಾಡುವ ಕೆಲವು ದೈಹಿಕ ಬದಲಾವಣೆಗಳು ಖಂಡಿತವಾಗಿಯೂ ನಿಮ್ಮ ನೋಟವನ್ನು ವರ್ಧಿಸುತ್ತವೆ. ವಿಳಂಬಿತ ಪಾವತಿಗಳನ್ನು ಮಾಡುತ್ತಿದ್ದ ಹಾಗೆ ಹಣದ ಪರಿಸ್ಥಿತಿ ಸುಧಾರಿಸುತ್ತದೆ. ಸ್ನೇಹಿತರು ನಿಮಗೆ ಬೆಂಬಲ ನೀಡಿದರೂ ಆದರೆ ಮಾತುಗಳ ಬಗ್ಗೆ ಎಚ್ಚರದಿಂದಿರಿ .

# ಸ್ವಾತಂತ್ರ್ಯ ಮಹೋತ್ಸವ, ತ್ಯಾಗ ಬಲಿದಾನವನ್ನು ಸ್ಮರಿಸುವ ದಿನ: ವೀರಭದ್ರಗೌಡ

• ಉದಯವಾಹಿನಿ ಯಲಬುರ್ಗಾ

ಸ್ವಾತಂತ್ರ್ಯ ಹೋರಾಟಗಾರರಿಗೆ ದೇಶ ಚಿರಋಣಿಯಾಗಿದ್ದು, ಅವರ ತ್ಯಾಗ ಬಲಿದಾನವನ್ನು ಸ್ಮರಿಸುವ ದಿನ ಇದಾಗಿದೆ ಎಂದು ಗ್ರಾಪಂ ಅಭಿವೃದ್ಧಿ ಅಧಿಕಾರಿ ವೀರಭದ್ರ ಗೌಡ ಮುಲಿಮನಿ ಅವರು ಹೇಳಿದರು.

ತಾಲ್ಲೂಕಿನ ಮುಧೋಳ ಗ್ರಾಮ ಪಂಚಾಯತಿ ಆವರಣದಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆ ಪ್ರಯುಕ್ತ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿ, ನಮ್ಮ ದೇಶ ಸುಲಭವಾಗಿ ಸ್ವಾತಂತ್ರ್ಯ ಪಡೆಯಲಿಲ್ಲ. ಅನೇಕ ಹೋರಾಟಗಾರರ ತ್ಯಾಗ, ಬಲಿದಾನದಿಂದ ಸ್ವಾತಂತ್ರ್ಯ ದೊರಕಿದೆ. ವೀರಯೋಧರು ಹಾಗೂ ಹೋರಾಟಗಾರರನ್ನು ಸದಾಕಾಲ ಸ್ಮರಿಸಬೇಕು. ದೇಶ ನಮಗೇನು ನೀಡಿದೆ ಅನ್ನೋದಕ್ಕಿಂತ ದೇಶಕ್ಕೆ ನಾವು ಏನು ನೀಡಿದ್ದೇವೆ ಎಂಬುದು ಮುಖ್ಯ ಆಗುತ್ತದೆ ತಿಳಿಸಿದರು.



ಉದಯವಾಹಿನಿ ಚಿತ್ರ

ಪ್ರತಿಯೊಬ್ಬರೂ ದೇಶಾಭಿಮಾನ ಬೆಳೆಸಿಕೊಳ್ಳಬೇಕು. ದೇಶದ ಏಳ್ಗೆಗೆ ಶ್ರಮಿಸಬೇಕು ಎಂದರು.

ಕಳೆದ 80 ವರ್ಷಗಳಿಂದ ಮಹಾತ್ಮ ಗಾಂಧಿ ಹಾಗೂ ಅಂಬೇಡ್ಕರ್ ಅವರ ತತ್ವಾದರ್ಶಗಳನ್ನು ಅಳವಡಿಸಿಕೊಂಡು ಬರುತ್ತಿದ್ದೇವೆ. ಇನ್ನು ಸಾಕಷ್ಟು ಅಭಿವೃದ್ಧಿ ಕಾರ್ಯಗಳು ಶುರುಆಗಬೇಕಿದೆ ಎಂದು ಸಲಹೆ ನೀಡಿದರು.

ಈ ವೇಳೆ ಗ್ರಾಮ ಪಂಚಾಯತ್ ಮಾಜಿ ಸರ್ವ ಸದಸ್ಯರು ವಿವಿಧ ಸಂಘ ಸಂಸ್ಥೆಯ ಸರ್ವ ಸದಸ್ಯರು, ಗ್ರಾಮದ ವಿವಿಧ ಶಾಲೆಗಳ ವಿದ್ಯಾರ್ಥಿಗಳು ಮತ್ತು ಅಂಗನವಾಡಿ ಕಾರ್ಯ ಕರ್ತೆಯರು ಆಶಾ ಕಾರ್ಯ ಕರ್ತೆಯರು, ಪೋಷಕರು ಮಕ್ಕಳು ಮತ್ತು ಶಿಕ್ಷಣಾಭಿಮಾನಿಗಳು ಗ್ರಾಪಂ ಸಿಬ್ಬಂದಿಗಳು ಗ್ರಾಮದ ಸಾರ್ವಜನಿಕರು ಭಾಗವಹಿಸಿದ್ದರು.

# ‘ರಜಾಕರ್‌ಗಳಿಂದ ನಮ್ಮನ್ನು ರಕ್ಷಿಸಿದ್ದು ಆರ್‌ಎಸ್‌ಎಸ್ ಅಲ್ಲ, ಭಾರತೀಯ ಸೇನೆ’

## ನೀವು ಖರ್ಗೆ ಕುಟುಂಬವನ್ನು ರಕ್ಷಿಸಿದ್ದೀರಿ ಎಂದು ಹೇಳಿಕೊಂಡಿದ್ದೀರಿ. ವಿಭಜನೆಯ ಬಳಿಕ ಸಾಕಷ್ಟು ಕೋಮು ಗಲಭೆಗಳು ನಡೆದವು

• ಉದಯವಾಹಿನಿ ಕಲಬುರಗಿ:


ಹೈದರಾಬಾದ್ ಸಂಸ್ಥಾನದ ಭಾರತ ವಿಲೀನದ ಸಂದರ್ಭದಲ್ಲಿ ಆರ್‌ಎಸ್‌ಎಸ್ ಕಾರ್ಯಕರ್ತರು ರಜಾಕರ್‌ಗಳ ವಿರುದ್ಧ ಹೋರಾಡಿ ಹಿಂದೂಗಳನ್ನು ರಕ್ಷಿಸಿದ್ದರು ಎಂಬ ಬಿಜೆಪಿ ನಾಯಕ ಬಿ.ಎಲ್. ಸಂತೋಷ್ ಅವರ ಹೇಳಿಕೆಯನ್ನು ಕರ್ನಾಟಕ ಗೃಹ

1 : ಗಲಭೆಗಳನ್ನು ಸೃಷ್ಟಿಸುವ ಸಂಘಟನೆ
2 : ಭಾರತವನ್ನು ಒಗ್ಗೂಡಿಸಿದ್ದು ಪಟೇಲ್
3 : ಕೋಮು ಗಲಭೆಯ ಬಲಿಪಶುವಾಗಿತ್ತು

ಸಚಿವ ಪ್ರಿಯಾಂಕ್ ಖರ್ಗೆ ತೀವ್ರವಾಗಿ ತಿರಸ್ಕರಿಸಿದ್ದಾರೆ.

‘‘ನೀವು ಖರ್ಗೆ ಕುಟುಂಬವನ್ನು ರಕ್ಷಿಸಿದ್ದೀರಿ ಎಂದು ಹೇಳಿಕೊಂಡಿದ್ದೀರಿ. ವಿಭಜನೆಯ ಬಳಿಕ ಸಾಕಷ್ಟು ಕೋಮು ಗಲಭೆಗಳು ನಡೆದವು. ಯಾವ ಕೋಮು ಗಲಭೆಯಲ್ಲಿ ನೀವು ನಮ್ಮನ್ನು ರಕ್ಷಿಸಿ ಸಹಾಯ ಮಾಡಿದ್ದೀರಿ?’’ ಎಂದು ಪ್ರಶ್ನಿಸಿದರು. ‘‘ಹೌದು, ನಮ್ಮ ಕುಟುಂಬ ಕೋಮು ಗಲಭೆಯ ಬಲಿಪಶುವಾಗಿತ್ತು. ನಾವು ಅಲ್ಲಿಂದ ಬಲವಂತವಾಗಿ ಇಲ್ಲಿಗೆ ಬರಬೇಕಾಯಿತು. ಆ ಸಂದರ್ಭದಲ್ಲಿ ಯಾರೂ ಇರಲಿಲ್ಲ, ಸರ್ಕಾರವೂ ಇರಲಿಲ್ಲ. ಆಗ ನೀವು ಏನು ಮಾಡಿದ್ದೀರಿ?’’ ಎಂದು ಅವರು ಪ್ರಶ್ನಿಸಿದರು. ಹೈದರಾಬಾದ್ ಸಂಸ್ಥಾನವನ್ನು ಭಾರತಕ್ಕೆ ವಿಲೀನಗೊಳಿಸಿದ ‘ಆಪರೇಷನ್ ಪೋಲೋ’ ಕಾರ್ಯಾಚರಣೆಯನ್ನು ಉಲ್ಲೇಖಿಸಿದ ಖರ್ಗೆ, ಹೈದರಾಬಾದ್ ವಿಮೋಚನೆಯಲ್ಲಿ ಆರ್‌ಎಸ್‌ಎಸ್ ಪಾತ್ರದ ಬಗ್ಗೆ ಸಂತೋಷ್ ಅವರ ಹೇಳಿಕೆಯನ್ನು ಪ್ರಶ್ನಿಸಿದರು. ‘‘ಆಪರೇಷನ್ ಪೋಲೋ ನಡೆಸಿದ್ದು ಯಾರು? ಆರ್‌ಎಸ್‌ಎಸ್? ಅದನ್ನು ಪಟೇಲ್, ನೆಹರು ಮತ್ತು ಭಾರತೀಯ ಸೇನೆ ನಡೆಸಿತು, ಆರ್‌ಎಸ್‌ಎಸ್ ಅಲ್ಲ. 1948ರ ಸೆಪ್ಟೆಂಬರ್‌ನಲ್ಲಿ ಭಾರತೀಯ ಸೇನೆ ನಡೆಸಿದ ‘ಆಪರೇಷನ್ ಪೋಲೋ’ ಮೂಲಕ ಹೈದರಾಬಾದ್ ಸಂಸ್ಥಾನವನ್ನು ಭಾರತಕ್ಕೆ ವಿಲೀನಗೊಳಿಸಲಾಗಿತ್ತು. ಹೈದರಾಬಾದ್ ಕರ್ನಾಟಕ ವಿಮೋಚನಾ ದಿನವಾಗಿ ಈ ಪ್ರದೇಶದ ವಿಮೋಚನೆಯನ್ನು ಆಚರಿಸಲಾಗುತ್ತಿದೆ. ಆದರೆ ಅದನ್ನು ಆರ್‌ಎಸ್‌ಎಸ್ ಮಾಡಿತು ಎಂಬ ರೀತಿಯ ಹೇಳಿಕೆ ಸರಿಯಲ್ಲ. ನೀವು ಎಲ್ಲರನ್ನೂ ರಕ್ಷಿಸಿದ್ದೀರಿ ಎಂಬ ಭ್ರಮೆಯಲ್ಲಿ ಇರಬೇಡಿ. ಆರ್‌ಎಸ್‌ಎಸ್ ನಮ್ಮನ್ನು ರಕ್ಷಿಸಲಿಲ್ಲ ಎಂದು ಪ್ರಿಯಾಂಕ್ ಖರ್ಗೆ ಹೇಳಿದರು.

ಸುಭಾಷ್ ಚಂದ್ರ ಬೋಸ್ ಅವರ ಇಂಡಿಯನ್ ನ್ಯಾಷನಲ್ ಆರ್ಮಿ ವಿಚಾರದಲ್ಲೂ ಖರ್ಗೆ, ವಿನಾಯಕ ದಾಮೋದರ ಸಾವರ್ಕರ್ ಅವರ ಪಾತ್ರವನ್ನು ಪ್ರಶ್ನಿಸಿದರು. ‘‘ಸುಭಾಷ್ ಚಂದ್ರ ಬೋಸ್ ಐಎನ್‌ಎ ಕಟ್ಟುತ್ತಿದ್ದಾಗ, ಸೈನಿಕರನ್ನು ನೇಮಕ ಮಾಡಿಕೊಳ್ಳುತ್ತಿದ್ದಾಗ, ಸಾವರ್ಕರ್ ಜನರು ಗೆ ಸೇರುವ ಬದಲು ಬ್ರಿಟಿಷ್ ಸೇನೆಗೆ ಸೇರಬೇಕು ಎಂದು ಕರೆ ನೀಡಿದ್ದರು’’ ಎಂದು ಅವರು ಆರೋಪಿಸಿದರು.



ಉದಯವಾಹಿನಿ ಚಿತ್ರ

> ‘‘ನಮ್ಮನ್ನು ರಕ್ಷಿಸಲು ಆರ್‌ಎಸ್‌ಎಸ್ ಬಂದಿರಲಿಲ್ಲ. ನಮ್ಮ ಪ್ರದೇಶದ ಜನರನ್ನು ಪಂಡಿತ್ ಜವಾಹರಲಾಲ್ ನೆಹರು, ಸರ್ದಾರ್ ವಲ್ಲಭಭಾಯಿ ಪಟೇಲ್ ಮತ್ತು ಭಾರತೀಯ ಸೇನೆ ರಕ್ಷಿಸಿತು. ಭಾರತೀಯ ಸೇನೆ ಬಂದು ನಮ್ಮನ್ನು ಕಾಪಾಡಿತು’’ ಎಂದು ಕಲಬುರಗಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಹೇಳಿದ್ದಾರೆ. -ಪ್ರಿಯಾಂಕ್ ಖರ್ಗೆ

> ಕೋಮು ಗಲಭೆಗಳ ಸಂದರ್ಭದಲ್ಲಿ ಆರ್‌ಎಸ್‌ಎಸ್ ಜನರನ್ನು ರಕ್ಷಿಸುವ ಬದಲು ಕೋಮು ಉದ್ವಿಗ್ನತೆ ಹೆಚ್ಚಿಸಲು ಕಾರಣವಾಗಿದೆ ಎಂದು ಪ್ರಿಯಾಂಕ್ ಖರ್ಗೆ ಆರೋಪಿಸಿದರು. ಮಹಾತ್ಮ ಗಾಂಧೀಜಿ ಹತ್ಯೆ ಮತ್ತು ನಂತರದ ಕೋಮು ಗಲಭೆಗಳನ್ನು ಉಲ್ಲೇಖಿಸಿದ ಅವರು, ಆರ್‌ಎಸ್‌ಎಸ್ ಸಿದ್ಧಾಂತದ ಪ್ರಭಾವದ ಬಗ್ಗೆಯೂ ಆರೋಪಗಳನ್ನು ಮಾಡಿದರು. -ಪ್ರಿಯಾಂಕ್ ಖರ್ಗೆ

### ಸರ್ದಾರ್ ಪಟೇಲ್ ಅವರ ದೃಢ ನಿಲುವು

ಸರ್ದಾರ್ ಪಟೇಲ್ ಅವರ ದೃಢ ನಿಲುವಿನಿಂದಲೇ ದೇಶದ ನೂರಾರು ಸಂಸ್ಥಾನಗಳು ಭಾರತದಲ್ಲಿ ವಿಲೀನಗೊಂಡು ಅಖಂಡ ರಾಷ್ಟ್ರ ನಿರ್ಮಾಣವಾಯಿತು ಎಂದು ಖರ್ಗೆ ಹೇಳಿದರು. ‘‘ಸುಮಾರು 560 ಸಣ್ಣ ರಾಜ್ಯಗಳು ಮತ್ತು ಸಂಸ್ಥಾನಗಳನ್ನು ಒಗ್ಗೂಡಿಸಿ ಭಾರತವನ್ನು ಒಂದು ರಾಷ್ಟ್ರವನ್ನಾಗಿ ಮಾಡಿದ್ದು ಪಟೇಲ್ ಅವರ ಪ್ರಯತ್ನ. ಆರ್‌ಎಸ್‌ಎಸ್ ಕಾರಣದಿಂದಲ್ಲ’’ ಎಂದು ಅವರು ಹೇಳಿದರು.

# ದೇಶಭಕ್ತಿ, ಸಂಸ್ಕಾರ ಹಾಗೂ ಗುಣಮಟ್ಟದ ಶಿಕ್ಷಣಕ್ಕೆ ಒತ್ತು;80ನೇ ಸ್ವಾತಂತ್ರ್ಯೋತ್ಸವ ಸಂಭ್ರಮ

• ಉದಯವಾಹಿನಿ ಮುದ್ದೇಬಿಹಾಳ:

ತಾಲ್ಲೂಕಿನ ಕೇಸಾಪುರದ ಸಿದ್ಧಾರ್ಥ ಪಬ್ಲಿಕ್ ಸ್ಕೂಲ್‌ನಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಅತ್ಯಂತ ಸಂಭ್ರಮ ಹಾಗೂ ಸಡಗರದಿಂದ ಆಚರಿಸಲಾಯಿತು. ಸಂಸ್ಥೆಯ ಆಡಳಿತ ಅಧಿಕಾರಿ ಸಿದ್ಧಾರ್ಥ ಖಾನಾಪೂರ ಅವರು ರಾಷ್ಟ್ರಧ್ವಜಾರೋಹಣ ನೆರವೇರಿಸಿದರು.

ಬಳಿಕ ಮಾತನಾಡಿದ ಸಂಸ್ಥೆಯ ಅಧ್ಯಕ್ಷೆ ಶ್ರೀಮತಿ ಸರಸ್ವತಿ ಖಾನಾಪೂರ ಹಾಗೂ ಆಡಳಿತ ಅಧಿಕಾರಿ ಸಿದ್ಧಾರ್ಥ ಖಾನಾಪೂರ, ಭಾರತ ದೇಶ ಸ್ವಾತಂತ್ರ್ಯ ಹೊಂದಲು ಲಕ್ಷಾಂತರ ದೇಶಭಕ್ತರು ತಮ್ಮ ಪ್ರಾಣತ್ಯಾಗ ಹಾಗೂ ಬಲಿದಾನ ಮಾಡಿದ್ದಾರೆ. ಅಂತಹ ಹುತಾತ್ಮ ದೇಶಪ್ರೇಮಿಗಳು ಹಾಗೂ ಸ್ವಾತಂತ್ರ್ಯ ಹೋರಾಟಗಾರರನ್ನು ಪ್ರತಿಯೊಬ್ಬರೂ ಸದಾ ಸ್ಮರಿಸಬೇಕು. ಅವರ ಶೌರ್ಯ, ಸಾಹಸ ಹಾಗೂ ದೇಶಪ್ರೇಮದ ಕುರಿತು ಮಕ್ಕಳಿಗೆ ತಿಳಿಸಿಕೊಡಬೇಕು ಎಂದು ಹೇಳಿದರು.

ಕರ್ನಾಟಕದ ಸ್ವಾತಂತ್ರ್ಯ ಹೋರಾಟಗಾರರು ಹಾಗೂ ಮುದ್ದೇಬಿಹಾಳ ತಾಲ್ಲೂಕಿನ ಸ್ವಾತಂತ್ರ್ಯ ಹೋರಾಟಗಾರರ ಕುರಿತು ವಿದ್ಯಾರ್ಥಿಗಳಿಗೆ ಹೆಚ್ಚಿನ ಮಾಹಿತಿಯನ್ನು ನೀಡುವ ಅಗತ್ಯವಿದೆ. ಭಾರತವನ್ನು ಜಾಗತಿಕ ಮಟ್ಟದಲ್ಲಿ ಅಗ್ರಗಣ್ಯ ರಾಷ್ಟ್ರವನ್ನಾಗಿ ರೂಪಿಸಲು ಪ್ರತಿಯೊಬ್ಬರೂ ಒಗ್ಗಟ್ಟಿನಿಂದ ಶ್ರಮಿಸಬೇಕು ಎಂದು ಕರೆ ನೀಡಿದರು.


ಉದಯವಾಹಿನಿ ಚಿತ್ರ

ರಾಷ್ಟ್ರ ನಿರ್ಮಾಣದಲ್ಲಿ ಗುಣಮಟ್ಟದ ಶಿಕ್ಷಣದ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಸಿದ್ಧಾರ್ಥ ಪಬ್ಲಿಕ್ ಸ್ಕೂಲ್‌ನಲ್ಲಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ರಾಷ್ಟ್ರೀಯತೆ, ದೇಶಭಕ್ತಿ, ಸಂಸ್ಕಾರ ಹಾಗೂ ಉತ್ತಮ ಮೌಲ್ಯಗಳನ್ನು ಬೆಳೆಸುವ ಶಿಕ್ಷಣ ನೀಡಲಾಗುತ್ತಿದೆ ಎಂದು ಅವರು ಹೇಳಿದರು.

ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ವಿದ್ಯಾರ್ಥಿಗಳಿಂದ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ದೇಶಭಕ್ತಿ ಗೀತೆಗಳು, ಭಾಷಣ, ನೃತ್ಯ ಹಾಗೂ ಸ್ಫೂರ್ತಿದಾಯಕ ಕಾರ್ಯಕ್ರಮಗಳು ನೆರೆದಿದ್ದವರ ಗಮನ ಸೆಳೆದವು. ಕಾರ್ಯಕ್ರಮದ ಅಂಗವಾಗಿ ನಡೆದ ಆಕರ್ಷಕ ಪಥಸಂಚಲನದಲ್ಲಿ ಶುಶ್ರುತ ಹೌಸ್ ಪ್ರಥಮ ಸ್ಥಾನ ಹಾಗೂ ಬ್ರಹ್ಮಗುಪ್ತ ಹೌಸ್ ದ್ವಿತೀಯ ಸ್ಥಾನ ಪಡೆದುಕೊಂಡಿತು. ನೋಟಿಸ್ ಬೋರ್ಡ್ ಡೆಕೋರೇಷನ್‌ನಲ್ಲಿ ಆರ್ಯಭಟ ಹೌಸ್ ಪ್ರಥಮ ಸ್ಥಾನ ಹಾಗೂ ಶುಶ್ರುತ ಹೌಸ್ ದ್ವಿತೀಯ ಸ್ಥಾನ ಗಳಿಸಿತು.

ಶಾಲೆಯ ಪ್ರಾಂಶುಪಾಲ ದಾಸಪ್ಪ ಎಸ್. ಮಾತನಾಡಿ, ದೇಶದ ಗಡಿಯನ್ನು ಸದಾಕಾಲ ಕಾಯುತ್ತಿರುವ ವೀರ ಸೈನಿಕರನ್ನು ಹಾಗೂ ದೇಶಕ್ಕೆ ಅನ್ನ ನೀಡುತ್ತಿರುವ ರೈತರನ್ನು ಪ್ರತಿಯೊಬ್ಬರೂ ಸ್ಮರಿಸಬೇಕು. ಸೈನಿಕರು ಮತ್ತು ರೈತರ ಕೊಡುಗೆ ದೇಶದ ಅಭಿವೃದ್ಧಿಯಲ್ಲಿ ಅತ್ಯಂತ ಮಹತ್ವದ್ದಾಗಿದೆ ಎಂದು ಹೇಳಿದರು.ಕಾರ್ಯಕ್ರಮದಲ್ಲಿ ಸಂಸ್ಥೆಯ ಆಡಳಿತ ಮಂಡಳಿ ನಿರ್ದೇಶಕರಾದ ಗೌತಮ್ ಖಾನಾಪೂರ, ಅನಿಲ್ ಖಾನಾಪೂರ, ಸಂಯೋಜಕ ದೇವದಾಜ ಟಿ., ಶಿಕ್ಷಕರು, ಶಿಕ್ಷಕಿಯರು, ಪಾಲಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ವಿದ್ಯಾರ್ಥಿನಿಯರಾದ ಸಿಂಧು ಹಾಗೂ ಪ್ರೀತಿ ಕಾರ್ಯಕ್ರಮವನ್ನು ನಿರೂಪಿಸಿ ವಂದಿಸಿದರು.

# ಕಡಬದಲ್ಲಿ ನೈತಿಕ ಪೊಲೀಸ್‌ಗಿರಿ ಪ್ರಕರಣ: 9 ಮಂದಿ ವಿರುದ್ಧ ಕೇಸು ದಾಖಲು

• ಉದಯವಾಹಿನಿ ಮಂಗಳೂರು:

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮತ್ತೊಂದು ನೈತಿಕ ಪೊಲೀಸ್‌ಗಿರಿ ಪ್ರಕರಣ ವರದಿಯಾಗಿದ್ದು, ಆಗಸ್ಟ್ 12ರಂದು ಕಡಬ ತಾಲೂಕಿನ ಕೊಲ್ವೆಯಲ್ಲಿ ಯುವತಿ ಹಾಗೂ ಆಕೆಯ ಕುಟುಂಬದ ಸದಸ್ಯರ ಮೇಲೆ ಹಲ್ಲೆ ನಡೆಸಿದ ಆರೋಪದ ಹಿನ್ನೆಲೆಯಲ್ಲಿ ಒಂಬತ್ತು ಮಂದಿಯ ವಿರುದ್ಧ ಪ್ರಕರಣ ದಾಖಲಾಗಿದೆ.

ದೂರಿನ ಪ್ರಕಾರ, ಕೊಲ್ವೆಯ 18 ವರ್ಷದ ಯುವತಿ ಮೆಲ್ಕಾರ್‌ನಲ್ಲಿ ಕೆಲಸ ಮಾಡುತ್ತಿದ್ದು, ಕೆಲಸ ಮುಗಿಸಿಕೊಂಡು ತನ್ನ ತಾಯಿ ಸಫಿಯಾ ಅವರೊಂದಿಗೆ ಕಾರಿನಲ್ಲಿ ಮನೆಗೆ ವಾಪಸ್ ಬರುತ್ತಿದ್ದರು. ಅಂಗಡಿ ಮಾಲೀಕ ಜಾಹಿರ್ ಅವರ ಸ್ನೇಹಿತ ಸಿಪ್ವಾನ್ ಕಾರು ಚಲಾಯಿಸುತ್ತಿದ್ದರು ಎನ್ನಲಾಗಿದೆ. ಯುವತಿಯನ್ನು ಮನೆಯ ಸಮೀಪ ಇಳಿಸಿದ ಬಳಿಕ, ರಾತ್ರಿ ಸುಮಾರು 11 ಗಂಟೆಗೆ ಕೊಲ್ವೆ ಬಳಿ ಕೆಲವರು ಕಾರನ್ನು ತಡೆದಿದ್ದಾರೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ. ಆರೋಪಿಗಳು ಯುವತಿ ಹಾಗೂ ಆಕೆಯೊಂದಿಗೆ ಇದ್ದವರನ್ನು ಪ್ರಶ್ನಿಸಿ, ಯುವತಿ ಮೇಲೆ ಹಲ್ಲೆ ನಡೆಸಿದ್ದಾರೆ ಎನ್ನಲಾಗಿದೆ. ಆಕೆಗೆ ಕಪಾಳಮೋಕ್ಷ ಮಾಡಿ, ಗಂಭೀರ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಬೆದರಿಕೆ ಹಾಕಿದ್ದಾರೆ ಎಂದು ಆರೋಪಿಸಲಾಗಿದೆ. ಘಟನಾ ಸ್ಥಳಕ್ಕೆ ಆಗಮಿಸಿ ಮಧ್ಯಪ್ರವೇಶಿಸಲು ಯತ್ನಿಸಿದ ಜಮಾಲ್ ಅವರ ಮೇಲೂ ಹಲ್ಲೆ ನಡೆಸಲಾಗಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ. ಹಲ್ಲೆಯಿಂದ ಯುವತಿ ಕುಸಿದುಬಿದ್ದ ಬಳಿಕ ಸಹಾಯಕ್ಕೆ ಬಂದ ಆಕೆಯ ಸಹೋದರಿ ಫಸೀಲಾ ಅವರ ಮೇಲೂ ಹಲ್ಲೆ ನಡೆದಿದೆ ಎಂದು ಆರೋಪಿಸಲಾಗಿದೆ. ಬಳಿಕ ಯುವತಿಯನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ನಂತರ ಅವರು ವಿಡಿಯೊವೊಂದನ್ನು ಬಿಡುಗಡೆ ಮಾಡಿ, ತಮಗೆ ಹಾಗೂ ಕುಟುಂಬ ಸದಸ್ಯರಿಗೆ ಭೀಕರವಾಗಿ ಹಲ್ಲೆ ನಡೆಸಲಾಗಿದೆ ಎಂದು ಆರೋಪಿಸಿದ್ದಾರೆ.

# ನಿವೃತ್ತ ಶಿಕ್ಷಕನ ಭೀಕರ ಹತ್ಯೆ

• ಉದಯವಾಹಿನಿ ವಿಜಯಪುರ, :

ಭೀಮಾ ತೀರದಲ್ಲಿ ಮತ್ತೊಮ್ಮೆ ನೆತ್ತರು ಹರಿದಿದೆ . ವಿಜಯಪುರದ ಇಂಡಿ ತಾಲ್ಲೂಕಿನಲ್ಲಿ ನಿವೃತ್ತ ಶಿಕ್ಷಕ, 63 ವರ್ಷದ ಸಿದ್ದಪ್ಪ ಅಂಜುಟಗಿ ಅವರನ್ನು ಕೊಲೆಗೈದು ದುಷ್ಕರ್ಮಿಗಳು ಪರಾರಿಯಾಗಿದ್ದಾರೆ. ಕೊಲೆಗೆ ಕಾರಣ ತಿಳಿದು ಬಂದಿಲ್ಲ. ಇಂಡಿ ತಾಲೂಕಿನ ಚೌಡಿಹಾಳ ರಸ್ತೆಯ ಪೂಜಾರಿ ವಸ್ತಿ ಬಳಿ ಘಟನೆ ನಡೆದಿದ್ದು, ಸ್ಥಳಕ್ಕೆ ಪೊಲೀಸರು ಭೇಟಿ ನೀಡಿದ್ದಾರೆ . ಸದ್ಯ ಪೊಲೀಸರು ದುಷ್ಕರ್ಮಿಗಳ ಪತ್ತೆಗೆ ಬಲೆ ಬೀಸಿದ್ದಾರೆ. ಹೆಚ್ಚಿನ ವಿವರ ಕಲೆ ಹಾಕಲಾಗುತ್ತಿದೆ. ತಿಂಗಳ ಅಂತರದಲ್ಲಿ ನಡೆಯುತ್ತಿರುವ 2ನೇ ಹತ್ಯೆ ಇದು. ಜುಲೈಯಲ್ಲಿ ಕಲಬುರಗಿ ಜಿಲ್ಲೆಯ ಅಫಜಲಪುರ ತಾಲ್ಲೂಕಿನ ದೇವಲಗಾಣಗಾಪುರ ಗ್ರಾಮದಲ್ಲಿ ಟಂ-ಟಂ ಚಾಲಕನ ಮೇಲೆ ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿ ಕೊಲೆ ಮಾಡಲಾಗಿತ್ತು. ನಸುಕಿನ ಜಾವ 2.17 ಗಂಟೆ ಸುಮಾರಿಗೆ ಸಂಗಮ ರಸ್ತೆಯಲ್ಲಿರುವ ಅವಧೂತ ಆಶ್ರಮದ ಸಮೀಪ ಈ ಘಟನೆ ನಡೆದಿತ್ತು. ಮೃತನನ್ನು ದೇವಲಗಾಣಗಾಪುರ ಗ್ರಾಮದ ದತ್ತು (19) ಎಂದು ಗುರುತಿಸಲಾಗಿದೆ. ಘಟನೆಯಲ್ಲಿ ತೀವ್ರವಾಗಿ ಗಾಯಗೊಂಡಿದ್ದ ದತ್ತುವನ್ನು ಮೊದಲಿಗೆ ಸ್ಥಳೀಯ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ನೀಡಿ ಬಳಿಕ ಹೆಚ್ಚಿನ ಚಿಕಿತ್ಸೆಗೆ ಕಲಬುರಗಿಯ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಯಿತು.

# ಎಸ್‌ಡಬ್ಲ್ಯುಆರ್‌ಎಂಯು ವತಿಯಿಂದ ರಕ್ತದಾನ ಶಿಬಿರ

• ಉದಯವಾಹಿನಿ ಹೊಸಪೇಟೆ

80ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ದಕ್ಷಿಣ ಪಶ್ಚಿಮ ರೈಲ್ವೆ ಮಜ್ದೂರ್ ಯೂನಿಯನ್ , ಹೊಸಪೇಟೆ ಶಾಖೆ ಹಾಗೂ ರೋಟರಿ ಕ್ಲಬ್, ಹೊಸಪೇಟೆ ಸಂಯುಕ್ತ ಆಶ್ರಯದಲ್ಲಿ ಹೊಸಪೇಟೆಯ ಯೂನಿಯನ್ ಕಚೇರಿಯಲ್ಲಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿತ್ತು.ಎಸ್‌ಡಬ್ಲ್ಯುಆರ್‌ಎಂಯು, ಹುಬ್ಬಳ್ಳಿ ವಿಭಾಗದ ಪ್ರಧಾನ ಕಾರ್ಯದರ್ಶಿ ಕಾಮ್ರೇಡ್ ಕೆ.ವಿ. ರಾಘವೇಂದ್ರ ಹಾಗೂ ವಿಭಾಗೀಯ ಕಾರ್ಯದರ್ಶಿ ಕಾಮ್ರೇಡ್ ಆರ್. ಕುಮಾರವೇಲನ ಅವರ ಮಾರ್ಗದರ್ಶನದಲ್ಲಿ ಶಿಬಿರವನ್ನು ಆಯೋಜಿಸಲಾಗಿತ್ತು. ಎಸ್‌ಡಬ್ಲ್ಯುಆರ್‌ಎಂಯು ಹೊಸಪೇಟೆ ಶಾಖೆಯ ಕಾರ್ಯದರ್ಶಿ ಕಾಮ್ರೇಡ್ ವೈ.ವಿ. ಮುರಳಿ ಹಾಗೂ ವೈಯುಆರ್ ಆರ್‌ಬಿಸಿ/ಹೊಸಪೇಟೆಯ ಕಾರ್ಯದರ್ಶಿ ಶ್ರೀ ದೀಪಕ್ ಕೊಳಗದ ಅವರು ಶಿಬಿರದ ಆಯೋಜನೆ ಮತ್ತು ಸಮನ್ವಯದಲ್ಲಿ ಪ್ರಮುಖ ಪಾತ್ರ ವಹಿಸಿದರು.

# ಸ್ವಾತಂತ್ರ್ಯ, ಸಮಾನತೆಯನ್ನು ದೇಶದ ಅಭಿವೃದ್ಧಿಗೆ ಬಳಸಿಕೊಳ್ಳಿ: ಪುಟ್ಟಸ್ವಾಮಿಗೌಡ

• ಉದಯವಾಹಿನಿ ಗೌರಿಬಿದನೂರು:

ದೇಶ ನಮಗೆ ನೀಡಿರುವ ಸ್ವಾತಂತ್ರ್ಯ ಹಾಗೂ ಸಮಾನತೆ ಸ್ವೇಚ್ಛೆಯಾಗಬಾರದು. ಅವುಗಳನ್ನು ದೇಶದ ಅಭಿವೃದ್ಧಿ ಮತ್ತು ಪ್ರಗತಿಗೆ ಪೂರಕವಾಗಿ ಬಳಸಿಕೊಳ್ಳಬೇಕು ಎಂದು ಶಾಸಕ ಕೆ.ಎಚ್.ಪುಟ್ಟಸ್ವಾಮಿಗೌಡಕರೆ ನೀಡಿದರು.

ನಗರದ ನೇತಾಜಿ ಕ್ರೀಡಾಂಗಣದಲ್ಲಿ ರಾಷ್ಟ್ರೀಯ ಹಾಗೂ ನಾಡ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಆಯೋಜಿಸಿದ್ದ 80ನೇ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಧ್ವಜವಂದನೆ ಸ್ವೀಕರಿಸಿ ಮಾತನಾಡಿದರು.

80 ವರ್ಷಗಳ ಹಿಂದೆ ಭಾರತವೂ ಗುಲಾಮಗಿರಿಯ ಸಂಕಷ್ಟದಲ್ಲಿತ್ತು. ದೇಶದ ಸ್ವಾತಂತ್ರ್ಯಕ್ಕಾಗಿ ಮಹಾತ್ಮ ಗಾಂಧೀಜಿ ಅವರ ಮಾರ್ಗದರ್ಶನದಲ್ಲಿ ಶಾಂತಿಯುತ ಹೋರಾಟ ನಡೆದರೆ, ಭಗತ್ ಸಿಂಗ್ ಅವರಂತಹ ಕ್ರಾಂತಿಕಾರಿಗಳು ಉಗ್ರ ಹೋರಾಟದ ಮೂಲಕ ಬ್ರಿಟಿಷರ ವಿರುದ್ಧ ಸೆಣಸಿದರು.

ಅಸಂಖ್ಯಾತ ಹೋರಾಟಗಾರರು ದೇಶಕ್ಕಾಗಿ ಪ್ರಾಣ ತ್ಯಾಗ ಮಾಡಿದ್ದಾರೆ. ಅವರ ತ್ಯಾಗ, ಬಲಿದಾನ ವನ್ನು ಎಂದಿಗೂ ಮರೆಯಬಾರದು ಎಂದು ಹೇಳಿದರು.

ಸ್ವಾತಂತ್ರ್ಯಾನಂತರ ಭಾರತ ಶಿಕ್ಷಣ, ಕೃಷಿ, ಕೈಗಾರಿಕೆ, ತಂತ್ರಜ್ಞಾನ ಹಾಗೂ ಬಾಹ್ಯಾಕಾಶ ಕ್ಷೇತ್ರಗಳಲ್ಲಿ ಅಗಾಧ ಸಾಧನೆ ಮಾಡಿದೆ. ಆದರೂ ದೇಶದ ಅಭಿವೃದ್ಧಿಗೆ ಇನ್ನೂ ಸಾಕಷ್ಟು ಕೆಲಸ ಮಾಡಬೇಕಿದೆ. ಬಹುಸಂಸ್ಕೃತಿಯ ಭಾರತದಲ್ಲಿ ಎಲ್ಲಾ ಜಾತಿ, ಧರ್ಮ ಹಾಗೂ ಸಮುದಾಯದ ಜನರು ಒಗ್ಗಟ್ಟಿನಿಂದ ದುಡಿದಾಗ ಮಾತ್ರ ದೇಶ ಮತ್ತಷ್ಟು ಅಭಿವೃದ್ಧಿಯಾಗಲಿದೆ. ಯುವಕರು ಶ್ರಮ ಮತ್ತು ಬದ್ಧತೆಯಿಂದ ಕಾರ್ಯನಿರ್ವಹಿಸಬೇಕು ಎಂದರು.

ತಹಶೀಲ್ದಾರ್ ಕೆ.ಎಂ. ಅರವಿಂದ್ ಮಾತನಾಡಿ, ಸ್ವಾತಂತ್ರ್ಯ ಚಳವಳಿಯಲ್ಲಿ ಮಹಾತ್ಮ ಗಾಂಧೀಜಿ ಸೇರಿದಂತೆ ಅನೇಕರು ಮಹತ್ವದ ಪಾತ್ರ ವಹಿಸಿದ್ದಾರೆ. ತಾಲ್ಲೂಕಿನ ವಿದುರಾಶ್ವತ್ಥದಲ್ಲೂ ಸ್ವಾತಂತ್ರ್ಯ ಹೋರಾಟದ ಸಂದರ್ಭದಲ್ಲಿ ಜಲಿಯನ್ ವಾಲಾಬಾಗ್ ಮಾದರಿಯ ಹತ್ಯಾಕಾಂಡ ನಡೆದಿದ್ದು, ಈ ನೆಲದ ತ್ಯಾಗವನ್ನು ಸ್ಮರಿಸಬೇಕು ಎಂದರು.


ಉದಯವಾಹಿನಿ ಚಿತ್ರ

> ಸ್ವಾತಂತ್ರ್ಯವಿಲ್ಲದೆ ಬೇರೆಯವರ ಅಡಿಯಾಳಾಗಿ ಬದುಕುವುದು ಅತ್ಯಂತ ಕಷ್ಟ. ಇಂದು ಭಾರತದಲ್ಲಿ ಪ್ರಧಾನಮಂತ್ರಿ ಹಾಗೂ ಮುಖ್ಯಮಂತ್ರಿಗಳನ್ನೂ ಟೀಕಿಸುವಷ್ಟು ಸ್ವಾತಂತ್ರ್ಯವಿದೆ. ಸಂವಿಧಾನ ದೇಶದ ಪ್ರತಿಯೊಬ್ಬ ನಾಗರಿಕನಿಗೂ ಹಲವು ಹಕ್ಕುಗಳನ್ನು ಕಲ್ಪಿಸಿದೆ. ಆದರೆ ವಿಶ್ವದ ಹಲವು ದೇಶಗಳಲ್ಲಿ ಜನರು ಇನ್ನೂ ಗುಲಾಮರಂತೆ ಬದುಕುತ್ತಿದ್ದಾರೆ ಎಂದರು. -ಪುಟ್ಟಸ್ವಾಮಿಗೌಡ

80 ವರ್ಷಗಳ ಪಯಣದಲ್ಲಿ ಭಾರತ ಎಲ್ಲ ಕ್ಷೇತ್ರಗಳಲ್ಲೂ ಮುಂಚೂಣಿಗೆ ಬಂದಿರುವುದು ಹೆಮ್ಮೆಯ ಸಂಗತಿ ಎಂದರು.

# ಒಳ್ಳೆಯ ಮಾರ್ಗದಲ್ಲಿ ನಡೆದಾಗ ಮಾತ್ರ ಜೀವನದಲ್ಲಿ ಸಾರ್ಥಕತೆ ಕಾಣಲು ಸಾಧ್ಯ

• ಉದಯವಾಹಿನಿ ಕಲಬುರಗಿ,

ಮನುಷ್ಯನಾಗಿ ಹುಟ್ಟಿದ ಮೇಲೆ ನಾವು ಒಳ್ಳೆಯ ಸನ್ಮಾರ್ಗದತ್ತ ನಡೆಯಬೇಕು ಜೊತೆಗೆ ಧರ್ಮ, ಆಚರಣೆಯನ್ನು ಮಾಡುವುದನ್ನು ಕಲಿಯಬೇಕು ಅಂದಾಗ ಜೀವನದಲ್ಲಿ ಸಾರ್ಥಕತೆ ಕಾಣಲು ಸಾಧ್ಯವೆಂದು ಶ್ರೀನಿವಾಸ್ ಸರಡಗಿಯ ಡಾ.ರೇವಣಸಿದ್ಧ ಶಿವಾಚಾರ್ಯರು ಹೇಳಿದರು.

ನಗರದ ಶೇಖರೋಜಾ ರಸ್ತೆಯ ಗಂದಿಗುಡಿ ಲೇಔಟ್ ಬಡಾವಣೆಯಲ್ಲಿರುವ ರಮೇಶ ಕಶೆಟ್ಟಿ ಕಮಲಾಪೂರ ಅವರ ಮನೆಯಲ್ಲಿ ಸಿದ್ಧಾಂತ ಶಿಖಾಮಣಿ ಪ್ರವಚನ ವೇದಿಕೆ ಕೇಂದ್ರ ಸಮಿತಿ ಶ್ರಾವಣ ಮಾಸದ ಅಂಗವಾಗಿ ಆಯೋಜಿಸಿದ್ದ ಒಂದು ತಿಂಗಳ ಶಿವಭಕ್ತರ ಮನೆ ಮನೆ ಮನೆಗೆ ಸಿದ್ಧಾಂತ ಶಿಖಾಮಣಿ ಜ್ಞಾನ ಜ್ಯೋತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಜೀವನದಲ್ಲಿ ಏನೇ ಕಷ್ಟ ಬಂದರೂ ಮನುಷ್ಯ ಅದನ್ನು ಎದುರಿಸಬೇಕು ಅಂದಾಗ ಜೀವನದಲ್ಲಿ ನಾವು ಬದುಕಲು ಸಾಧ್ಯ. ನಾವು ಯಾವ ರೀತಿ ನಡೆದರು ಜೀವನದಲ್ಲಿ ಮಾತನಾಡುವುದು ಸಹಜ ಮನುಷ್ಯನ ಅದಕ್ಕೆಲ್ಲ ತಲೆ ಕೆಡಿಸಿಕೊಳ್ಳದೆ ನಡೆ ಮುಂದೆ ನಡೆ ಮುಂದೆ ಅನ್ನೋ ಹಾಗೆ ಮುಂದಿನ ಹಾದಿ ಸರಿ ಮಾಡಿಕೊಳ್ಳುತ್ತಾ ಹೋಗಬೇಕು.

ಮನುಷ್ಯ ಧರ್ಮದ ಬಗ್ಗೆ ಕೆಟ್ಟದಾಗಿ ಮಾತನಾಡಿದರೆ ಅವರ ಬಗ್ಗೆ ನಾವು ತಲೆಕೆಡಿಸಿಕೊಳ್ಳಬಾರದು ಅವನ ಬುದ್ಧಿ ಅಷ್ಟೇ ಅಂತ ತಿಳಿದು ನಡೆಯಬೇಕು ಅಂದಾಗ ನಾವು ಸಮಾಜದಲ್ಲಿ ಮುಂದೆ ಸಾಗಲು ಸಾಧ್ಯವೇ ಎಂದು ಹೇಳಿದರು.ದಿವ್ಯ ಸಾನಿಧ್ಯ ವಹಿಸಿದ ಚಿಂಚನಸೂರಿನ ಸಿದ್ದಮಲ್ಲ ಶಿವಾಚಾರ್ಯರು ತಮ್ಮ ಆಶೀರ್ವಚನ ನೀಡಿದರು.

# ಆಂಧ್ರಪ್ರದೇಶದತ್ತ ಹರಿಯುತ್ತಿದ್ದ ನೀರು ತಡೆದ ಬಳ್ಳಾರಿ ರೈತರು!

## ಜಲಾಶಯದಿಂದ ನೀರು ಬಿಡುಗಡೆ ಮತ್ತು ಹಂಚಿಕೆ ಪ್ರತಿ ವರ್ಷವೂ ಸೂಕ್ಷ್ಮ ವಿಚಾರವಾಗಿರುತ್ತದೆ

• ಉದಯವಾಹಿನಿ ಬಳ್ಳಾರಿ:

ತುಂಗಭದ್ರಾ ಜಲಾಶಯದ ನೀರು ಹಂಚಿಕೆ ವಿಚಾರದಲ್ಲಿ ಕರ್ನಾಟಕ ಮತ್ತು ಆಂಧ್ರಪ್ರದೇಶದ ನಡುವೆ ಮತ್ತೆ ಅಸಮಾಧಾನ ಭುಗಿಲೆದ್ದಿರುವ ಬೆನ್ನಲ್ಲೇ, ಬಳ್ಳಾರಿ ಜಿಲ್ಲೆಯ ರೈತರು ಆಂಧ್ರಪ್ರದೇಶದತ್ತ ಹರಿಯುತ್ತಿದ್ದ ನೀರನ್ನು ತಡೆದಿದ್ದಾರೆ ಎನ್ನಲಾಗಿದೆ.

ತುಂಗಭದ್ರಾ ಜಲಾಶಯವು ಕರ್ನಾಟಕದ ಬಳ್ಳಾರಿ, ವಿಜಯನಗರ, ಕೊಪ್ಪಳ ಹಾಗೂ ರಾಯಚೂರು ಜಿಲ್ಲೆಗಳ ರೈತರ ಪಾಲಿಗೆ ಪ್ರಮುಖ ನೀರಾವರಿ ಮೂಲವಾಗಿದ್ದು, ಆಂಧ್ರ

1 : ನೀರು ಬಿಡುಗಡೆಗೆ ರೈತರ ಆಕ್ರೋಶ
2 : ಮೂರು ರಾಜ್ಯಗಳಿಗೂ ಜೀವನಾಡಿ
3 : 90 ದಿನಗಳ ಕಾಲ ನೀರು ಹರಿಸಲು

ಪ್ರದೇಶ ಮತ್ತು ತೆಲಂಗಾಣದ ಕೃಷಿ ಪ್ರದೇಶಗಳಿಗೂ ನೀರು ಪೂರೈಸುತ್ತದೆ. ಹೀಗಾಗಿ ಜಲಾಶಯದಿಂದ ನೀರು ಬಿಡುಗಡೆ ಮತ್ತು ಹಂಚಿಕೆ ಪ್ರತಿ ವರ್ಷವೂ ಸೂಕ್ಷ್ಮ ವಿಚಾರವಾಗಿರುತ್ತದೆ.

ಆಗಸ್ಟ್ 11ರಂದು ನಡೆದ 126ನೇ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ಲಭ್ಯವಿರುವ ನೀರಿನ ಪ್ರಮಾಣವನ್ನು ಆಧರಿಸಿ ವಿವಿಧ ಕಾಲುವೆಗಳಿಗೆ 90 ದಿನಗಳ ಕಾಲ ನೀರು ಹರಿಸಲು ನಿರ್ಧರಿಸಲಾಗಿತ್ತು. ಜಲಾಶಯದಲ್ಲಿ ಸುಮಾರು 82 ಟಿಎಂಸಿ ನೀರು ಸಂಗ್ರಹವಿದ್ದು, ಮುಂದಿನ ದಿನಗಳಲ್ಲಿ ಸುಮಾರು 16 ಟಿಎಂಸಿ ನೀರು ಒಳಹರಿವಾಗುವ ನಿರೀಕ್ಷೆ ಇದೆ ಎಂದು ಸಭೆಯಲ್ಲಿ ಅಂದಾಜಿಸಲಾಗಿತ್ತು. ಸಭೆಯ ನಿರ್ಧಾರದಂತೆ ಎಡದಂಡೆ ಹಾಗೂ ಬಲದಂಡೆಯ ವಿವಿಧ ಕಾಲುವೆಗಳಿಗೆ ನೀರು ಹರಿಸಲಾಗುತ್ತಿದೆ. ಆದರೆ ಕರ್ನಾಟಕ ಮತ್ತು ಆಂಧ್ರಪ್ರದೇಶಕ್ಕೆ ಸಂಬಂಧಿಸಿದ ನೀರಿನ ಹಂಚಿಕೆ ಹಾಗೂ ಆಂಧ್ರದ ನೀರಿನ ಬೇಡಿಕೆ ಸಲ್ಲಿಕೆ (ಇಂಡೆಂಟ್) ವಿಚಾರದಲ್ಲಿ ಗೊಂದಲ ಉಂಟಾಗಿದೆ ಎಂದು ವರದಿಯಾಗಿದೆ. ಇದರಿಂದ ಕರ್ನಾಟಕದ ಅಚ್ಚುಕಟ್ಟು ಪ್ರದೇಶದ ರೈತರಲ್ಲಿ ಅಸಮಾಧಾನ ಹೆಚ್ಚಾಗಿದೆ. ಕರ್ನಾಟಕ-ಆಂಧ್ರಪ್ರದೇಶ ಗಡಿಯಿಂದ ಸುಮಾರು 155 ಕಿಲೋಮೀಟರ್ ಕೆಳಭಾಗದಲ್ಲಿರುವ ತುಂಗಭದ್ರಾ ನಾಲೆ ಬಳಿ ರೈತರು ಮರಳು ಚೀಲಗಳನ್ನು ಹಾಕಿ ನೀರಿನ ಹರಿವನ್ನು ತಡೆಹಿಡಿದಿದ್ದು, ಆಂಧ್ರ ಪ್ರದೇಶ ರೈತರು ಮತ್ತು ನಾವು ಸಹೋದರರಂತಿದ್ದು, ಮುಂದಿನ ದಿನಗಳಲ್ಲಿ ಪೂರಕ ವಾತಾವರಣವಿದ್ದರೆ ಮತ್ತು ಅಗತ್ಯ


ಉದಯವಾಹಿನಿ ಚಿತ್ರ

> ತುಂಗಭದ್ರಾ ಜಲಾಶಯದ ನೀರಿನ ಮೇಲೆ ಬಳ್ಳಾರಿ ಸೇರಿದಂತೆ ಕರ್ನಾಟಕದ ಹಲವು ಜಿಲ್ಲೆಗಳ ರೈತರು ಹೆಚ್ಚಿನ ಪ್ರಮಾಣದಲ್ಲಿ ಅವಲಂಬಿತರಾಗಿದ್ದಾರೆ. ಈ ಬಾರಿ ನೀರಿನ ಲಭ್ಯತೆ, ಮಳೆ ಹಾಗೂ ಮುಂದಿನ ಒಳಹರಿವಿನ ಬಗ್ಗೆ ಅನಿಶ್ಚಿತತೆ ಇರುವ ಹಿನ್ನೆಲೆಯಲ್ಲಿ, ಕರ್ನಾಟಕದ ಪಾಲಿನ ನೀರನ್ನು ಸಮರ್ಪಕವಾಗಿ ಸಂರಕ್ಷಿಸಬೇಕು ಎಂಬುದು ರೈತರ ಪ್ರಮುಖ ಬೇಡಿಕೆಯಾಗಿದೆ. -ರೈತರು

> ಬಳ್ಳಾರಿ ಭಾಗದ ರೈತರು ತಮ್ಮ ಬೆಳೆಗಳಿಗೆ ಸಮರ್ಪಕ ನೀರು ಸಿಗಬೇಕು ಎಂದು ಹಲವು ದಿನಗಳಿಂದ ಒತ್ತಾಯಿಸುತ್ತಿದ್ದಾರೆ. ಈ ನಡುವೆ ಆಂಧ್ರಪ್ರದೇಶದತ್ತ ನೀರು ಹರಿಯುತ್ತಿರುವುದನ್ನು ವಿರೋಧಿಸಿ ಕೆಲ ರೈತರು ನೀರಿನ ಹರಿವನ್ನು ತಡೆದಿದ್ದಾರೆ. ಈ ಬೆಳವಣಿಗೆ ಇದೀಗ ಚರ್ಚೆಗೆ ಕಾರಣವಾಗಿದೆ. -ರೈತರು

### ಕುಡಿಯುವ ನೀರಿಗೆ ಆದ್ಯತೆ

ಇತ್ತೀಚಿನ ವರದಿಗಳ ಪ್ರಕಾರ, ತುಂಗಭದ್ರಾ ಯೋಜನೆಯ ನೀರಿನ ಹಂಚಿಕೆಯಲ್ಲಿ ಆಂಧ್ರಪ್ರದೇಶಕ್ಕೆ 30 ಟಿಎಂಸಿ ಹಾಗೂ ತೆಲಂಗಾಣಕ್ಕೆ 3 ಟಿಎಂಸಿ ನೀರನ್ನು ಮೀಸಲಿಡಲಾಗಿದೆ. ಕುಡಿಯುವ ನೀರಿಗೆ ಆದ್ಯತೆ ನೀಡುವುದರ ಜೊತೆಗೆ ಡೆಡ್ ಸ್ಟೋರೇಜ್‌ಗಾಗಿ 2 ಟಿಎಂಸಿ ನೀರನ್ನು ಕಾಯ್ದಿರಿಸಲಾಗಿದೆ ಎಂದು ವರದಿಗಳು ತಿಳಿಸಿವೆ.

ಜಲಾಶಯಕ್ಕೆ ಹೆಚ್ಚಿನ ನೀರು ಬಂದರೆ ನಾವೇ ಚೀಲಗಳನ್ನು ತೆಗೆದು ಅವರಿಗೆ ನೀರು ಹರಿಯುವಂತೆ ಮಾಡುತ್ತೇವೆ ಎಂದು ಹೇಳಿದ್ದಾರೆ. ತುಂಗಭದ್ರಾ ಜಲಾಶಯವು ಕರ್ನಾಟಕ ಮಾತ್ರವಲ್ಲದೆ ಆಂಧ್ರಪ್ರದೇಶ ಮತ್ತು ತೆಲಂಗಾಣದ ಕೃಷಿಗೂ ಪ್ರಮುಖ ಆಧಾರವಾಗಿದೆ. ಸುಮಾರು 15 ಲಕ್ಷ ಎಕರೆ ಪ್ರದೇಶಕ್ಕೆ ವಿವಿಧ ಕಾಲುವೆಗಳ ಮೂಲಕ ನೀರಾವರಿ ಸೌಲಭ್ಯ ಒದಗಿಸುವ ಈ ಯೋಜನೆಯ ನೀರಿನ ನಿರ್ವಹಣೆ ಮೂರು ರಾಜ್ಯಗಳ ಸಹಕಾರದೊಂದಿಗೆ ನಡೆಯಬೇಕಾಗಿದೆ. ಈ ಹಿನ್ನೆಲೆಯಲ್ಲಿ ಬಳ್ಳಾರಿ ರೈತರು ಆಂಧ್ರದತ್ತ ಹರಿಯುತ್ತಿದ್ದ ನೀರನ್ನು ತಡೆದಿದ್ದಾರೆ ಎನ್ನಲಾದ ಬೆಳವಣಿಗೆ ಮುಂದಿನ ದಿನಗಳಲ್ಲಿ ಯಾವ ಸ್ವರೂಪ ಪಡೆಯಲಿದೆ ಎಂಬುದು ಕುತೂಹಲ ಮೂಡಿಸಿದೆ. ನೀರು ಹಂಚಿಕೆ ವಿಚಾರದಲ್ಲಿ ರಾಜ್ಯಗಳ ನಡುವೆ ಮತ್ತೆ ಸಂಘರ್ಷ ಉಂಟಾಗದಂತೆ ಅಧಿಕಾರಿಗಳು ರೈತರ ಅಸಮಾಧಾನವನ್ನು ಪರಿಹರಿಸುವ ಅಗತ್ಯ ಎದುರಾಗಿದೆ.